₹ 4 | ಪುಟ: 4 | ಸಂಪುಟ: 4 | ಸಂಚಿಕೆ 52 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 52 | Sunday, 09, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ನಂದಿನಿ ಬ್ರ್ಯಾಂಡ್ ಹಾಳುಗೆಡವಲು ವ್ಯವಸ್ಥಿತ ಸಂಚು

## ಅಮುಲ್ ವಿರುದ್ಧ ಕುಮಾರಸ್ವಾಮಿ ಆಕ್ರೋಶ

ಬೆಂಗಳೂರು: ಗುಜರಾತಿನ ಅಮುಲ್ ರಾಜ್ಯದ ಹಾಲು ಉತ್ಪಾದಕರ ಅನ್ನ ಕಸಿದುಕೊಳ್ಳುತಿದೆ, ನಂದಿನಿ ಬ್ರ್ಯಂಡ್ ಹಾಳುಗೆಡವಲು ವ್ಯವಸ್ಥಿತ ಸಂಚು ನಡೆಸುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಸರಣಿ ಟ್ವೀಟ್ ಮಾಡಿರುವ ಅವರು, ಕರ್ನಾಟಕ ಋಣಿಯಾಗಿರಬೇಕಾದ ಅಮುಲ್, ಕೆ-ಎಂಎಫ್ ಗೆ ಅನಾರೋಗ್ಯಕರ ಪೈಪೋಟಿ ಸಹಕಾರ ಒಡ್ಡುವ ಮೂಲಕ ಸಹಕಾರ ವ್ಯವಸ್ಥೆಯನ್ನು ಹಾಳು ಮಾಡುತ್ತಿದೆ ಎಂದು ಕಿಡಿ ಕಾರಿದ್ದಾರೆ.

ಕನ್ನಡಿಗರ ಜೀವನಾಡಿ ನಂದಿನಿಯನ್ನು ಮುಗಿಸಲು ಈಗ ನಡೆದಿದೆ 3ನೇ ಸಂಚು ನಡೆದಿದೆ. ಅಮುಲ್ ಜತೆ ನಂದಿನಿ ವಿಲೀನ ಮಾಡುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿಕೆ ಮೊದಲ ಸಂಚು, ಮೊಸರು ಪಾಕೆಟ್ ಮೇಲೆ ಹಿಂದಿಯ 'ದಹಿ' ಪದ ಮುದ್ರಣ ಎರಡನೇ ಸಂಚು. ಕನ್ನಡಿಗರ ತೀವ್ರ ವಿರೋಧದಿಂದ ಎರಡೂ ಸಂಚುಗಳು ವಿಫಲವಾಗಿವೆ. 3ನೇ ಸಂಚು ಸಫಲಗೊಳಿಸಲು ಅಮುಲ್ ಮೂಲಕ ಕೇಂದ್ರ ಸರಕಾರ ಹೊರಟಿದೆ ಎಂದು ಅವರು ಕಟುವಾಗಿ ಟೀಕಿಸಿದ್ದಾರೆ.

ತನ್ನ ಏಕೈಕ ಪ್ರತಿಸ್ಪರ್ಧಿ ನಂದಿನಿಗೆ ಕರ್ನಾಟಕದಲ್ಲೇ ಅಡ್ಡಿ ಮಾಡಬೇಕೆನ್ನುವುದು ಅಮುಲ್ ದುರಾಲೋಚನೆ. ' ಒಂದು ದೇಶ, ಒಂದು ಅಮುಲ್, ಒಂದೇ ಹಾಲು, ಒಂದೇ ಗುಜರಾತ್' ಎನ್ನುವುದು ಕೇಂದ್ರ ಸರಕಾರದ ಅಧಿಕೃತ ನೀತಿಯಂತಿ-ದೆ. ಅದಕ್ಕೆ ಅಮುಲ್'ಗೆ ಒತ್ತಾಸೆಯಾಗಿ ನಿಂತು ಕೆಎಂಎಫ್ ಕತ್ತು ಹಿಚುಕುತ್ತಿದೆ. ಈಗ ಅಮುಲ್ ಹಿಂಬಾಗಿಲ ಮೂಲಕ ಒಳನುಗ್ಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹೈನುಗಾರಿಕೆಯ ಮೂಲ ಉತ್ಪನ್ನ ಹಾಲನ್ನು ತನ್ನ ಬ್ರ್ಯಂಡ್'ನಲ್ಲಿಯೇ ಕರ್ನಾಟಕದಲ್ಲಿಯೇ ಮಾರಲು ಹೊರಟಿರುವ ಅಮುಲ್, ನಂದಿನಿಯನ್ನು ಆಪೋಶನ ತೆಗೆದುಕೊಳ್ಳುವುದು ಖಚಿತ. ವಿಲೀನಕ್ಕೆ, ಹಿಂದಿ ಹೇರಿಕೆಗೆ ಪ್ರಬಲ ಪ್ರತಿ-ರೋಧ ಒಡ್ಡುತ್ತಿರುವ ಕನ್ನಡಿಗರು ಮತ್ತು ಕೆಎಂಎಫ್'ನ ಕಥೆ ಮುಗಿಸಲೇಬೇಕು ಎಂದು ಅಮುಲ್ ಪಣ ತೊಟ್ಟಂತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.




ಕೆಎಂಎಫ್ ಜತೆ ಅಮುಲ್ ಅನಗತ್ಯ ಸ್ಪರ್ಧೆ ನಡೆಸಿ ದಿನದಿಂದ ದಿನಕ್ಕೆ ನಂದಿನಿಯನ್ನು ತುಳಿಯುವ ಹುನ್ನಾರ ನಡೆಸುತ್ತಿದೆ, ಇದು ಸ್ಪಷ್ಟ. ಸಹಕಾರಿ ಕ್ಷೇತ್ರದ ಪ್ರಸಿದ್ಧ ಸೋದರ ಸಂಸ್ಥೆಗಳ ನಡುವೆ ಅನಾರೋಗ್ಯಕರ ಪೈಪೋಟಿ ಯಾರಿಗೂ ಹಿತವಲ್ಲ.ಕೆಎಂಎಫ್ ರಾಜ್ಯದ ಸಾವಿರಾರು ಗ್ರಾಮಗಳ ಸಹಕಾರ ಸಂಘಗಳ ಮೂಲಕ ರೈತರಿಂದಲೇ ಹಾಲನ್ನು ನೇರವಾಗಿ ಖರೀದಿಸುತ್ತದೆ. ಬಿಜೆಪಿ ಡಬಲ್ ಎಂಜನ್ ಸರಕಾರ ನಮ್ಮ ರಾಜ್ಯದ ಹಾಲು ಉತ್ಪಾದಕರನ್ನು ಬೀದಿಗೆ ತಳ್ಳಿ ಗುಜರಾತಿಗಳ ಗುಲಾಮರನ್ನಾಗಿ ಮಾಡುವ ಹುನ್ನಾರ ನಡೆಸಿರುವುದು ಸ್ಪಷ್ಟ. ಇದುರೆಗೂ ಇಷ್ಟೆಲ್ಲಾ ಆದರೂ ರಾಜ್ಯ ಬಿಜೆಪಿ ಸರಕಾರದ ದಿವ್ಯಮೌನ, ಕೆಎಂಎಫ್ ನಿಷ್ಕ್ರಿಯತೆ ಹಲವು ಅನುಮಾನಗಳಿಗೆ ಕಾರಣವಾಗಿದೆ ಇಂದು ಮಾಜಿ ಮುಖ್ಯಮಂತ್ರಿಗಳು ಹೇಳಿದ್ದಾರೆ.

ಗುಜರಾತಿನಲ್ಲಿ ಎಂದೂ ಕೆಎಂಎಫ್ ಹಾಲು ಮಾರಿದ್ದಿಲ್ಲ. ಅದು ಅಮುಲ್ ನ ಸ್ಥಳೀಯ ಮಾರುಕಟ್ಟೆ ಹಿತ, ಸಹಕಾರಿ ತತ್ವವನ್ನು ಗೌರವಿಸಿದೆ. ಹಾಲು ಸಮೃದ್ಧಿ ಇರುವ ಯಾವುದೇ ಮಹಾಮಂಡಳದ ಸ್ಥಳೀಯ ವ್ಯಾಪ್ತಿಯಲ್ಲಿ ಕೆಎಂಎಫ್ ತನ್ನ ಹಾಲನ್ನು ಮಾರಲ್ಲ. ಕರ್ನಾಟಕ ನೈಜ ಸಹಕಾರ ತತ್ತ್ವ ನಂಬಿದ್ದರೆ, ಗುಜರಾತ್ ಅಸಹಕಾರವನ್ನೇ ನಂಬಿದೆ.

ಕನ್ನಡಿಗರಿಗೆ ಅಮುಲ್ ಋಣಿ ಇರಬೇಕು. ಹೆಚ್.ಡಿ.ದೇವೇಗೌಡರು ಪ್ರಧಾನಿ ಆಗಿದ್ದಾಗ, ಹೆಚ್.ಡಿ.ರೇವಣ್ಣ ಅವರು ಕೆಎಂಎಫ್ ಅಧ್ಯಕ್ಷರಾಗಿದ್ದಾಗ ಯಲಹಂಕ ಮದರ್ ಡೈರಿಯಲ್ಲಿ ವಿಶೇಷ ಐಸ್ ಕ್ರೀಮ್ ಘಟಕ ಸ್ಥಾಪಿಸಿ, ಈ ಘಟಕದಿಂದ ದಶಕಗಳಿಂದ ನಿತ್ಯವೂ ಕೆಎಂಎಫ್ ದೊಡ್ಡ ಪ್ರಮಾಣದಲ್ಲಿ ಅಮುಲ್ ಬ್ರ್ಯಂಡ್ ಐಸ್'ಕ್ರೀಮ್ ತಯಾರಿಸಿ ಈಗಲೂ ಕೊಡುತ್ತಿದೆ ಎಂದು ಮಾಹಿತಿ ನೀಡಿರುವ ಅವರು, ರಾಜ್ಯ ಸರಕಾರವು ಗುಜರಾತ್ ಹಾಲು ಮಹಾಮಂಡಳಿ ಅಮುಲ್'ಗೆ ಬೆಂಗಳೂ-ರಿನ ಕೋರಮಂಗಲದಲ್ಲಿ ಅತೀ ಕಡಿಮೆ ದರಕ್ಕೆ ಬೆಲೆ ಬಾಳುವ ಬೃಹತ್ ಜಾಗ ನೀಡಿದೆ. ಇಷ್ಟು ಔದಾರ್ಯ ತೋರಿದ ಕರ್ನಾಟಕ ಹಾಲು ಉತ್ಪಾದಕರು ಮತ್ತು ಕೆಎಂಎಫ್'ಗೆ ದೊಡ್ಡ ಖೆಡ್ಡಾ ತೋಡಲು ಅಮುಲ್ ಹೊರಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕನ್ನಡಿಗರಾದ ನಾವು ತಕ್ಷಣ ಎಚ್ಚೆತ್ತು ನಂದಿನಿಯನ್ನೇ ಅವಲಂಬಿಸಿರುವ ರಾಜ್ಯದ ರೈತರ ಹಿತವನ್ನು ಆದ್ಯತೆಯಲ್ಲಿ ರಕ್ಷಿಸಿ ಉಳಿಸಿಕೊಳ್ಳಬೇಕು. ನಮ್ಮ ಜನತೆ -ಗ್ರಾಹಕರು ನಂದಿನಿ ಉತ್ಪನ್ನಗಳನ್ನಷ್ಟೇ ಆದ್ಯತೆಯ ಮೇರೆಗೆ ಬಳಸಿ ರಾಜ್ಯದ ರೈತರ ಬದುಕನ್ನು ಕಾಪಾಡಬೇಕು. ಇಲ್ಲಿನ ಡಬಲ್ ಎಂಜಿನ್ ಬಿಜೆಪಿ ಸರಕಾರ ಈಗಲಾದರೂ ಎಚ್ಚೆತ್ತು ತಕ್ಷಣ ರಾಜ್ಯದಲ್ಲಿ ಅಮುಲ್'ನ ಪ್ಯಾಕೆಟ್ ಹಾಲಿನ ಮಾರಾಟಕ್ಕೆ ತಡೆ ಒಡ್ಡಬೇಕು. ಕೇಂದ್ರದ ಒತ್ತಾಸೆಯಿಂದ ಅಮುಲ್ ಕದ್ದುಮುಚ್ಚಿ ಹಿಂಬಾಗಿಲ ಮೂಲಕ ಬರುತ್ತಿದೆ. ಕೆ-ಎಂಎಫ್ ಮತ್ತು ರೈತರ ಕುತ್ತಿಗೆಗೆ ಕುಣಿಕೆ ಬಿಗಿಯುತ್ತಿರುವ ಅಮುಲ್ ವಿರುದ್ಧ ಕನ್ನಡಿಗರು ಸಿಡಿದೇಳಬೇಕು ಎಂದಿದ್ದಾರೆ.

## ಖ್ಯಾತ ನಟಿಯ ಕುಟುಂಬಕ್ಕೆ ಸೇರಿದ ಕಾರಿನಲ್ಲಿದ್ದ 66 ಕೆಜಿ ಬೆಳ್ಳಿ ಜಪ್ತಿ



ದಾವಣಗೆರೆ: ಖ್ಯಾತ ನಟಿಯೊಬ್ಬರ ಪತಿಯ ಕುಟುಂಬಕ್ಕೆ ಸೇರಿದ ಬಿಎಂಡಬ್ಲ್ಯು ಕಾರಿನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 66 ಕೆಜಿ ಬೆಳ್ಳಿ ಸಾಮಾಗ್ರಿಗಳನ್ನು ದಾವಣಗೆರೆ ತಾಲೂಕಿನ ಹೆಬ್ಬಾಳ ಟೋಲ್ ಬಳಿ ಚುನಾವಣಾಧಿಕಾರಿಗಳು ಮತ್ತು ತಹಶೀಲ್ದಾರ್ ಜಪ್ತಿ ಮಾಡಿದ್ದಾರೆ.

ಚುನಾವಣಾಧಿಕಾರಿ, ತಹಶೀಲ್ದಾರ್ ಡಾ.ಅಶ್ವತ್ಥ್ ತಪಾಸಣೆ ನಡೆಸುತ್ತಿದ್ದಾಗ ಬಿಎಂಡಬ್ಲ್ಯು ಕಾರೊಂದನ್ನು ತಡೆದು ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಬಾಕ್ಸ್‌ಗಳು ಪತ್ತೆಯಾಗಿದ್ದು, ಇನ್ನಷ್ಟು ತಪಾಸಣೆ ನಡೆಸಿದಾಗ ಅದರೊಳಗೆ ಬೆಳ್ಳಿ ಸಾಮಾಗ್ರಿಗಳು ಪತ್ತೆಯಾಗಿವೆ. ಅವುಗಳ ಒಟ್ಟು ಮೌಲ್ಯ 39 ಲಕ್ಷ ಎನ್ನಲಾಗಿದೆ. ಸದ್ಯ 66 ಕೆಜಿ ಬೆಳ್ಳಿ ಹಾಗೂ ಬಿಎಂಡಬ್ಲ್ಯು ಕಾರು ವಶಕ್ಕೆ ಪಡೆದು ತನಿಖೆ ನಡೆಸಲಾಗುತ್ತಿದ್ದು, ಈ ಸ್ವತ್ತುಗಳು ಖ್ಯಾತ ನಟಿಯೊಬ್ಬರ ಪತಿಯ ಕುಟುಂಬಕ್ಕೆ ಸೇರಿದ್ದು ಎಂದು ತಿಳಿದುಬಂದಿದೆ.

ಖ್ಯಾತ ನಟಿ ದಿವಂಗತ ಶ್ರೀದೇವಿ ಪತಿಯೂ ಆಗಿರುವ ಚಿತ್ರ ನಿರ್ಮಾಪ ಬೋನಿ ಕಪೂರ್ ಕುಟುಂಬಕ್ಕೆ ಸೇರಿದ ಕಾರು ಮತ್ತು ಬೆಳ್ಳಿ ಇದಾಗಿದೆ. ಆದರೆ ಚೆಕ್ಪೋಸ್ಟ್‌ನಲ್ಲಿ ತಪಾಸಣೆ ನಡೆಸುತ್ತಿದ್ದಾಗ ಬೋನಿ ಕಪೂರ್ ಕುಟುಂಬಸ್ಥರು ಇರಲಿಲ್ಲ. ಈ ಬಗ್ಗೆ ಮಾಹಿತಿ ನೀಡಿದ ತಹಶೀಲ್ದಾರ್ ಡಾ. ಅಶ್ವಥ್, ಜಪ್ತಿ ಮಾಡಿದ ಬೆಳ್ಳಿ ವಸ್ತುಗಳು ಮತ್ತು ಕಾರು ಬೋನಿ ಕಪೂರ್ ಅವರ ಕುಟುಂಬಕ್ಕೆ ಸೇರಿದ್ದಾಗಿದೆ ಎಂದರು.

## ಮದ್ಯದ ಅಮಲಿನಲ್ಲಿ ವಿಮಾನದ ಎಕ್ಸಿಟ್ ಡೋರ್ ತೆಗೆಯಲು ಯತ್ನಿಸಿದ ಪ್ರಯಾಣಿಕನ ಬಂಧನ



ಬೆಂಗಳೂರು: ಮದ್ಯದ ಅಮಲಿನಲ್ಲಿ ಸಹ ಪ್ರಯಾಣಿಕನ ಜೊತೆ ಕಿರಿಕ್ ನಡೆಸಿ ವಿಮಾನದ ಫ್ಲಾಪ್ ಆಫ್ ದಿ ಓವರ್ ವಿಂಗ್ ಎಕ್ಸಿಟ್ ಡೋರ್ ತೆಗೆಯಲು ಯತ್ನಿಸಿದ ಘಟನೆ ದೆಹಲಿಯಿಂದ ಬೆಂಗಳೂರಿಗೆ ಬರುತ್ತಿದ್ದ ಇಂಡಿಗೋ ವಿಮಾನದಲ್ಲಿ ನಡೆದಿದೆ.

ಹೌದು ಕುಡಿದ ನಶೆಯಲ್ಲಿ ಪ್ರತೀಕ್ ಎಂಬುವವನು ಸಹ ಪ್ರಯಾಣಿಕನ ಜೊತೆ ಜಗಳ ಮಾಡಿ, ಎಕ್ಸಿಟ್ ಡೋರ್ ತೆಗೆಯಲು ಯತ್ನಿಸಿದ್ದಾನೆ. ಇತನ ವರ್ತನೆಯಿಂದ ವಿಮಾನದಲ್ಲಿದ್ದ ಸಹ ಪ್ರಯಾಣಿಕರು ಬೆಚ್ಚಿಬಿದ್ದಿದ್ದಾರೆ. ಬಳಿಕ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬರುತ್ತಿದ್ದಂತೆ ಆತನನ್ನ ಬಂಧಿಸಲಾಗಿದೆ.

## ಪ್ರೀತಿಸಿದ ಹುಡುಗನಿಗಾಗಿ ನಿಶ್ಚಿತಾರ್ಥ ಮಾಡಿಕೊಂಡ ಯುವಕನ ಕುತ್ತಿಗೆಗೆ ಇರಿದ ಅಪ್ರಾಪ್ತೆ

ಹಾವೇರಿ: ಪ್ರೀತಿಸಿದ ಹುಡುಗನಿಗಾಗಿ ನಿಶ್ಚಿತಾರ್ಥ ಮಾಡಿಕೊಂಡಿದ್ದ ಯುವಕನ ಕುತ್ತಿಗೆಗೆ ಅಪ್ರಾಪ್ತ ವಯಸ್ಸಿನ ಯುವತಿ ಚಾಕು ಇರಿದಿರುವ ಘಟನೆ ಜಿಲ್ಲೆಯ ರಾಣೇಬೆನ್ನೂರಿನಲ್ಲಿ ನಡೆದಿದೆ.

ಬಾವಿ ಪತಿಯನ್ನು ಪಾರ್ಕ್ ಗೆ ಕರೆದ ಅಪ್ರಾಪ್ತ ಬಾಲಕಿ, ಗಿಫ್ಟ್ ಕೊಡುವ ನೆಪದಲ್ಲಿ ಯುವಕನಿಗೆ ಶಿಲುಬೆ ಥರ ಕೈ ಕಟ್ಟಿಕೊಂಡು ಇರಲು ಹೇಳಿದ್ದಾಳೆ. ನಂತರ ಯುವಕ ದೇವೇಂದ್ರಗೌಡನ ಕುತ್ತಿಗೆಗೆ ಚಾಕುವಿನಿಂದ ಇರಿದಿದ್ದಾಳೆ. ಇದರಿಂದಾಗಿ ಗಂಭೀರವಾಗಿ ಗಾಯಗೊಂಡಿರುವ ಯುವಕನನ್ನು ದಾವಣಗೆರೆ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

## ನಟಿ ಶ್ರುತಿ ಪ್ರಚೋದನಕಾರಿ ಭಾಷಣ

### ಚುನಾವಣಾ ಆಯೋಗಕ್ಕೆ ದೂರು



ಬೆಂಗಳೂರು: ನಟಿ, ಬಿಜೆಪಿ ನಾಯಕಿ ಶ್ರುತಿ ಪ್ರಚೋದನಕಾರಿ ಭಾಷಣ ಮಾಡಿದ್ದಾರೆಂದು ಜೆಡಿಎಸ್ ಆರೋಪಿಸಿ ಚುನಾವಣಾ ಆಯೋಗಕ್ಕೆ ದೂರು ನೀಡಿದೆ. ಗುರುವಾರ (ಏ.6) ರಂದು ಹಿರೇಕೆರೂರು ಕ್ಷೇತ್ರದಲ್ಲಿ ನಡೆದ ಬಿಜೆಪಿ ಮಹಿಳಾ ಸಮಾವೇಶದಲ್ಲಿ ನಟಿ ಶ್ರುತಿ ಭಾಷಣದ ಭರಾಟೆಯಲ್ಲಿ ಪ್ರಚೋದನಕಾರಿ ಹೇಳಿಕೆ ನೀಡಿದ್ದಾರೆ ಎಂದು ಜೆಡಿಎಸ್ ಆರೋಪ ಮಾಡಿದೆ.

ನಿಮ್ಮ ವಂಶ ಬಿಟ್ಟು, ಬೇರೆ ವಂಶ ಬೆಳೆಯಬೇಕು ಎಂದರೆ ಜೆಡಿಎಸ್ಗೆ ಮತ ಹಾಕಿ ನಿಮ್ಮ ವಂಶ ಬಿಟ್ಟು, ಬೇರೆ ವಂಶ ಬೆಳೆಯಬೇಕು ಎಂದರೆ ಜೆಡಿಎಸ್ಗೆ ಮತ ಹಾಕಿ. ನಿಮ್ಮ ವಂಶ ಬಿಟ್ಟು ಬೇರೆ ದೇಶದ ವಂಶ ಬೆಳೆಯಬೇಕು ಎಂದರೆ ಕಾಂಗ್ರೆಸ್ಗೆ ಮತ ನೀಡಿ.

ದೇಶದ ವಂಶ ಬೆಳೆಯಬೇಕು ಎಂದರೆ ಭಾರತೀಯ ಜನತಾ ಪಾರ್ಟಿ ಗೆ ಮತ ನೀಡಿ ಎಂದು ನಟಿ ಶೃತಿ ಹೇಳಿದ್ದರು.

ಇದಕ್ಕೆ ಜೆಡಿಎಸ್, ನಟಿ ಶೃತಿಯವರು ಪ್ರಚೋದನಕಾರಿ ಭಾಷಣ ಮಾಡಿ ಮತದಾರರನ್ನು ಒಲಿಸಿಕೊಳ್ಳುವ ಯತ್ನ ಮಾಡಿದ್ದಾರೆ. ಈ ಹಿನ್ನೆಲೆ ಅವರ ಮೇಲೆ ಕ್ರಮ ತೆಗೆದುಕೊಳ್ಳಿ ಎಂದು ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

## ಕೋರ್ಟ್ ಆದೇಶದ ಬಳಿಕ ಪಿಎಸ್ಐ ಮರುಪರೀಕ್ಷೆ; ಡಿಜಿಪಿ ಪ್ರವೀಣ ಸೂದ್



ಹುಬ್ಬಳ್ಳಿ: ಕೋರ್ಟ್ ಆದೇಶದ ಬಳಿಕ ಪಿಎಸ್ಐ ಮರು ಪರೀಕ್ಷೆ ನಡೆಸಲಾಗು ವುದು ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಪ್ರವೀಣ ಸೂದ್ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಿಎಸ್ಐ ಮರು ಪರೀಕ್ಷೆ ನಡೆಸಲು ಈಗಾಗಲೇ ಆದೇಶಿಸಿದ್ದೇವೆ. ಕೆಲವರು ನ್ಯಾಯಾಲಯದ ಮೆಟ್ಟಿಲು ಹತ್ತಿರುವುದರಿಂದ ಆದ-'ೇಶ ಬರುವವರೆಗೂ ಪರೀಕ್ಷೆ ನಡೆಸಲು ಬರುವುದಿಲ್ಲ. ಮರು ಪರೀಕ್ಷೆಯಾಗುವ ಬಗ್ಗೆ ನನಗೆ ಭರವಸೆ ಇದೆ ಎಂದರು.

ಯಾವ ದಿನ ತೀರ್ಮಾನ ಬರುತ್ತದೆಯೋ ಅಂದು ದಿನಾಂಕ ನಿಗದಿಪಡಿಸಿ ಮರು ಪರೀಕ್ಷೆ ನಡೆಸಲು ಬದ್ಧರಿದ್ದೇವೆ. ಪಿಎಸ್ಐ ಪರೀಕ್ಷೆ ವೇಳೆ ಯಾರು ರಾಜಿಯಾಗಿದ್ದಾರೋ ಅವರೆಲ್ಲ ಜೈಲಿನಲ್ಲಿದ್ದಾರೆ. ಅವರ ವಿರುದ್ಧ ಕ್ರಮವೂ ಆಗಲಿದೆ ಎಂದು ಭರವಸೆ ನೀಡಿದರು.

## ದಲಿತ ಮಹಿಳೆಯ ಮೇಲೆ ಅತ್ಯಾಚಾರವೆಸಗಿ ಬೆಂಕಿ ಹಚ್ಚಿ ಕೊಲೆ



ಜೈಪುರ: ದಲಿತ ಮಹಿಳೆ ಮೇಲೆ ಅತ್ಯಾಚಾರ ನಡೆಸಿ ಬೆಂಕಿ ಹಚ್ಚಿ ಕೊಲೆಗೈದಿರುವ ಹೃದಯ ವಿದ್ರಾವಕ ಘಟನೆ ರಾಜಸ್ಥಾನದ ಬಾರ್ಮರ್ ಜಿಲ್ಲೆಯಲ್ಲಿ ನಡೆದಿದೆ.

ಆರೋಪಿಯನ್ನು ಶಕೂರ್ ಎಂದು ಗುರುತಿಸಲಾಗಿದೆ. ಗುರುವಾರ ಈ ಘಟನೆ ನಡೆದಿದ್ದು, 30 ವರ್ಷದ ದಲಿತ ಮಹಿಳೆಯ ಮೇಲೆ ಅತ್ಯಾಚಾರ ಎಸಗಿ ಆಕೆಯ ಮೈಮೇಲೆ ರಾಸಾನಿಕಗಳನ್ನು ಸುರಿದು ನಂತರ ಬೆಂಕಿ ಹಚ್ಚಿದ್ದಾನೆ ಎಂದು ಪಚ್ಪದ್ರಾ ಪೊಲೀಸ್ ಠಾಣೆ ಎಸ್‌ಹೆಚ್‌ಓ ರಾಜೇಂದ್ರ ಸಿಂಗ್ ತಿಳಿಸಿದ್ದಾರೆ.

ಆರೋಪಿ ಶಕೂರ್ ಸಂತ್ರಸ್ತೆಯ ಮನೆ ಸಮೀಪ ವಾಸಿಸುತ್ತಿದ್ದು, ಆತನನ್ನು ಬಂಧಿಸಲಾಗಿದೆ. ಮನೆಯಲ್ಲಿ ಯಾರೂ ಇಲ್ಲದ ವೇಳೆ ಮನೆಗೆ ನುಗ್ಗಿದ ಆತ ಆಕೆಯನ್ನು ಅತ್ಯಾಚಾರ ಮಾಡಿ ಮೈಮೇಲೆ ರಾಸಾಯನಿಕ ಸುರಿದು ನಂತರ ಬೆಂಕಿ ಹಚ್ಚಿದ್ದಾನೆ. ಬೆಂಕಿಯಿಂದ ಶೇ. 40ರಷ್ಟು ಸುಟ್ಟ ಗಾಯಗಳಾಗಿರುವ ಮಹಿಳೆಗೆ ಜೋಧ್‌ಪುರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಆಕೆ ಚಿಕಿತ್ಸೆಗೆ ಸ್ಪಂದಿಸಿದೆ ಕೊನೆಯುಸಿರೆಳೆದಿದ್ದಾಳೆ. ಭಾರತೀಯ ದಂಡ ಸಂಹಿತೆ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ (ದೌರ್ಜನ್ಯ ತಡೆ) ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ರಾಜ್ಯದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರುವುದಿಲ್ಲ: ಡಿ.ಕೆ.ಶಿವಕುಮಾರ್ ವ್ಯಂಗ್ಯ

ಬೆಂಗಳೂರು: 'ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಸರ್ಕಾರವನ್ನು ಕಿತ್ತೊಗೆಯಬೇಕು ಎಂದು ರಾಜ್ಯದ ಜನ ತೀರ್ಮಾನಿಸಿದ್ದು, ಬಿಜೆಪಿ ಮತ್ತೆ ಅಧಿಕಾರಕ್ಕೆ ಬರುವುದಿಲ್ಲ ಎಂದು ಅವರ ಪಕ್ಷದ ನಾಯಕರಿಗೇ ಅರಿವಾಗಿದೆ. ಇದೇ ಕಾರಣ-ಕ್ಕೆ ಪದೇ ಪದೆ ಬಿಜೆಪಿ ಕೇಂದ್ರ ನಾಯಕರು ರಾಜ್ಯ ಪ್ರವಾಸ ಮಾಡುತ್ತಿದ್ದಾರೆ' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ವ್ಯಂಗ್ಯವಾಡಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಶನಿವಾರ ಪ್ರತಿಕ್ರಿಯೆ ನೀಡಿದರು. 'ಮೋದಿ ಅವರು ಈ ದೇಶದ ಪ್ರಧಾನಮಂತ್ರಿಗಳು. ಅವರು ಎಷ್ಟು ಬಾರಿಯಾದರೂ ರಾಜ್ಯಕ್ಕೆ ಭೇಟಿ ನೀಡಬಹುದು. ಆದರೆ ಕರ್ನಾಟಕದ ಚುನಾವಣೆ ಸಮಯದಲ್ಲಿ ಪಕ್ಷದ ಪ್ರಚಾರಕ್ಕೆ ಹೆಚ್ಚು ಆಗಮಿಸುತ್ತಿದ್ದು, ಅವರ ಪಕ್ಷ ರಾಜ್ಯದಲ್ಲಿ ಎಷ್ಟು ದುರ್ಬಲವಾಗಿದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಅವರು ಈ ರೀತಿ ಎಲ್ಲ ಪ್ರಯತ್ನ ಮಾಡುತ್ತಾ ಪರೋಕ್ಷವಾಗಿ ಸೋಲನ್ನು ಒಪ್ಪಿಕೊಳ್ಳುತ್ತಿದ್ದಾರೆ. ರಾಜ್ಯದ ಜನರು ಪ್ರಜ್ಞಾವಂತರು. ಮೋದಿ ಅವರು ಎಷ್ಟು ಬಾರಿ ಬಂದರೂ ಜನ ಈಗಾಗಲೇ ಈ ಸರ್ಕಾರ ಕಿತ್ತೊಗೆಯಲು ತೀರ್ಮಾನ ಮಾಡಿದ್ದಾರೆ. ಬಿಜೆಪಿ ಪ್ರಚಾರಕ್ಕೆ ಜನ



ಸೇರುತ್ತಿಲ್ಲ ಎಂದು ಚಿತ್ರ ನಟರನ್ನೂ ಪ್ರಚಾರಕ್ಕೆ ಕರೆಯುತ್ತಿದ್ದಾರೆ.'

**ಆಟೋ ಚಾಲಕರಿಗೆ ಕಿರುಕುಳ:** 'ಇತ್ತೀಚೆಗೆ ಆಟೋ ಚಾಲಕರನ್ನು ನಾನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ಆಲಿಸಿದ್ದೆ. ಪೆಟ್ರೋಲ್, ಡೀಸೆಲ್, ಗ್ಯಾಸ್ ಬೆಲೆ ಏರಿಕೆಯಿಂದ ಅವರ ಬದುಕಿನ ಮೇಲೆ ಬರೆ ಬಿದ್ದಿದೆ. ಚುನಾವಣೆ ಸಮಯದಲ್ಲಿ ಆಟೋ ಚಾಲಕರು ತಮಗೆ ಬೇಕಾದ ಪಕ್ಷದ ಅಭ್ಯರ್ಥಿ ಹಾಗೂ ಕಾರ್ಯಕ್ರಮಗಳನ್ನು ತಮ್ಮ ಆಟೋ ಮೇಲೆ ಹಾಕಿಕೊಂಡು ಪ್ರಚಾರ ಮಾಡುತ್ತಿದ್ದಾರೆ. ಬಹುತೇಕ ಆಟೋ ಚಾಲಕರು ಕಾಂಗ್ರೆಸ್ ಪಕ್ಷದ ಬಗ್ಗೆ ಪ್ರಚಾರ ಮಾಡುತ್ತಿದ್ದಾರೆ. ಆದರೆ ಇಂತಹ ಆಟೋ ಚಾಲಕರ ಮೇಲೆ 5 ಸಾವಿರ ದಂಡ ಹಾಕಲಾಗುತ್ತಿದೆ. ಆಟೋಗಳ ಮೇಲೆ ಪಕ್ಷದ ಪರ ಹಾಕಿಕೊಳ್ಳಬಾರದು ಎಂದು ಯಾವ ಕಾನೂನಿನಲ್ಲಿದೆ? ಆಯೋಗದವರು ಬೇಕಾದರೆ ಆಟೋ ಚಾಲಕರಿಗೆ ಬಾಯಿ ಮಾತಲ್ಲಿ ತಿಳುವಳಿಕೆ ಹೇಳಲಿ. ಆದರೆ ಮೂರ್ನಾಲ್ಕು ದಿನ ಆಟೋ ಮುಟ್ಟುಗೋಲು ಹಾಕಿಕೊಂಡು ದಂಡ ವಿಧಿಸುತ್ತಿರುವುದೇಕೆ? ರಾಜ್ಯದ ಎಲ್ಲ ಆಟೋ ಚಾಲಕರ ಪರವಾಗಿ ನಾವು ನಿಲ್ಲುತ್ತೇವೆ. ಯಾರಿಗೂ ತೊಂದರೆ ನೀಡದಂತೆ ಆಗ್ರಹಿಸುತ್ತೇನೆ. ಅವರನ್ನು ಬಳಸಿಕೊಳ್ಳುತ್ತಿರುವ ಬೇರೆ ಪಕ್ಷದವರು ಅವರ ರಕ್ಷಣೆಗೆ ಬರುತ್ತಿಲ್ಲ. ಆಟೋ ಚಾಲಕರು ಯಾವುದೇ ಪಕ್ಷದ ಪರವಾಗಿ ಬೇಕಾದರೂ ಪ್ರಚಾರ ಮಾಡಲಿ. ಅವರಿಗೆ ಈ ರೀತಿ ಕಿರುಕುಳ ನೀಡಿದರೆ ಅವರ ಪರವಾಗಿ ನಾವು ನಿಲ್ಲುತ್ತೇವೆ. ಆಟೋ ಚಾಲಕರು ನಮ್ಮ ಸಮಾಜಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ. ಅವರು ಧೈರ್ಯವಾಗಿರಬೇಕು. ತಮ್ಮ ಹಕ್ಕು, ವಿಚಾರವನ್ನು ಅವರು ವ್ಯಕ್ತಪಡಿಸುತ್ತಿದ್ದಾರೆ. ನಾನು ಪೊಲೀಸ್ ಆಯುಕ್ತರು ಹಾಗೂ ಚುನಾವಣಾ ಆಯೋಗಕ್ಕೆ ಪತ್ರ ಬರೆದು ಇದಕ್ಕೆ ನಿರ್ಬಂಧ ಹೇರುವ ಕಾನೂನು ಇಲ್ಲ, ಹೀಗಾಗಿ ಆಟೋ ಚಾಲಕರಿಗೆ ಕಿರುಕುಳ ನೀಡಬಾರದು ಎಂದು ಆಗ್ರಹಿಸುತ್ತೇನೆ.'

ಹಲವು ಕ್ಷೇತ್ರಗಳಲ್ಲಿ ಅನೇಕ ಆಕಾಂಕ್ಷಿಗಳಿದ್ದು, ಎಲ್ಲರನ್ನು ಹೇಗೆ ನಿಭಾಯಿಸುತ್ತೀರಿ ಎಂಬ ಪ್ರಶ್ನೆಗೆ, 'ಕಾಂಗ್ರೆಸ್ ಪಕ್ಷ ಸಮುದ್ರವಿದ್ದಂತೆ. ನೂರಾರು ಹೊಳೆ, ನದಿಗಳು ಸೇರುತ್ತವೆ. ಅನೇಕರಿಗೆ ತಾವು ನಾಯಕರಾಗಬೇಕು ಎಂದು ಆಸೆ ಹೊಂದಿರುತ್ತಾರೆ. ಹೀಗಾಗಿ ಕೆಲವರಿಗೆ ಬೇಸರವಾಗಿರುತ್ತದೆ. ಜೆಡಿ-ಎಸ್ ನಿಂದ ಅನೇಕ ಹಾಲಿ ಶಾಸಕರು ಕಾಂಗ್ರೆಸ್ ಪಕ್ಷ ಸೇರುತ್ತಿದ್ದಾರೆ. ನಾಳೆ ಶಿವಲಿಂಗೇಗೌಡರೂ ಕೂಡ ಕಾಂಗ್ರೆಸ್ ಸೇರುತ್ತಿದ್ದಾರೆ' ಎಂದು ತಿಳಿಸಿದರು. ಅಮೂಲ್ ವಿವಾದದ ಬಗ್ಗೆ ಕೇಳಿದಾಗ, 'ನಂದಿನಿ ನಮ್ಮ ರೈತರ ಸಂಸ್ಥೆ. ರಾಜ್ಯದ 80 ಲಕ್ಷ ರೈತರು ಅಧಿಕೃತವಾಗಿ ಸಹಕಾರ ಸಂಸ್ಥೆ ಸದಸ್ಯತ್ವ ಪಡೆದು ಹಾಲು ಉತ್ಪಾದನೆ ಮಾಡುತ್ತಿದ್ದಾರೆ. ಈಗ ಅವರಿಗೆ ಕಡಿಮೆ ಬೆಲೆ ನೀಡುತ್ತಿದ್ದಾರೆ. ಜಾನುವಾರುಗಳ ಮೇವಿನ ಬೆಲೆ ಹೆಚ್ಚಾಗಿದ್ದರೂ ಹಾಲಿನ ದರ ಹೆಚ್ಚಳ ಮಾಡಿ ಅವರಿಗೆ ನೇರವು ನೀಡಲು ಆಗಿಲ್ಲ. ರೈತರ ಆದಾಯ ಡಬಲ್ ಮಾಡುತ್ತೇವೆ ಎಂದು ಹೇಳಿದ್ದ ಬಿಜೆಪಿ ಅದನ್ನು ಮಾಡುತ್ತಿಲ್ಲ. ನಮ್ಮ ನಂದಿನಿ ಸಂಸ್ಥೆಯ ಬ್ರ್ಯಂಡ್ ಗೆ ಏನು ಕಡಿಮೆಯಾಗಿದೆ? ಗುಜರಾತಿನಿಂದ ಇಲ್ಲಿಗೆ ತಂದು ಮಾರಾಟ ಮಾಡುತ್ತಿರುವುದೇಕೆ? ನಮ್ಮ ರೈತ-ರಿಗೆ ನಾವು ಬೆಂಬಲ ಬೆಲೆ ನೀಡಿ ಅವರ ರಕ್ಷಣೆ ಮಾಡಬೇಕಾಗಿದೆ. ಇದೇ ಕಾರಣಕ್ಕೆ ಬಿಜೆಪಿ ಸರ್ಕಾರವನ್ನು ಕಿತ್ತೊಗೆಯಬೇಕು. ಬಿಜೆಪಿ ಸರ್ಕಾರ, ಸಹಕಾರಿ ಸಚಿವ-ರಿಗೆ ಈ ಅಮೂಲ್ ಉತ್ಪನ್ನಗಳ ಅತಿ-ಕ್ರಮಣವನ್ನು ತಡೆಯಲು ಸಾಧ್ಯವಾಗುತ್ತಿಲ್ಲ. ಬಿಜೆಪಿಯವರು ಈ ವಿಚಾರವಾಗಿ ಕೈಗೆ ಬಳೆ ತೊಟ್ಟುಕೊಂಡಿದ್ದಾರೆ' ಎಂದು ವಾಗ್ದಾಳಿ ನಡೆಸಿದರು.

## 1.5 ಕೋಟಿ ಮೌಲ್ಯದ ಕುಕ್ಕರ್-ತವಾ ಸೀಜ್



ಬೆಂಗಳೂರು : ಚುನಾವಣೆ ಸಮಯದಲ್ಲಿ 1.5 ಕೋಟಿ ಮೌಲ್ಯದ ಕುಕ್ಕರ್ ಮತ್ತು ತವಾಗಳನ್ನು ತನಿಕಾಧಿಕಾರಿಗಳು ಸೀಜ್ ಮಾಡಿದ್ದಾರೆ.

ಬ್ಯಾಡರಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ನಿನ್ನೆ ಒಂದೇ ಜಾಗದಲ್ಲಿ ಕುಕ್ಕರ್ ಹಾಗೂ ತವಾ ಸೀಜ್ ಮಾಡಿದ್ದಾರೆ. ದಾಳಿಯಲ್ಲಿ 4,533 ಕುಕ್ಕರ್,10964 ತವಾ ಪತ್ತೆಯಾಗಿದೆ. ಅವುಗಳ ಒಟ್ಟೂ ಮೌಲ್ಯ 1.57.59.672 ಕೋಟಿ ರೂಪಾಯಿ ಎನ್ನಲಾಗಿದೆ. ಆದರೆ ಕುಕ್ಕರ್ ಮತ್ತು ತವಾ ಯಾವ ಪಕ್ಷದ ಅಭ್ಯರ್ಥಿಗೆ ಸೇರಿದ್ದು, ಯಾವ ಊರಿಗೆ ಪೂರೈಕೆ ಆಗುತ್ತಿತ್ತು ಅನ್ನೋ ಮಾಹಿತಿ ತಿಳಿದು ಬಂದಿಲ್ಲ.

## ಮಕ್ಕಳಿಬ್ಬರು ನಾಪತ್ತೆ: ಹುಡುಕಿ ಕೊಡುವಂತೆ ಸಿಎಂಗೆ ಪತ್ರ ಬರೆದ ತಂದೆ

ವಡೋದರಾ (ಗುಜರಾತ್): ವಡೋದರದ ಹರಾನಿ ಪ್ರದೇಶದಲ್ಲಿ ವಾಸಿಸುತ್ತಿದ್ದ 24 ವರ್ಷದ ಅವಳಿ ಸಹೋದರಿಯರು ಕಳೆದ 51 ದಿನಗಳಿಂದ ನಾಪತ್ತೆಯಾಗಿದ್ದಾರೆ.

ಸಾರಿಕಾ ಹಾಗೂ ಶೀತಲ ನಾಪತ್ತೆಯಾದವರು. ತಮ್ಮ ಇಬ್ಬರು ಹೆಣ್ಣುಮಕ್ಕಳನ್ನು ಹುಡುಕಿಕೊಡುವಂತೆ ಇವರ ತಂದೆ ಚಿಮನ್‌ಭಾಯ್ ವಾಂಕರ್ ಎಂಬುವವರು ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ. ಪೊಲೀಸರಿಗೆ ದೂರು ನೀಡಿದರೂ ಸಮಾಧಾನಕರ ಉತ್ತರ ಸಿಗದ ಕಾರಣ ಮುಖ್ಯಮಂತ್ರಿಗೆ ಲಿಖಿತ



ಮನವಿ ಸಲ್ಲಿಸಲಾಗಿದೆ. ಆದಷ್ಟು ಬೇಗ ಹೆಣ್ಣು ಮಕ್ಕಳನ್ನು ಪತ್ತೆ ಮಾಡುವಂತೆ ಮುಖ್ಯಮಂತ್ರಿ ಹಾಗೂ ರಾಜ್ಯ ಗೃಹ ಸಚಿವರಿಗೆ ಅವರು ಮನವಿ ಮಾಡಿದ್ದಾರೆ.

ನಗರದ ಹರಾನಿ ಪ್ರದೇಶದ ಮೋಟ್‌ನಾಥ್ ರೆಸಿಡೆನ್ಸಿಯಲ್ಲಿ ವಾಸಿಸುತ್ತಿದ್ದ ನೇಕಾರ ಕುಟುಂಬದ ಇಬ್ಬರು ಅವಳಿ ಸಹೋದರಿಯರು ದಿಢೀರ್ ನಾಪತ್ತೆಯಾಗಿದ್ದು, ಕುಟುಂಬದವರು ಆತಂಕಕ್ಕೆ ಒಳಗಾಗಿದ್ದಾರೆ. ಇಬ್ಬರ ಪೈಕಿ ಒಬ್ಬ ಸಹೋದರಿ ಎಂಎಸ್ ಯೂನಿವರ್ಸಿಟಿಯಲ್ಲಿ ಓದುತ್ತಿದ್ದರೆ, ಮತ್ತೊಬ್ಬ ಸಹೋದರಿ ಎಸಿಡಿಟಿ ಕಾಲೇಜಿನಲ್ಲಿ ಓದುತ್ತಿದ್ದಳು. ಕಳೆದ ಫೆ.17 ರಂದು ಇಬ್ಬರೂ ಸಹೋದ-ರಿಯರು ಕಾಲೇಜು ವ್ಯಾಸಂಗಕ್ಕೆ ಹೋಗಿದ್ದು, ಸಂಜೆಯಾದರೂ ಮನೆಗೆ ವಾಪಸ್ ಬಂದಿರಲಿಲ್ಲ. ಹೀಗಾಗಿ ಕುಟುಂಬಸ್ಥರು ಭಾರಿ ಹುಡುಕಾಟ ನಡೆಸಿದ್ದಾರೆ. ಇವರ ಬಗ್ಗೆ ಸುಳಿವು ಸಿಗದ ಕಾರಣ ಹರಾನಿ ಪೊಲೀಸ್ ಠಾಣೆ ಮೆಟ್ಟಿಲೇರಿದ್ದರು.



# ಖರ್ಗೆ ಮುಖ್ಯಮಂತ್ರಿಯಾದರೆ ಅವರ ಜತೆ ಕೆಲಸ ಮಾಡಲು ನಾನು ಸಿದ್ಧ: ಡಿ.ಕೆ. ಶಿವಕುಮಾರ್

ಬೆಂಗಳೂರು: ಮಲ್ಲಿಕಾರ್ಜುನ ಖರ್ಗೆ ಅವರು ನನ್ನ ನಾಯಕರು, ಅವರೇ ನನ್ನ ಅಧ್ಯಕ್ಷರು. ಖರ್ಗೆ ಅವರು ನನಗಿಂತ 20 ವರ್ಷಗಳ ಹಿರಿಯರು. ಅವರ ಹಿರಿತನ, ತ್ಯಾಗಕ್ಕೆ ನಾವು ಗೌರವ ನೀಡಬೇಕು. ಒಂದು ವೇಳೆ ಅವರು ಮುಖ್ಯಮಂತ್ರಿಯಾದರೆ ಅವರ ಜತೆ ಕೆಲಸ ಮಾಡಲು ನಾನು ಸಿದ್ಧನಿದ್ದೇನೆ' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಶನಿವಾರ ಮಾತನಾಡಿದ ಡಿ.ಕೆ. ಶಿವಕುಮಾರ್ ಅವರು, 'ಮಲ್ಲಿಕಾರ್ಜುನ ಖರ್ಗೆ ಅವರು ನಮ್ಮ ರಾಜ್ಯ ಹಾಗೂ ದೇಶಕ್ಕೆ ಆಸ್ತಿ. ಪಕ್ಷ ಯಾವ ತೀರ್ಮಾನ ಮಾಡುತ್ತದೆಯೋ ನಾನು ಅದಕ್ಕೆ ಬದ್ಧವಾಗಿರುತ್ತೇನೆ. ಅವರು ಪಕ್ಷಕ್ಕಾಗಿ ಅನೇಕ ತ್ಯಾಗ ಮಾಡಿದ್ದಾರೆ. ಮಧ್ಯರಾತ್ರಿ ತಮ್ಮ ಶಾಸಕಾಂಗ ಪಕ್ಷದ ನಾಯಕತ್ವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಬ್ಲಾಕ್ ಅಧ್ಯಕ್ಷರು ಇಂದು ಎಐಸಿಸಿ ಅಧ್ಯಕ್ಷರಾಗಿದ್ದು ಇದು ಕಾಂಗ್ರೆಸ್ ಪಕ್ಷದಲ್ಲಿ ಮಾತ್ರ ಸಾಧ್ಯ. ಖರ್ಗೆ ಅವರು ಮುಖ್ಯಮಂತ್ರಿಯಾದರೆ ಅವರ ಜತೆ ಸಂತೋಷದಿಂದ ಕೆಲಸ ಮಾಡುತ್ತೇನೆ' ಎಂದು ತಿಳಿಸಿದರು. ಉಳಿದಂತೆ ಪತ್ರಿಕಾಗೋಷ್ಠಿಯಲ್ಲಿ ಡಿ.ಕೆ ಶಿವಕುಮಾರ್ ಅವರು ಹೇಳಿದ್ದಿಷ್ಟು;

**ಏ.16ರಂದು ಕೋಲಾರದಲ್ಲಿ ರಾಹುಲ್ ಗಾಂಧಿ ಅವರ ಜೈ ಭಾರತ ಸತ್ಯಾಗ್ರಹ ಯಾತ್ರೆ:**

'ರಾಹುಲ್ ಗಾಂಧಿ ಅವರು ಬೆಳಗಾವಿಗೆ ಬಂದು ನಮ್ಮ ಯುವನಿಧಿ ಯೋಜನೆ ಪ್ರಕಟಿಸಿ ಯುವ ಸಮುದಾಯಕ್ಕೆ ಸಂದೇಶ ರವಾನಿಸಿದ್ದರು. ರಾಹುಲ್ ಗಾಂಧಿ ಅವರಿಗೆ ಬಿಜೆಪಿಯವರು ಹೆದರಿ ಅವರ ಸಂಸತ್ತಿನ ಸದಸ್ಯತ್ವವನ್ನು ವಜಾಗೊಳಿಸಿದ್ದಾರೆ. ಒಂದು ಭಾಷಣದ ವಿಚಾರವಾಗಿ ಇದೇ ಮೊದಲ ಬಾರಿಗೆ 2 ವರ್ಷ ಜೈಲು ಶಿಕ್ಷೆ ವಿಧಿಸಲಾಗಿದೆ. ಅಲ್ಲದೆ ತೀಪು ಬಂದ 24 ಗಂಟೆಗಳಲ್ಲಿ ಅವರನ್ನು ಅನರ್ಹ ಮಾಡಲಾಗಿದೆ.

ಯಾವುದೇ ಅರ್ಜಿ ಹಾಕದೇ, ನೋಟೀಸ್ ನೀಡದೇ, ಲೋಕಸಭೆ ಸ್ಪೀಕರ್ ಬಿಜೆಪಿ ನಾಯಕರ ಒತ್ತಡಕ್ಕೆ ಮಣಿದು 7 ಲಕ್ಷಗಳ ಮತಗಳ ಅಂತರದಲ್ಲಿ ಗೆದ್ದ ನಾಯಕನ ಸಂಸತ್ ಸದಸ್ಯತ್ವವನ್ನು ಅನರ್ಹಗೊಳಿಸಿದ್ದಾರೆ. ಇದು ಪ್ರಜಾಪ್ರಭುತ್ವಕ್ಕೆ ದೊಡ್ಡ ಅಪಮಾನ. ರಾಜಕಾರಣ ನಿಂತ ನೀರಲ್ಲ. ಎಲ್ಲವೂ ಪುನರಾವರ್ತನೆಯಾಗಲಿದೆ.

ರಾಹುಲ್ ಗಾಂಧಿ ಅವರು ಎಲ್ಲಿ ಭಾಷಣ ಮಾಡಿದ್ದರೋ ಅಲ್ಲಿಯೇ ಭಾಷಣ ಮಾಡಬೇಕು ಎಂದು ಹೇಳಿದಾಗ ನಾವು ಕೋಲಾರದಲ್ಲಿ ಜೈ ಭಾರತ ಸತ್ಯಾಗ್ರಹ ಯಾತ್ರೆ ಹಮ್ಮಿಕೊಳ್ಳಲು ನಿರ್ಧರಿಸಿದ್ದೇವೆ. ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮವನ್ನು ಒಂದು ವಾರಗಳ ಕಾಲ ಮುಂದೂಡುವಂತೆ ಮನವಿ ಮಾಡಿಕೊಂಡಿದ್ದು, ಅದಕ್ಕೆ ರಾಹುಲ್ ಗಾಂಧಿ ಅವರು ಸಮ್ಮತಿ ವ್ಯಕ್ತಪಡಿಸಿದ್ದಾರೆ. ಇದಕ್ಕಾಗಿ ಜೈ ಭಾರತ ಸತ್ಯಾಗ್ರಹ ಯಾತ್ರೆಯನ್ನು ಏ.16ರಂದು ಆಯೋಜಿಸಲು ತೀರ್ಮಾನಿಸಿದ್ದೇವೆ. ಅದೇ ದಿನ ಕೆಪಿಸಿಸಿ ನೂತನ ಕಟ್ಟಡ ಉದ್ಘಾಟನೆ ಮಾಡಲಾಗುವುದು.

ರಾಹುಲ್ ಗಾಂಧಿ ಅವರಿಗೆ ಶಿಕ್ಷೆ ಪ್ರಕಟವಾದ ನಂತರ ಮೊದಲ ಸಾರ್ವಜನಿಕ ಸಭೆಯನ್ನು ಕೋಲಾರದಲ್ಲಿ ಹಮ್ಮಿಕೊಂಡಿದ್ದೇವೆ.

**ಕೆಪಿಸಿಸಿ ಪ್ರಚಾರ ಸಮಿತಿ ಸಹ ಅಧ್ಯಕ್ಷರಾಗಿ ಸುಧಾಮ್ ದಾಸ್ ನೇಮಕ**

ನಮ್ಮ ಆತ್ಮೀಯ ಮಿತ್ರ ಸುಧಾಮ್ ದಾಸ್ ಅವರು ಇಡಿ ಜಂಟಿ ಅಧಿಕಾರಿಯಾಗಿದ್ದರು. ಅವರು ಸಮಾಜದ ರಕ್ಷಣೆಗೆ ದೊಡ್ಡ ಬಳಗ ಕಟ್ಟಿಕೊಂಡು ಸಮುದಾಯ ರಕ್ಷಣೆ ಮಾಡುತ್ತಿದ್ದರು. ಇವರನ್ನು ಪಕ್ಷದಲ್ಲಿ ಬಳಸಿಕೊಳ್ಳಬೇಕು ಎಂದು ಕೆಪಿಸಿಸಿ ಪ್ರಚಾರ ಸಮಿತಿಯ ಸಹ ಅಧ್ಯಕ್ಷರನ್ನಾಗಿ ನೇಮಕ ಮಾಡುತ್ತಿದೆ. ಎಂ.ಬಿ ಪಾಟೀಲ್ ಅವರು ಅಧ್ಯಕ್ಷರಾಗಿದ್ದೂ, ಅವರು ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಹಿನ್ನೆಲೆಯಲ್ಲಿ ಅವರಿಗೆ ಹೆಚ್ಚಿನ



ಒತ್ತಡ ಹಾಕಬಾರದು ಎಂದು ಸುಧಾಮ್ ದಾಸ್ ಅವರನ್ನು ನೇಮಕ ಮಾಡಲಾಗುತ್ತಿದೆ. ಸುಧಾಮ್ ದಾಸ್ ಅವರಿಗೆ ಆತ್ಮೀಯವಾಗಿ ಅಭಿನಂದನೆ ಸಲ್ಲಿಸುತ್ತೇನೆ. ಯುವಕರಿಗೆ ಆದ್ಯತೆ ನೀಡುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ಈ ತೀರ್ಮಾನ ಮಾಡಿದೆ.

ಇನ್ನು ಕಾಂಗ್ರೆಸ್ ಪಕ್ಷ ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ಪರವಾಗಿ ನಮ್ಮ ಬದ್ಧತೆ ಅಚಲ. ಇಡೀ ರಾಷ್ಟ್ರದಲ್ಲಿ ಕರ್ನಾಟಕದಲ್ಲಿ ಜನಸಂಖ್ಯೆ ಅನುಗುಣವಾಗಿ ಮೀಸಲಾತಿ ಹಾಗೂ ಅದಾನ ನೀಡುವ ಕಾನೂನು ತಂದಿರುವುದು. ಬಿಜೆಪಿ ಸರ್ಕಾರ ಮೀಸಲಾತಿ ಹೆಚ್ಚಳ ವಿಚಾರವಾಗಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದಾಗಿ ಹೇಳುತ್ತಿದೆ. ಆದರೆ ಸಂಸತ್ತಿನಲ್ಲಿ ಅವರು ತರಲಿಲ್ಲ. ಕೇಂದ್ರ ಸಚಿವರು ನಮ್ಮ ಮುಂದೆ ಈ ವಿಚಾರವಾಗಿ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಆದರೂ ಅವರು ಈ ವಿಚಾರ ಪ್ರಸ್ತಾಪಿಸಿರುವುದೇಕೆ? ನಾವು ಈ ಸಮಾಜಗಳ ಜತೆ ನಿಲ್ಲಬೇಕು ಎಂದು ಅನೇಕ ಕಾರ್ಯಕ್ರಮ ರೂಪಿಸಿದೆ. ಅಲ್ಲದೇ ಈ ಸಮುದಾಯಗಳ ನಾಯಕರನ್ನು ಬೆಳೆಸಲು ಆದ್ಯತೆ ನೀಡುತ್ತಿದ್ದೇವೆ.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ತೊಲಗಬೇಕು ಎಂದು ಎಲ್ಲರೂ ಕಾಯುತ್ತಿದ್ದಾರೆ. ಹೀಗಾಗಿ ಎಲ್ಲ ಅಧಿಕಾರಿ ವರ್ಗದವರು, ಸರ್ಕಾರಿ ನೌಕರರಿಗೆ ನಮ್ಮ ಸಾಮಾಜಿಕ ಬದ್ಧತೆ ಗಮನದಲ್ಲಿಟ್ಟುಕೊಂಡು ನಮಗೆ ಬೆಂಬಲ ನೀಡಬೇಕು ಎಂದು ಕೇಳುತ್ತೇನೆ.

**ಪ್ರಶ್ನೋತ್ತರ:**

ಪಕ್ಷದಲ್ಲಿ ಟಿಕೆಟ್ ಅಸಮಾಧಾನದ ಬಗ್ಗೆ ಕೇಳಿದಾಗ, 'ನಾವು ಎಲ್ಲರ ಜತೆ ಮಾತನಾಡುತ್ತಿದ್ದೇವೆ. ರಾಜಕಾರಣದಲ್ಲಿ ಆಸೆ ಸಹಜ. ಈ ಸಂದರ್ಭದಲ್ಲಿ ನಾವು ಎಲ್ಲ-ರಿಗೂ ಅವಕಾಶ ನೀಡಲು ಸಾಧ್ಯವಿಲ್ಲ. ರಾಜ-ಕೀಯ ಎಂದರೆ ಅಧಿಕಾರ ಹಂಚಿ ಸಹಕಾರ ನೀಡುವುದಾಗಿದೆ. ಹೀಗಾಗಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಅಧಿಕಾರವನ್ನು ಹಂಚಲಾಗುವುದು. ಈ ಕಾರಣ-ಕ್ಕಾಗಿ ಎಲ್ಲರೂ ಸಮಾಧಾನವಾಗಿ ಇರಬೇಕು ಎಂದು ಕೇಳುತ್ತಿದ್ದೇವೆ. ತಮ್ಮ ಆಕ್ರೋಶ, ಅಭಿಮಾತಪ್ಪೇನಿಲ್ಲ.

ಐದಾರೂ ವರ್ಷಗಳಿಂದ ದುಡಿದಿರುತ್ತಾರೆ. ಬೇರೆ ಪಕ್ಷದಿಂದ ಬಂದವರಿಗೆ ಟಿಕೆಟ್ ಕೊಟ್ಟಾಗ ಅಸಮಾಧಾನ ಸಹಜ. ಬಿಜೆಪಿಯಲ್ಲಿ ಅಭ್ಯರ್ಥಿ ಪಟ್ಟಿ ಪ್ರಕಟವಾಗುವ ಮುನ್ನವೇ ಭಿನ್ನಮತವನ್ನು ನೀವು ಕಾಣುತ್ತಿದ್ದೀರಿ. ಬೆಳಗಾವಿ ಹಾಗೂ ಇತರೆ ಭಾಗಗಳಲ್ಲಿ ನೋಡುತ್ತಿದ್ದೀರಿ. ನಮ್ಮ ಪಕ್ಷದಲ್ಲಿ ಗೆಲುವಿನ ಸಾಮರ್ಥ್ಯ ಬಹಳ ಮುಖ್ಯ. ಆ ದೃಷ್ಟಿಯಿಂದ ನಾವು ಕೆಲವು ತೀರ್ಮಾನ ಕೈಗೊಂಡಿರುತ್ತೇವೆ. ಬಿಜೆಪಿಯಲ್ಲೂ ಹಾಲಿ ಶಾಸಕರುಗಳಿದ್ದರು. ಕಾಂಗ್ರೆಸ್ ಪಕ್ಷ ಸೇರುತ್ತಿದ್ದಾರೆ. ವಿಶ್ವನಾಥ್ ಅವರು ಸೋಮವಾರ ಕಾಂಗ್ರೆಸ್ ಸೇರುತ್ತಿದ್ದಾರೆ. ವಿಶ್ವನಾಥ್ ಅವರು ಮೊನ್ನೆಯಷ್ಟೇ ಪಶ್ಚಾತಾಪ ಸತ್ಯಾಗ್ರಹ ಮಾಡಿದ್ದಾರೆ. ನಾವು ಕೆಲವರನ್ನು ಸಮಾಧಾನ ಪಡಿಸುತ್ತಿದ್ದೇವೆ' ಎಂದರು.

ವರುಣಾ ಹಾಗೂ ಶಿಕಾರಿಪುರದಲ್ಲಿ ಮ್ಯಾಚ್ ಫಿಕ್ಸಿಂಗ್ ಆಗಿದೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ವಿಚಾರವಾಗಿ ಕೇಳಿದಾಗ, 'ಕುಮಾರಸ್ವಾಮಿ ಅವರಿಗೆ ನಮ್ಮ ಪಕ್ಷದ ಬಗ್ಗೆ ತಿಳಿದಿದೆಯಾ?' ಎಂದು ತಿಳಿಸಿದರು.

ಸರ್ಕಾರಿ ಹುದ್ದೆ ನೇಮಕಾತಿ ಭರ್ತಿಯಾಗದೇ ಇರುವ ಬಗ್ಗೆ ಕೇಳಿದ ಪ್ರಶ್ನೆಗೆ, 'ನಿರುದ್ಯೋಗ ಯುವಕರಿಗೆ ಉದ್ಯೋಗ ನೀಡಲು ಈ ಸರ್ಕಾರಕ್ಕೆ ಸಾಧ್ಯವಾಗಿಲ್ಲ. ಸರ್ಕಾರದಲ್ಲಿ ಖಾಲಿ ಇರುವ ಹುದ್ದೆ ನೀಡಿಲ್ಲ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ನಮ್ಮ ಸರ್ಕಾರ ಹುದ್ದೆ ಭರ್ತಿಗೆ ಕ್ರಮ ಕೈಗೊಳ್ಳುತ್ತೇವೆ. ಇನ್ನು ಖಾಸಗಿ ವಲಯದಲ್ಲಿ ಉದ್ಯೋಗ ಸೃಷ್ಟಿಸಲು ಉದ್ಯೋಗ ವಿನಿಮಯಕ್ಕೆ ತೀರ್ಮಾನಿಸಿದ್ದೇವೆ. ಇದು ನಮ್ಮ ಪ್ರಣಾಳಿಕೆಯಲ್ಲಿ ತಿಳಿಸುತ್ತೇವೆ. ಇದೇ ಕಾರಣಕ್ಕೆ ನಾವು ನಿರುದ್ಯೋಗಿ ಯುವಕರಿಗೆ ಪ್ರತಿ ತಿಂಗಳು 3 ಸಾವಿರ ನಿರುದ್ಯೋಗ ಭತ್ಯೆ ನೀಡಲು ತೀರ್ಮಾನಿಸಿದ್ದೇವೆ. ಎಲ್ಲ ಯುವಕರು ಆದಷ್ಟು ಬೇಗ ಆನ್ ಲೈನ್ ನೋಂದಣಿ ಮಾಡಿಕೊಳ್ಳಬೇಕು' ಎಂದು ತಿಳಿಸಿದರು.

ಅಮೂಲ್ ಹಾಗೂ ನಂದಿನಿ ವಿಚಾರವಾಗಿ ಕೇಳಿದ ಪ್ರಶ್ನೆಗೆ, 'ನಂದಿನಿ ನಮ್ಮ ಸಂಸ್ಥೆ. ರಾಜ್ಯದಲ್ಲಿ 78 ಲಕ್ಷ ರೈತರು ಹಾಲು ಉತ್ಪಾದನೆ ಅವಲಂಬಿಸಿದ್ದಾರೆ. ಈಗಿನ ಪರಿಸ್ಥಿತಿಯಲ್ಲಿ ನೀರಿಗೂ ಹಾಲಿಗೂ ಒಂದೇ ಬೆಲೆ ಆಗಿದೆ. ರೈತ-ರಿಗೆ ಕೇವಲ 28 ರೂ ನೀಡಲಾಗುತ್ತಿದೆ. ರೈತ-ರಿಗೆ ಸರಿಯಾದ ಬೆಲೆ ಸಿಗಬೇಕು ಎಂದು ನಾವು ಹೋರಾಟ ಮಾಡುತ್ತಿದ್ದೇವೆ. ಸಿದ್ದರಾಮಯ್ಯ ಅವರ ಕಾಲದಲ್ಲಿ ರಾಮನಗರದಲ್ಲಿ 5 ರೂ. ಪ್ರೋತ್ಸಾಹ ಧನ ನೀಡಿತ್ತು. '

ಕನ್ನಡಪರ ಸಂಘಟನೆಗಳು ನಂದಿನಿ ವಿಚಾರವಾಗಿ ಹೋರಾಟ ಮಾಡುತ್ತಿಲ್ಲ ಎಂದು ಕೇಳಿದಾಗ, 'ನಂದಿನಿ ವಿಚಾರವಾಗಿಯೂ ಹೋರಾಟ ಮಾಡುತ್ತಿಲ್ಲ ಹಾಗೂ ಮಹಾರಾಷ್ಟ್ರ ರಾಜ್ಯದ 864 ಹಳ್ಳಿಗೆ ಆರೋಗ್ಯ ವಿಮೆ ಯೋಜನೆಗೆ ಹಣ ನೀಡುತ್ತಿರುವುದರ ಬಗ್ಗೆಯೂ ಮಾತನಾಡುತ್ತಿಲ್ಲ. ಮುಖ್ಯಮಂತ್ರಿಗಳು ನೈತಿಕ ಜವಾಬ್ದಾರಿ ಹೊತ್ತು ರಾಜೀನಾಮೆ ನೀಡಬೇಕಿತ್ತು. ಆದರೆ ಈ ವಿಚಾರವಾಗಿ ಚಲನಚಿತ್ರ ನಟರಾಗಲಿ, ಸಾಹಿತಿಗಳಾಗಲಿ, ಹೋರಾಟಗಾರರಾಗಲಿ ಯಾರೂ ಮಾತನಾಡುತ್ತಿಲ್ಲ' ಎಂದು ತಿಳಿಸಿದರು.

ಸಿ.ಟಿ ರವಿ ಅವರ ಟೀಕೆ ಬಗ್ಗೆ ಕೇಳಿದಾಗ, 'ರಾಷ್ಟ್ರಪತಿಯಾಗಿದ್ದ ಅಬ್ದುಲ್ ಕಲಾಂ ಅವರು ಸೋನಿಯಾ ಗಾಂಧಿಗೆ ಪ್ರಧಾನಮಂತ್ರಿಯಾಗುವಂತೆ ಆಹ್ವಾನ ನೀಡಿದಾಗ ಸೋನಿಯಾ ಗಾಂಧಿ ಅವರು ಅದನ್ನು ತ್ಯಾಗ ಮಾಡಿದರು. ಈ ದೇಶಕ್ಕೆ ಇಂದಿರಾ ಗಾಂಧಿ, ರಾಜೀವ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರು ಮಾಡಿರುವ ತ್ಯಾಗವನ್ನು ಸಿ.ಟಿ ರವಿ ಹಾಗೂ ಅವರ ಬಿಜೆಪಿ ನಾಯಕರು ಪಂಚಾಯ್ತಿ ಮಟ್ಟದಲ್ಲೂ ಮಾಡಲು ಸಾಧ್ಯವಿಲ್ಲ' ಎಂದು ತಿರುಗೇಟು ನೀಡಿದರು.

ಪಕ್ಷದ ಟಿಕೆಟ್ ಅನ್ನು ಸಮೀಕ್ಷೆ ಆಧಾರದ ಮೇಲೆ ನೀಡಲಾಗಿದೆಯೇ ಎಂದು ಕೇಳಿದ ಪ್ರಶ್ನೆಗೆ, 'ನಮ್ಮಲ್ಲಿ 78 ಲಕ್ಷ ಸದಸ್ಯರಿದ್ದಾರೆ. ಪ್ರತಿ ಬ್ಲಾಕ್ ನಲ್ಲಿ ನಮ್ಮದೇ ಆದ 3-4 ಸಮೀಕ್ಷೆ ತಂಡಗಳಿವೆ. ಕೆಪಿಸಿಸಿ ಹಾಗೂ ಎಐಸಿಸಿ ಸಮೀಕ್ಷೆ ಇವೆ. ಬ್ಲಾಕ್ ಕಾಂಗ್ರೆಸ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು, ಎಲ್ಲ ಕ್ಷೇತ್ರಗಳಿಗೆ ವೀಕ್ಷಕರು ಇದ್ದಾರೆ. ಚುನಾವಣಾ ಸಮಿತಿ ಸದಸ್ಯರನ್ನು ಅದೇ ಕ್ಷೇತ್ರಕ್ಕೆ ಕಳುಹಿಸಿ ಕಾರ್ಯಕರ್ತರು ಹಾಗೂ ಅಭ್ಯರ್ಥಿಗಳ ಜತೆ ಚರ್ಚೆ ಮಾಡಿದ್ದಾರೆ. ಟಿಕೆಟ್ ಆಕಾಂಕ್ಷಿಗಳಿಂದ ಅರ್ಜಿ ಸಂಗ್ರಹಿಸಿದ್ದೇವೆ. ನಾವು ಬಿಜೆಪಿಯವರಂತೆ ಡಬ್ಬ ಇಟ್ಟು ಅಲ್ಲಿ ಮತದಾನ ಮಾಡಿಸಿಲ್ಲ. ನಮ್ಮ ಕಾರ್ಯಕರ್ತರ ಜತೆ ಮಾತನಾಡಿದ್ದೇವೆ. ಕೇವಲ ಸರ್ವೇ ಆಧಾರದ ಮೇಲೆ ಟಿಕೆಟ್ ನೀಡಿಲ್ಲ. ಕೆಲವು ಕಡೆ ಸಾಮಾಜಿಕ ನ್ಯಾಯದ ಆಧಾರದ ಮೇಲೆ ಟಿಕೆಟ್ ನೀಡಲಾಗಿದೆ. ನಾನು ಅಧ್ಯಕ್ಷನಾದ ನಂತರ 4 ವಿಧಾನ ಪರಿಷತ್ ಸದಸ್ಯ ಸ್ಥಾನ ಬಂದಾಗ 2 ಮುಸಲ್ಮಾನರಿಗೆ, 2 ಹಿಂದುಳಿದ ವರ್ಗಗಳಿಗೆ ನೀಡಿದ್ದೇವೆ. ಹೀಗೆ ಸಾಮಾಜಿ-ಕ ನ್ಯಾಯ ಗಮನದಲ್ಲಿಟ್ಟು ಕೊಂಡು ಟಿಕೆಟ್ ಹಂಚಿಕೆ ಮಾಡಿದ್ದೇವೆ. ಈ ಬಾರಿ ಲಿಂಗಾಯತ-ರಿಗೆ ಅಧಿ ಹೆಚ್ಚು ಟಿಕೆಟ್ ಸಿಗುವ ಲಕ್ಷಣಗಳು ಗೋಚರಿಸುತ್ತಿವೆ. ನಾವು ಎಲ್ಲ ಕ್ಷೇತ್ರಗಳ ಚರ್ಚೆ ಮುಗಿದಿದ್ದು, ಪಟ್ಟಿ ಪ್ರಕಟಿಸಬೇಕಿದೆ. ನಿಮ್ಮ ಆಸೆಯಂತೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲಿದೆ.

# ಮನೆ-ಮನೆಗೆ ತೆರಳಿ ಎರ್ರಿಸ್ವಾಮಿ ಮತಯಾಚನೆ

ಬಳ್ಳಾರಿ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ-2023ರ ಹಿನ್ನೆಲೆಯಲ್ಲಿ 94 ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಕೆ.ಎರ್ರಿಸ್ವಾಮಿ ನಗರದ 4ನೇ ವಾರ್ಡಿನಲ್ಲಿ ಮನೆ ಮನೆ ತೆರಳಿ ಪ್ರಚಾರ ಕೈಗೊಂಡು, ಪ್ರಚಾರದಲ್ಲಿ ಪಕ್ಷದ ಪ್ರಣಾಳಿಕೆಯೊಂದಿಗೆ ಮೂರು ವಿವಿಧ ಬಗೆಯ ಗ್ಯಾರಂಟಿ ಕಾರ್ಡುಗಳನ್ನು ವಿತರಣೆ ಮಾಡುವ ಮುಖಾಂತರ ಮತ ಯಾಚನೆ ಮಾಡಿದರು.



ಈ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಉತ್ತಮ ಪ್ರತಿಕ್ರಿಯೆ ಪಕ್ಷಕ್ಕೆ ವ್ಯಕ್ತಪಡಿಸಿದ್ದು, ಮುಂದಿನ ದಿನಗಳಲ್ಲಿ ಅವರ ಕುಂದುಕೊರತೆಗಳಿಗೆ ಮೂಲಭೂತ ಸೌಲಭ್ಯಗಳಿಗೆ ಹೆಚ್ಚಿನ ಆದ-್ಯತೆಯ ನೀಡುವುದಾಗಿ ಎರ್ರಿಸ್ವಾಮಿ ಭರವಸೆಯನ್ನು ನೀಡಿದರು. ಇದೇ ಪ್ರತಿಕ್ರಿಯೆ ಮುಂದೆವರೆದರೆ ನನ್ನ ಗೆಲುವು ನಿಶ್ಚಿತ ಎಂಬ ಆಶಾಭಾವನೆ ವ್ಯಕ್ತಪಡಿಸಿದರು. ದೇಶಕ್ಕೆ ಸ್ವಾತಂತ್ರ ಬಂದು 75 ವರ್ಷ ಕಳೆದರೂ ಇನ್ನೂ ನಮಗೆ ಸರಿಯಾದ ಮೂಲಭೂತ ಸೌಕರ್ಯಗಳು ಸಮರ್ಪಕವಾಗಿ ಸಿಗದಿರುವುದು ದುರಾದೃಷ್ಟಕರ. ಉನ್ನತ ವಿದ್ಯೆ, ಶಿಕ್ಷಣ, ಅತ್ಯುತ್ತಮ ಆರೋಗ್ಯ ಸೇವೆ, ಕುಡಿಯುವ ನೀರಿನ ವ್ಯವಸ್ಥೆ, ಕರೆಂಟು ರಸ್ತೆ ಇನ್ನಿತರ ಸೌಲಭ್ಯಗಳಿಂದ ವಂಚಿತರಾಗಿರುವುದು ನೋವಿನ ಸಂಗತಿ.

ಆದರೆ ಕಳೆದ 9 ವರ್ಷಗಳ ಹಿಂದೆ ಆಮ್ ಆದ್ಮಿ ಪಕ್ಷ ಬಂದ ನಂತರ ಇದೀಗ ದೆಹಲಿ ಮತ್ತು ಪಂಜಾಬ್ ಎರಡೂ ರಾಜ್ಯಗಳಲ್ಲಿ ಸಂಪೂರ್ಣವಾದ ಮೂಲಭೂತ ಸೌಲಭ್ಯಗಳು ಜನಸಾಮಾನ್ಯರಿಗೆ ಸಿಗುತ್ತಿದೆ.

ಇದಕ್ಕೆ ಕಾರಣ ಅರವಿಂದ್ ಕೇಜ್ರಿವಾಲ್ ಅವರ ಸ್ಥಾಪಿಸಿದ ಆಮ್ ಆದ್ಮಿ ಪಕ್ಷ. ಇದೀಗ ನಮ್ಮ ರಾಜ್ಯದಲ್ಲಿ ಮುಂಬರುವ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷದ ಪೊರಕೆಯ ಗುರುತಿಗೆ ಮತದಾನ ಮಾಡುವ ಮುಖಾಂತರ ಎಲ್ಲಾ ಸಮಸ್ಯೆಗಳಿಗೆ ಪೊರಕೆಯೇ ಪರಿಹಾರ ಎನ್ನುವ ಸಂದೇಶವನ್ನು ಸಾರಲು ಬನ್ನಿ ಕೈಜೋಡಿಸಿ ಸಮಗ್ರ ಕ 'ರ್ನಾಟಕದ ಅಭಿವೃದ್ಧಿ ಭ್ರಷ್ಟಾಚಾರ ಮುಕ್ತ ಕರ್ನಾಟಕವನ್ನು ನಿರ್ಮಿಸೋಣ ಎಂದು ಜಾಗೃತಿಗೊಳಿಸಿದರು. ಪಕ್ಷದ ಪ್ರಚಾರದ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಂಪನಗೌಡ, ಸುಹೇಲ್, ನಾಸೀರ್ ಸೇರಿದಂತೆ 25ಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಿದ್ದರು.

# ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಬೊಮ್ಮಾಯಿ 800 ಕೋಟಿ ಅನುದಾನ ತಂದಿದ್ದಾರೆ: ಶಾಸಕ ಸೋಮಲಿಂಗಪ್ಪ

ಬಳ್ಳಾರಿ: ಸಿಎಂ ಬಸವರಾಜ ಬೊಮ್ಮಾಯಿ ಅವರು ದೇವರು ಇದ್ದ ಹಾಗೆ ಎಂದು ಸಿರುಗುಪ್ಪ ಶಾಸಕ ಸೋಮಲಿಂಗಪ್ಪ ಹೇಳಿದರು. ನಗರದ ಖಾಸಗಿ ಸಭಾಂಗಣದಲ್ಲಿ ಜಿಲ್ಲಾ ಬಿಜೆಪಿ ವತಿಯಿಂದ ಏರ್ಪಡಿಸಿದ್ದ ಜಿಲ್ಲಾ ಚುನಾವಣಾ ನಿರ್ವಹಣಾ ಸಮಿತಿಯ ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಿಎಂ ಬಸವರಾಜ ಬೊಮ್ಮಾಯಿ ಅವರು ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ ಅಂದಾಜು 800 ಕೋಟಿ ರೂ.ಗಳ ಅನುದಾನವನ್ನು ನೀಡಿದ್ದಾರೆ. ಸಾಕಷ್ಟು ಮೂಲಭೂತ ಸೌಕರ್ಯಕ್ಕಾಗಿ, ಆಶ್ರಯ ಯೋಜನೆ, ಸ್ತ್ರೀ ಸ್ವಸಹಾಯ ಗುಂಪುಗಳಿಗೆ ಇರಬಹುದು, ಹೀಗೆ ವಿವಿಧ ರೀತಿಯ ಅಭಿವೃದ್ಧಿಗೆ ಅನುದಾನ ನೀಡಿದ್ದಾರೆ ಎಂದರು.



ಬಿಜೆಪಿ ಜಗತ್ತಿನಲ್ಲಿಯೇ ಅತಿ ದೊಡ್ಡ ಪಕ್ಷ, ಅತಿ ಹೆಚ್ಚು ಸದಸ್ಯರನ್ನು, ಅತಿ ಹೆಚ್ಚು ಸಂಸದರನ್ನು, ಶಾಸಕರನ್ನು ಹೊಂದಿರುವ ಪಕ್ಷ ಬಿಜೆಪಿ ಎಂದು ಹೇಳಿದ ಅವರು, ಇಷ್ಟು ಮಾತ್ರವಲ್ಲ ಕಾರ್ಯಕರ್ತರ ಆದರ್ಶ, ಬದ್ಧತೆಯನ್ನು ಹೊಂದಿರುವ ಏಕೈಕ ಪಕ್ಷ ಬಿಜೆಪಿ ಎಂದರು.

ಕೆಲವೇ ದಿನಗಳಲ್ಲಿ ಚುನಾವಣೆ ನಡೆಯಲಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯ ಸಮಯಾವಕಾಶಕ್ಕೆ ಹೋಲಿಸಿದರೆ ವಿಧಾ ನಸಭೆ ಚುನಾವಣೆಗೆ ನೀಡಲಾದ ಸಮಯ ಕಡಿಮೆ ಇದೆ, ಕೇವಲ ಒಂದೇ ತಿಂಗಳಲ್ಲಿ ಚುನಾವಣಾ ಪ್ರಕ್ರಿಯೆ ಮುಗಿಯಲಿದೆ. ಹೀಗಾಗಿ ಚುನಾವಣೆಗೆ ಸಜ್ಜಾಗಬೇಕಿದೆ ಎಂದರು.

ಬಿಜೆಪಿ ಪಕ್ಷ ಸ್ಥಾಪನೆ ಆದಾಗಿನಿಂದ ಈ ಪಕ್ಷ ವಿಭಜನೆ ಆಗಿಲ್ಲ, ಜಾತಿ ಮತ ಪ್ರದೇಶ ಕುಟುಂಬಕ್ಕೆ ಸೀಮಿತವಾದ ಪಕ್ಷವಲ್ಲ ಎಂದು ಹೇಳಿದ ಶಾಸಕ ಸೋಮಲಿಂಗಪ್ಪ, ಯಾರಿಗೂ ಮನಸ್ತಾಪ ಆಗಬಾರದು, ಯಾಯಿರಿಗೂ ನೋವಾಗಬಾರದೆಂದು ಟಿಕೆಟ್ ನೀಡುವ ಪ್ರಕ್ರಿಯೆಯನ್ನೇ ಈ ಸಲ ಬದಲಿಸಲಾಯಿತು.

ಬೂತ್ ಮಟ್ಟದಲ್ಲಿ ಪಕ್ಷವನ್ನು ಸಂಘಟಿಸುವ ಪಕ್ಷ ಅಂತಿದ್ದರೆ ಅದು ಬಿಜೆಪಿ ಮಾತ್ರ ಎಂದರು. ವಿಪಕ್ಷದವರು ಬಿಜೆಪಿ ಮೇಲೆ ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದ್ದಾರೆ.

ಶೇ.40ರಷ್ಟು ಭ್ರಷ್ಟಾಚಾರ ಆರೋಪವನ್ನು ವಿಪಕ್ಷದವರು ಬಿಜೆಪಿ ಮೇಲೆ ಮಾಡುತ್ತಿದ್ದಾರೆ ಎಂದ ಅವರು, ವಿಪಕ್ಷದವರು ತಾವು ಭ್ರಷ್ಟಾಚಾರ ಮಾಡಿ ನಮ್ಮ ಮೇಲೆ ಆರೋಪ ಹೊರಿಸುತ್ತಿದ್ದಾರೆ. ಬಿಜೆಪಿಯಲ್ಲಿರುವ ನಾಯಕರ ಮೇಲೆ ಆರೋಪ ಬಂದರೆ ತಕ್ಷಣ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಬಳ್ಳಾರಿ ಜಿಲ್ಲೆಯ 5 ಕ್ಷೇತ್ರಗಳಲ್ಲೂ ಬಿಜೆಪಿ ಗೆಲ್ಲಲಿದೆ. ಪಕ್ಷದೊಳಗೆ ಬೆನ್ನಿಗೆ ಚೂರಿ ಹಾಕುವವರು ಇರುತ್ತಾರೆ, ಆದರೂ ಕೂಡ ಅಂಜಬೇಕಿಲ್ಲ, ಅವರ ಚೂರಿಯನ್ನು ಅವರಿಗೇ ತಿರುಗಿಸಬೇಕು ಎಂದರು.

ಕೊರೋನಾ ಬಂದ ಕಾರಣದಿಂದಾಗಿ ಆಡಳಿತ ನಡೆಸಲು ಸಾಧ್ಯ ಆಗಿಲ್ಲ. ಸಿಕ್ಕ ಅವಕಾಶದಲ್ಲೇ ನಾವು ಉತ್ತಮವಾಗಿ ಅಭಿವೃದ್ಧಿ ಮಾಡಿದ್ದೇವೆ ಎಂದು ಸೋಮಲಿಂಗಪ್ಪ ಹೇಳಿದರು.

ವಿಪಕ್ಷದವರು ತಮಗೆ ಜನರ ಬೆಂಬಲ ಇದೆ ಎನ್ನುತ್ತಾರೆ ಆದರೆ ಅದು ಸುಳ್ಳು. ವಿಧಾನಸೌಧದ ಮೇಲೆ ವಿಜಯದ ಧ್ವಜ ಹಾರಿಸಲಿದ್ದೇವೆ ಎಂದು ಶಾಸಕ ಸೋಮಲಿಂಗಪ್ಪ ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಮುರಾರಿಗೌಡ ಚುನಾವಣಾ ನಿರ್ವಹಣಾ ಸಮಿತಿಯ ವಿವಿಧ ಜವಾಬ್ದಾರಿ ನೀಡಲಾಗಿರುವ 30 ವಿಭಾಗಗಳ ಪ್ರಮುಖರ ಪಟ್ಟಿಯನ್ನು ಸಭೆಯಲ್ಲಿ ಮಂಡಿಸಿದರು. ವಿಧಾನ ಪರಿಷತ್ ಸದಸ್ಯ ವೈ.ಎಂ. ಸತೀಶ್, ವಿರೂಪಾಕ್ಷ ಗೌಡ, ಕೆ.ರಾಮಲಿಂಗಪ್ಪ, ಅನಿಲ್ ನಾಯ್ಡು, ಮಾರುತಿ ಪ್ರಸಾದ್, ಡಾ.ಮಹಿಪಾಲ್, ಸಿದ್ಧೇಶ್ ಯಾದವ್, ಎರ್ರಂಗಳಿ ತಿಮ್ಮಾ ರೆಡ್ಡಿ, ಶ್ರೀಧರಗಡ್ಡೆ ಬಸವಲಿಂಗಪ್ಪ, ಪಾರ್ವತಿ ಇಂದೂಶೇಖರ್, ಕೆ.ಎಸ್.ಅಶೋಕ್ ಹಾಜರಿದ್ದರು.

# ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರೇ ಪ್ರಭುಗಳು



ಸವಣೂರು: ಮತದಾನ ಪ್ರತಿಯೊಬ್ಬರ ನಾಗರೀಕರ ಹಕ್ಕು ಮತ್ತು ಕರ್ತವ್ಯವಾಗಿದೆ. ಹಾಗಾಗಿ ಎಲ್ಲರೂ ತಪ್ಪದೆ ಮತದಾನ ಮಾಡಬೇಕೆಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ನವೀನ್ ಪ್ರಸಾದ್ ಕಟ್ಟೀಮನಿ ಅವರು ತಿಳಿಸಿದರು.

ತಾಪಂ.ಆವರಣದಲ್ಲಿ ಬುಧವಾರ ಮತದಾನ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮತದಾನ ಪ್ರತಿಯೊಬ್ಬ ನಾಗರಿಕನ ಹಕ್ಕು ಮತ್ತು ಕರ್ತವ್ಯ, ಅದನ್ನು ನಾಗರಿಕರು ಅರಿಯಬೇಕು. ಯಾವುದೇ ಆಸೆ, ಆಮಿಷಗಳಿಗೆ ಬಲಿಯಾಗದೇ ಸ್ವಯಂ ಪ್ರೇರಿತರಾಗಿ ಮತಗಟ್ಟೆಗಳಿಗೆ ತೆರಳಿ ತಪ್ಪದೇ ಮತದಾನ ಮಾಡುವುದರ ಜೊತೆಗೆ ಇತರರನ್ನು ಮತದಾನ ಮಾಡುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಮತದಾನ ದೇಶದ ಭವಿಷ್ಯವನ್ನು ರೂಪಿಸುತ್ತದೆ. ಆದ್ದರಿಂದ ಶಿಕ್ಷಣವಂತವರಾದ ನಾವು ಮತದಾನದಿಂದ ದೂರ ಉಳಿಯದೆ ಕಡ್ಡಾಯವಾಗಿ ಮತದಾನ ಮಾಡಬೇಕು. ಅಲ್ಲದೆ ತಮ್ಮ ಸುತ್ತಮುತ್ತಲಿನ ಜನರಿಗೂ ಮತದಾನಕ್ಕೆ ಪ್ರೇರೆಪಿಸಿ ಮತದಾನ ಮಾಡುವಂತೆ ತಿಳಿಸಬೇಕು. ಯಾವುದೇ ಆಮಿಷ್ಯಕ್ಕೆ ಒಳಗಾಗದೆ ದೇಶದ ಭವಿಷ್ಯದ ದೃಷ್ಟಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಬೇಕು ಕರೆ ನೀಡಿದರು.

ಇದೇ ವೇಳೆ ಮತದಾನದ ಪ್ರತಿಜ್ಞಾ ವಿಧಿಯನ್ನು ತಾಲೂಕು ಪಂಚಾಯತಿ ಸಿಬ್ಬಂದಿಗಳಿಗೆ ಬೋಧಿಸಿದರು. ಈ ಸಂದರ್ಭದಲ್ಲಿ ತಾಪಂ. ಎನ್‌ಆರ್‌ಐಜಿ ಸಹಾಯಕ ನಿರ್ದೇಶಕ ಮಲ್ಲಪ್ಪ ಕಜ್ರಿ ಅವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರೇ ಪ್ರಭುಗಳು. ಅವರು ಚಲಾಯಿಸುವ ಪ್ರತಿಯೊಂದು ಮತಕ್ಕೂ ಅದರದೇ ಆದ ಮೌಲ್ಯವಿದೆ ಎಂದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ ಅಶೋಕ ಗೊಂದಿ, ಲೆಕ್ಕ ಸಹಾಯಕ ನಾಗರಾಜ ಕುಲಕರ್ಣಿ, ಎಸ್ ಡಿಎ ಎಮ್.ಎಸ್.ಚೋಳಮ್ಮನವರ, ತಾಲೂಕ ವ್ಯವಸ್ಥಾಪಕರು ಬಿ.ಎಫ್.ಚಿಕ್ಕಮಠ, ಅಭಿವೃದ್ಧಿ ಅಧಿಕಾರ ಎಸ್.ಪಿ.ಕಲಾಲ, ಡಿ.ಎಸ್.ಪ್ಯಾಟಿ, ಬಸವರಾಜ ದೊಡ್ಡಮನಿ, ಐಇಸಿ ಸಂಯೋಜಕ ಬಸವರಾಜ ಎಚ್.ಎಮ್, ತಾಲೂಕ ಕಾರ್ಯಕ್ರಮ ವ್ಯವಸ್ಥಾಕ ಸಂಜೀವಕುಮಾರ ಬೆಳವತ್ತಿ, ವಲಯ ಮೇಲ್ವಿಚಾರಕರಾದ ಮಾಲತೇಶ್ ಮಟಗೇರ,ವ್ಹಿ. ಎಮ್. ಪಲ್ಲೇದ, ಸತೀಶ್ ಕೊರಡೂರ, ಬೀರಪ್ಪ ದ್ಯಾವನೂರ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತ-ರಿದ್ದರು.

# ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ತಂತ್ರಜ್ಞಾನ ಅಗತ್ಯ




ಬಳ್ಳಾರಿ: ನಗರದಲ್ಲಿರುವ ವೀ.ವಿಸಂಘದ ಅಂಗಸಂಸ್ಥೆಯಾದ ಹಾನಗಲ್ ಶ್ರೀ ಕುಮಾರೇಶ್ವರ ಪಾಲಿಟೆಕ್ನಿಕ್ ತಾಂತ್ರಿಕ ವಿದ್ಯಾಲಯದಲ್ಲಿ ಐ.ಟಿ.ಐ ಡಿಪ್ಲೋಮಾ ಪೂರೈಸಿರುವ ಅಭ್ಯರ್ಥಿಗಳಿಗೆ ಉದ್ಯೋಗ ಮೇಳವನ್ನು ಕಿರ್ಲೋಸ್ಕರ್ ಟೊಯೋಟಾ ಮಷಿನರಿ ಪ್ರೈವೇಟ್ ಲಿಮಿಟೆಡ್ ಸಹಭಾಗಿತ್ವದಲ್ಲಿ ಆಯೋಜಿಸಲಾಗಿತ್ತು.

ವೀ.ವಿ.ಸಂಘದ ಮಾಜಿ ಅಧ್ಯಕ್ಷರಾದ ಅಲ್ಲಂ ಗುರುಬಸವರಾಜ ಮೇಳ ಉದ್ಘಾಟಿಸಿ ಮಾತನಾಡಿ, ಐ.ಟಿ.ಐ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ ತಮ್ಮ ಉಜ್ವಲ ಭವಿಷ್ಯಕ್ಕಾಗಿ ತಾಂತ್ರಿಕಜ್ಞಾನ ಬಹುಮುಖ್ಯ ಎಂದು ತಿಳಿಸಿದರು. ಸಂಸ್ಥೆಯ ಅಧ್ಯಕ್ಷರಾದ ಹೆಚ್.ಎಮ್. ಕಿರಣ-ಕುಮಾರ ಮಾತನಾಡಿ, ಇಂತಹ ಸದಾವಕಾಶವನ್ನು ಉಪಯೋಗ ಮಾಡಿಕೊಳ್ಳಬೇಕೆಂದು ತಿಳಿಸಿದರು.

ಬಳ್ಳಾರಿ ಹಾಗೂ ಸುತ್ತಮುತ್ತಲ ಹಳ್ಳಿಗಳ ಐ.ಟಿ.ಐ ನ ವೆಲ್ಡರ್, ಎಲೆಕ್ಟ್ರಿಷನ್ ಮತ್ತು ಟರ್ನರ್ ವಿಭಾಗದ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಿಯಾಗಿದ್ದರು. ಉಪನ್ಯಾಸಕ ರವೀಂದ್ರ ಹಿರೇಮಠ ನಿರೂಪಿಸಿದರು. ಕಾಲೇಜಿನ ಆಡಳಿತ ಮಂಡಳಿಯ ಸದಸ್ಯರಾದ ಹಳೆಕೋಟೆ ವೀರನಗೌಡ, ಸಂಗನಕಲ್ ಚಂದ್ರಶೇಖರ್ ,ಹಲಕುಂದಿ ವಿಜಯಕುಮಾರ್ ಮತ್ತು ಪ್ರಾಚಾರ್ಯರಾದ ಡಾ. ಟಿ.ಎಂ. ವೀರಗಂಗಾಧರಸ್ವಾಮಿ ಉದ್ಯೋಗಾಧಿಕಾರಿಯಾದ ಕುಲ್ಲಯ್ಯ ಸ್ವಾಮಿಯವರು ಉಪಸ್ಥಿತರಿದ್ದರು.

# ಸ್ವ ಉದ್ಯೋಗಕ್ಕೆ ಒತ್ತು, ಬ್ಯಾಂಕ್‌ಗೆ 2.65 ಕೋಟಿ ಲಾಭ

ಹುಕ್ಕೇರಿ : ಗ್ರಾಮೀಣ ಜನರ ರೈತರಿಗೆ ಹಾಗೂ ಯುವ ಜನತೆಗೆ ಸ್ವ ಉದ್ಯೋಗ ನಿರ್ವಹಣೆ ಗಾಗಿ ಆರ್ಥಿಕ ಸೌಲಭ್ಯ ದೊಂದಿಗೆ ಪ್ರಾರಂಭಗೊಂಡು ಲಾಭಕ್ಕಿಂತ ಸೇವೆಗೆ ಒತ್ತು ನೀಡಿರುವದು ಮಹಾವೀರ ಬ್ಯಾಂಕಿನ ವಿಶೇಷ ಎಂದು ರಿಡ್ಸ ಸಂಸ್ಥೆಯ ಅಧ್ಯಕ್ಷ ಅಶೋಕ ಪಾಟೀಲ ಹೇಳಿದರು.



ಅವರು ಪಟ್ಟಣದ ಮಹಾಯ ಶಿಕ್ಷಣ ಸಂಸ್ಥೆಯಲ್ಲಿ ಮಹಾವೀರ ಬ್ಯಾಂಕಿನ ಸಭೆಯ ಸುದ್ಧಿಗೋಷ್ಠಿಯಲ್ಲಿ ಮಾತನಾಡಿದರು.

ಬ್ಯಾಂಕಿನ ಜೊತೆಗೆ ಸಮಾಜ ಪೂರಕ ಕಾರ್ಯಗಳನ್ನು ಕೈಗೊಂಡು ಕಾರ್ಯನಿರ್ವಹಿಸುತ್ತಿದೆಂದರು.

ಪುರಸಭೆ ಹಿರಿಯ ನಿರ್ದೇಶಕ ಹಾಗೂ ಸಂಸ್ಥೆ ಅಧ್ಯಕ್ಷ ಮಹಾವೀರ ನಿಲಜಗಿ ಮಾತನಾಡಿ

ನಮ್ಮ ಬ್ಯಾಂಕ ಎಂದು ಹೆಸರುವಾಸಿಯಾಗಿ ಸೇವೆ ಸಲ್ಲಿಸುತ್ತಿರುವ ಮಹಾವೀರ ಸೌಹಾರ್ದ ಸಹಕಾರಿ ಸಂಘ ಕಳೆದ 23 ವರ್ಷಗಳ ಹಿಂದೆ ಸಹಕಾರಿ ರತ್ನ ದಿ ವಸಂತ ನಿಲಜಗಿ ಸ್ಥಾಪಿಸಿದ ಬ್ಯಾಂಕ ನಾಲ್ಕು ಜಿಲ್ಲೆಗಳಲ್ಲಿ 15 ಶಾಖೆ ತೆರೆದು ಅರ್ಧದಷ್ಟು ಕೃಷಿಗೆ ಹಾಗೂ ಯುವಕ-ರಿಗೆ ಸ್ವ ಉದ್ಯೋಗಕ್ಕೆ ಪ್ರೋತ್ಸಾಹ ನೀಡುತ್ತಿದೆ. 850 ಕೋಟಿ ವ್ಯವಹಾರ ಮಾಡಿ 197 ಕೋಟಿ.52 ಲಕ್ಷ ರೂ ಠೇವು ಸಂಗ್ರಹಿಸಿ 180 ಕೋಟಿ ಸಾಲ ವಿತರಿಸಲಾಗಿದೆ ಶೇ.25 ರಷ್ಟು ಸದಸ್ಯರಿಗೆ ಲಾಭಾಂಶ ವಿತರಿಸಲು ಚಿಂತನೆ ,ಜೊತೆಗೆ ಪ್ರಾಥಮಿಕ ಹಂತದಿಂದ ಪದವಿ ಪೂರ್ವ, ವೃತ್ತಿಪರ ಶಿಕ್ಷಣ ತೆರದು ಕಾರ್ಯನಿರ್ವಹಿಸುತ್ತಿದೆಂದರು

ವಿವಿಧ ಉದ್ಯೋಗ ಸಮೂಹ ಸಂಸ್ಥೆಯ ಮೂಲಕ,ಮೃತ ಸದಸ್ಯರಿಗೆ 5 ಸಾವಿರ ರೂ ಸಹಾಯಧನ, ಸಿಬ್ಬಂದಿಯವ-ರಿಗೆ ವಿಮಾ ಸೌಲಭ್ಯ ,ಮಲ್ಲಿ ಸುಪರ್ ಮಾರ್ಕೇಟ,ಹಾಗೂ ಸಂಕೇಶ್ವರ ಮತ್ತು ಬೆಳಗಾವಿಯಲ್ಲಿ ಶಾಖೆ ತೆರೆಯಲು ಸಿದ್ದತೆ ಮಾಡಿಕೊಳ್ಳಲಾಗಿದೆ.

ಸೇವೆಯನ್ನು ಗ್ರಾಹಕರ ಮನೆ ಬಾಗಿಲಿಗೆ ತಲುಪಿಸಲು, ಅಳವಡಿಸಲು ಆದ್ಯತೆ ನೀಡಲಾಗಿದೆ ಎಂದರು.

ಗ್ರಾಮೀಣ ಭಾಗದ ಎಲ್ಲ ಸಮುದಾಯದ ಜನರ ಆರ್ಥಿಕ ಸುಧಾರಣೆಗೆ ಕಳೆದ ಎರಡು ದಶಕಗಳ ಹಿಂದೆ ಜನ್ಮತಳೆದ ಸಂಸ್ಥೆರಾಜಕೀಯ ಚುನಾವಣೆಗೆ ಅವಕಾಶ ನೀಡದೆ ಗ್ರಾಹಕ ಸದಸ್ಯರು-ಆಡಳಿತ ಮಂಡಳಿ ಸಿಬ್ಬಂದಿ ಶ್ರಮ ಮತ್ತು ಸಹಕಾರ ಮುಖ್ಯವಾಗಿದೆಂದರು.

ಬ್ಯಾಂಕಿನ ಆಡಳಿತ ನಿರ್ದೇಶಕ ರೋಹಿತ ಚೌಗಲಾ,ಬಾಹುಬಲಿ ಸೊಲ್ಲಾಪುರೆ, ಸುಕಮಾರ ಖತಗಲಿ.ಕಿರಣ ಸೊಲ್ಲಾಪುರೆ ಪ್ರಜ್ವಲ ನಿಲಜಗಿ ,ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಸಂಜು ನಿಲಜಗಿ,ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕ ರಾಜೇಂದ್ರ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

# ಮತ ಹಾಕಿ ದೇಶದ ಹಿತ ಕಾಪಾಡಿ: ಸಿಇಓ. ಸ್ವರೂಪ ಟಿ.ಕೆ



ಧಾರವಾಡ: ಪ್ರತಿಯೊಬ್ಬ ಅರ್ಹ ಮತದಾರರು ಸ್ವಯಂ ಪ್ರೇರಣೆಯಿಂದ ಮತದಾನ ಮಾಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಮತದಾರರು ಮತಗಟ್ಟೆಗೆ ಆಗಮಿಸಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಗೆಲ್ಲಿಸಬೇಕು, ಎಂದು ಜಿಲ್ಲಾ ಪಂಚಾಯತ್ ಸಿ.ಇ.ಓ ಸ್ವರೂಪ ಟಿ.ಕೆ. ಹೇಳಿದರು.

ಮತದಾರರ ಜಾಗೃತಿ ಮತ್ತು ಮತದಾನದ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸುವ ಉದ್ದೇಶದಿಂದ ಇಂದು ಬೆಳಿಗ್ಗೆ ನಗರದ ಆರ್. ಎನ್. ಶೆಟ್ಟಿ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ವಿಧಾನಸಭೆಯ ಸಾರ್ವತ್ರಿಕ ಚುನಾವಣೆ -2023 ಮತದಾರರ ಜಾಗೃತಿಗಾಗಿ ವಿಕಲಚೇತನರ ತ್ರಿಚಕ್ರ ವಾಹನ ರ್ಯಾಲಿಗೆ ಹಸಿರು ಬಾವುಟ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಧಾರವಾಡ ಜಿಲ್ಲೆಯಾದ್ಯಂತ 100ಕ್ಕೆ 100ರಷ್ಟು ಮತದಾರರು ಮತದಾನ ಮಾಡಬೇಕು. ವಿಕಲಚೇತನರಿಗೆ ಮತ್ತು 80 ವರ್ಷ ಮೇಲ್ಪಟ್ಟ ಹಿರಿಯರಿಗೆ ಮನೆಯಲ್ಲಿ ಮತದಾನ ಮಾಡುವ ವ್ಯವಸ್ಥೆಯನ್ನು ಚುನಾವಣಾ ಆಯೋಗ ಮಾಡಿದೆ. ಕಡ್ಡಾಯವಾಗಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಿ ಮತ್ತು ಅಕ್ಕ-ಪಕ್ಕದವರನ್ನು ಮನವೊಲಿಸಿ ಮತದಾನ ಮಾಡುವಂತೆ ಪ್ರೇರೇಪಿಸಬೇಕು. ಮತದಾನ ನಮ್ಮೆಲ್ಲರ ಹಕ್ಕು, ಮತದಾರ ಪಟ್ಟಿಗೆ ಹೆಸರನ್ನು ಸೇರ್ಪಡೆ ಮಾಡಲು ಏ.11 ರ ವರೆಗೆ ಕಾಲಾವಕಾಶವಿದೆ ಎಂದು ಹೇಳಿದರು.

ಎಲ್ಲ ಮತದಾರರು ಮೇ 10ಕ್ಕೆ ಮತದಾನ ಮಾಡುವುದನ್ನು ನೆನಪಿಟ್ಟುಕೊಳ್ಳಿ. ನ್ಯಾಯ ಸಮ್ಮತ ಮತದಾನದ ಮೂಲಕ ಪ್ರಜಾಪ್ರಭುತ್ವವನ್ನು ಉಳಿಸಿ, ಮತವನ್ನು ಹಾಕಿ ದೇಶದ ಹಿತವನ್ನು ಕಾಪಾಡಿ. ನಂತರ ವಾಹನ ರ್ಯಾಲಿಯು ಆರ್. ಎನ್. ಶೆಟ್ಟಿ ಕ್ರೀಡಾಂಗಣದಿಂದ ಜುಬ್ಲಿ ಸರ್ಕಲ್ ಮೂಲಕ ಕಲಾಭವನಕ್ಕೆ ಸಂಚರಿಸಲಾಯಿತು. ರ್ಯಾಲಿಯಲ್ಲಿ ವಿಕಲಚೇತನರು ತಮ್ಮ ವಾಹನಗಳೊಂದಿಗೆ ಭಾಗವಹಿಸಿ ಸಾರ್ವಜನಿಕರಿಗೆ ಮತದಾನದ ಮಹತ್ವವನ್ನು ತಿಳಿಸಿದರು.

ಜಿಲ್ಲಾ ಚುನಾವಣಾ ಐಕಾನ್ ಜ್ಯೋತಿ ಸಣ್ಣಕ್ಕಿ, ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕ ಬಸವಲಿಂಗ ಮೂಗನೂರಮಠ, ಕನ್ನಡ ಮತ್ತು ಇಲಾಖೆ ಸಹಾಯ ನಿರ್ದೇಶಕ ಕುಮಾರ ಬೆಕ್ಕೇರಿ, ಅಂಗವಿಕಲ ಕಲ್ಯಾಣ ಇಲಾಖೆ ಅಧಿಕಾರಿ ಜಗದೀಶ, ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ಬಿ.ಆರ್. ಪಾತ್ರೋಟ್ ಮತ್ತು ಇನ್ನಿತರ ಅಧಿಕಾರಿಗಳು ರ್ಯಾಲಿಯಲ್ಲಿ ಭಾಗವಹಿಸಿದ್ದರು.

## ಏ.10, ಕೊನೆಯ ದಿನ


ಧಾರವಾಡ: ಕರ್ನಾಟಕ ವಿಧಾನಸಭೆಗೆ ಭಾರತ ಚುನಾವಣಾ ಆಯೋಗವು ಮಾರ್ಚ್ 29 ರಂದು ಸಾರ್ವತ್ರಿಕ ಚುನಾವಣೆಯನ್ನು ಘೋಷಣೆ ಮಾಡಿದೆ. ಅದರಂತೆ ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಏಪ್ರಿಲ್ 20 (ಗುರುವಾರ) ಆಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅರ್ಹ ಮತದಾರರು, ಮತದಾರರ ಯಾದಿಯಲ್ಲಿ ಹೆಸರುಗಳ ಸೇರ್ಪಡೆಯಾಗಿರುವ ಬಗ್ಗೆ https://ceo.karnataka.gov.in, https://www.nvsp.in ವೆಬ್‌ಸೈಟ್‌ಗಳಲ್ಲಿ ಹಾಗೂ Voter Helpline ಆಪ್‌ನಲ್ಲಿ ಮತ್ತು ಮತದಾರರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಪರಿಶೀಲಿಸಿಕೊಳ್ಳಬಹುದಾಗಿದೆ.

ಒಂದು ವೇಳೆ ಮತದಾರರ ಯಾದಿಯಲ್ಲಿ ಅರ್ಹ ಮತದಾರರ ಹೆಸರುಗಳು ಸೇರ್ಪಡೆಯಾಗದೇ ಇದ್ದಲ್ಲಿ, ಅಂಥಹ ಅರ್ಹ ಮತದಾರರು ದಿನಾಂಕ:10.04.2023 ರೊಳಗೆ https://www.nvsp.in ವೆಬ್‌ಸೈಟ್‌ನಲ್ಲಿ ಅಥವಾ Voter Helpline ಆಪ್‌ನಲ್ಲಿ ನಮೂನೆ–6 ರಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅವರು ತಿಳಿಸಿದ್ದಾರೆ.

ಏಪ್ರಿಲ್ 10 ರ ನಂತರ ನಮೂನೆ–6 ರಲ್ಲಿ ಸಲ್ಲಿಕೆಯಾದ ಅರ್ಜಿಗಳನ್ನು ಈ ಚುನಾವಣೆ ಮುಗಿದ ನಂತರ ಮತದಾರರ ಯಾದಿಯಲ್ಲಿ ಸೇರ್ಪಡೆ ಮಾಡಿಕೊಳ್ಳಲು ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಗುರುದತ್ತ ಹೆಗಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾನಿಪುರಿ ತಿನ್ನಲು ಪ್ರಯಾಣಿಕರಿದ್ದ ಬಸ್ ನಿಲ್ಲಿಸಿದ ಚಾಲಕ ಅಮಾನತು




ಅಹಮದಾಬಾದ್: ರಸ್ತೆ ಬದಿಯ ಪಾನಿಪುರಿ ಅಂಗಡಿಯಲ್ಲಿ ಹತ್ತು ನಿಮಿಷ ಪ್ರಯಾಣಿಕರಿದ್ದ ಬಸ್ ನಿಲ್ಲಿಸಿ, ಪಾನಿಪುರಿ ಸೇವಿಸಿದ ಬಿಆರ್‌ಟಿ–ಎಸ್ ಚಾಲಕನೊಬ್ಬ ಅಮಾನತು ಮಾಡಿರುವ ಘಟನೆ ಗುಜರಾತ್‌ನ ಅದಾಲಜ್‌ನಲ್ಲಿ ನಡೆದಿದೆ.

ಘಟನೆಯ ವಿಡಿಯೊ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದ್ದರಿಂದಾಗಿ ಸ್ಥಳೀಯ ಸಂಸ್ಥೆಯು ಚಾಲಕ ಹಾಗೂ ಬಸ್ ನಿರ್ವಹಣಾ ಸಂಸ್ಥೆ ವಿರುದ್ಧ ಕ್ರಮ ಕೈಗೊಂಡಿದೆ.

ಮೂಲಗಳ ಪ್ರಕಾರ, ಝುಂದಲ್–ತ್ರಿಮಂದಿರ್ ಮಾರ್ಗವಾಗಿ ಸಂಚರಿಸುವ ಬಿಆರ್‌ಟಿಎಸ್ ಬಸ್‌ನ ಚಾಲಕ ನೀಲೇಶ್ ಪಾರ್ಮರ್, ಸ್ವಾಗತ್ ಸಿಟಿ ಸೊಸೈಟಿ ಬಳಿ ರಸ್ತೆ ಬದಿಯಲ್ಲಿನ ಪಾನಿಪೂರಿ ಅಂಗಡಿಯಲ್ಲಿ ಪಾನಿಪೂರಿ ಸೇವಿಸಲು ಬಸ್ ನಿಲುಗಡೆ ಮಾಡಿದ್ದಾನೆ. ಇದರಿಂದ ಬಸ್‌ನಲ್ಲಿದ್ದ ಪ್ರಯಾಣಿಕರು ಸುಮಾರು 10 ನಿಮಿಷ ಕಾಯಬೇಕಾಗಿ ಬಂದಿದೆ.

ಈ ಪೈಕಿ ಓರ್ವ ಪ್ರಯಾಣಿಕ ಪಾರ್ಮರ್ ಪಾನಿಪುರಿ ತಿನ್ನುತ್ತಿರುವ ವಿಡಿಯೊ ಚಿತ್ರೀಕರಣ ಮಾಡಿ, ಅದನ್ನು ಸಾಮಾಜಿಕ ಮಾಧ್ಯಮಗಳ ವೇದಿಕೆಯಲ್ಲಿ ಹಂಚಿಕೊಂಡಿದ್ದಾನೆ ಎಂದು ಹೇಳಲಾಗಿದೆ.

ಈ ವಿಷಯ ಬಿಆರ್‌ಟಿಎಸ್ ಜನ್‌ಮಾರ್ಗ್ ಲಿ. ಅಧಿಕಾರಿಗಳ ಗಮನಕ್ಕೆ ಬಂದು, ಅವರು ಬಸ್ ನಿರ್ವಹಣಾ ಸಂಸ್ಥೆಗೆ ರೂ. 15,000 ಹಾಗೂ ಪಾರ್ಮರ್‌ಗೆ ರೂ. 1,000 ದಂಡ ವಿಧಿಸಿದ್ದು, ಪಾರ್ಮರ್‌ನನ್ನು ಸೇವೆಯಿಂದ ಅಮಾನತುಗೊಳಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ಮತದಾನ ಜಾಗೃತಿ ಕುಡಿಯುವ ನೀರಿನ ಅರವಟಿಗಿಗೆ ಚಾಲನೆ



ಬಳ್ಳಾರಿ: ಬಳ್ಳಾರಿ ನಗರದ ದೊಡ್ಡ ಮಾರ್ಕೆಟ್ ಹತ್ತಿರ ಇರುವ ಅಪ್ಪು ಸೇವಾ ಸಮಿತಿ ಕಛೇರಿಯ ಮುಂದೆ ಅಪ್ಪು ಸೇವಾ ಸಮಿತಿ ಸನ್ಮಾರ್ಗ ಗೆಳೆಯರ ಬಳಗ ಬಳ್ಳಾರಿ ವತಿಯಿಂದ ಸಾರ್ವಜನಿಕರಿಗಾಗಿ ಕುಡಿಯುವ ನೀರಿನ ಅರವಟಿಗಿಗೆ ಚಾಲನೆ ನೀಡಿದ ಜಿಲ್ಲಾ ಪಂಚಾಯತ್ ಯೋಜನ ನಿರ್ದೇಶಕರಾದ ಪಿ ಪ್ರಮೋದ ಅವರು ಮಾತನಾಡುತ್ತಾ ಮನುಷ್ಯನಿಗೆ ದಾಹ ಎಷ್ಟು ಮುಖ್ಯವೋ ಚುನಾವಣೆಯಲ್ಲಿ ಮತದಾನ ಕೂಡ ಅಷ್ಟೇ ಮುಖ್ಯ ಅಂಗಾಗಿ ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಮಹಾನಗರ ಪಾಲಿಕೆ ಮತ್ತು ಗ್ರಾಮ ಪಂಚಾಯಿತಿಗಳು ಜೂತೆಗೆ ಸಂಘ ಸಂಸ್ಥೆಗಳ ಕೂಡ ಸಹಕಾರಿಸಬೇಕು ಎಂದರು.

ಡಾ ಪುನೀತ್ ರಾಜಕುಮಾರ್ ಮಾತಿನಂತೆ ನಮ್ಮ ಮತ ನಮ್ಮ ಪವರ್ ಎಂದರು. ಇದೇ ವೇಳೆ ಸನ್ಮಾರ್ಗದ ಉಪಾಧ್ಯಕ್ಷರಾದ ಸಲ್ಲ ಹನುಮಂತ ರೆಡ್ಡಿ ಕಪ್ಪಗಲ್ಲು ಬಿ ಚಂದ್ರಶೇಖರ ಆಚಾರ್ ಸ್ಥಾಪಕ ಅಧ್ಯಕ್ಷ ಜೆ ಪಿ ಮಂಜುನಾಥ ಅಧ್ಯಕ್ಷ ಅಪ್ಪುರವಿ ಶರಣ, ಚಂದ್ರು, ಲಕ್ಷ್ಮಿ ರೆಡ್ಡಿ, ಎಂಸಿ ಮಾರೇಶ್ ವೆಂಕಟೇಶ ,ವಿಭೂತಿಶರಣ ನಾಗರಾಜ, ಹನೀಫ್, ಕೃಷ್ಣ, ಎಮ್ ಮಂಜುನಾಥ, ಈಶ್ವರ್ ತಿಲಕ್ ಕುಮಾರ್ ,ಬಿಟ್ಟು, ಇನ್ನುಳಿದ ಸದಸ್ಯರು ಉಪಸ್ಥಿತರಿದ್ದರು.

## ಬೆಳಗಾವಿ ಜಿಲ್ಲೆಯಲ್ಲಿ 1,536 ಶತಾಯುಷಿ ಮತದಾರರು

# ರಾಜ್ಯದಲ್ಲಿ ಮೈಸೂರು ಮೊದಲ ಸ್ಥಾನ ಪಡೆದರೆ, ಬೆಳಗಾವಿಗೆ ಎರಡನೇ ಸ್ಥಾನ

ಬೆಳಗಾವಿ: ರಾಜ್ಯ ವಿಧಾನಸಭೆ ಚುನಾವಣೆ ಹತ್ತಿರವಾಗುತ್ತಿದ್ದು, ಜಿಲ್ಲಾ ಚುನಾವಣಾ ಆಯೋಗದ ವರದಿಗಳ ಪ್ರಕಾರ ಬೆಳಗಾವಿ ಜಿಲ್ಲೆಯಲ್ಲಿ 100 ವರ್ಷ ದಾಟಿದ 1,536 ಮತದಾರರಿದ್ದಾರೆ. ಇವರೆಲ್ಲರೂ ಈ ಭಾರಿ ಮೇ 10 ರಂದು ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಮತದಾನ ಮಾಡಲು ಅರ್ಹರಾಗಿದ್ದಾರೆ.

ಹೌದು....ಸದ್ಯ ರಾಜ್ಯ ವಿಧಾನಸಭೆ ಚುನಾವಣೆ ಹತ್ತಿರವಾಗುತ್ತಿದ್ದು, ಚುನಾವಣಾ ಆಯೋಗ ಈ ಬಾರಿ ಶೇ 90 ರಷ್ಟು ಮತದಾನದ ಗುರಿಯನ್ನು ಹೊಂದಿದೆ. ಚುನಾವಣಾ ಆಯೋಗ ರಾಜ್ಯದಲ್ಲಿ 100 ವರ್ಷ ಮೇಲ್ಪಟ್ಟ ಮತದಾರರ ಅಂಕಿ–ಅಂಶವನ್ನು ಬಿಡುಗಡೆ ಮಾಡಿದೆ. ಅದರಂತೆ ಬೆಳಗಾವಿ ಜಿಲ್ಲಾ ಚುನಾವಣಾ ಆಯೋಗದ ವರದಿಗಳ ಪ್ರಕಾರ ಜಿಲ್ಲೆಯಲ್ಲಿ 100 ವರ್ಷ ದಾಟಿದ 1,536 ಮತದಾರರಿದ್ದು, ಮೇ 10 ರಂದು ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಮತದಾನ ಮಾಡಲು ಅರ್ಹರಾಗಿದ್ದಾರೆ.

ಶತಾಯುಷಿಗಳು ಯಾವ ಜಿಲ್ಲೆಯಲ್ಲಿ, ಎಷ್ಟು?: ರಾಜ್ಯದಲ್ಲಿ ಮೈಸೂರು ಮೊದಲ ಸ್ಥಾನದಲ್ಲಿದರೆ ಬೆಳಗಾವಿ ಎರಡನೇ ಸ್ಥಾನದಲ್ಲಿದೆ. ಮೈಸೂರು (1,744), ಬೆಳಗಾವಿ (1,536), ಬೆಂಗಳೂರು ನಗರ (1,191), ಬೆಂಗಳೂರು ಉತ್ತರ (1,133), ಮತ್ತು ಬೆಂಗಳೂರು ದಕ್ಷಿಣ (922) ಮತದಾರರ ಪಟ್ಟಿಯಲ್ಲಿನ ಟಾಪ್ 5 ಜಿಲ್ಲೆಗಳಾಗಿವೆ. ಬೆಳಗಾವಿ ಜಿಲ್ಲಾ ಚುನಾವಣಾ ಆಯೋಗದ ಪ್ರಕಾರ , ಜಿಲ್ಲೆಯ 18 ಕ್ಷೇತ್ರಗಳಲ್ಲಿ 1,536 ನೋಂದಾಯಿತ ಶತಾಯುಷಿ ಮತದಾರರಲ್ಲಿ, ಕುಡಚಿ ಕ್ಷೇತ್ರ (190) ಮೊದಲ ಸ್ಥಾನದಲ್ಲಿದ್ದರೆ,



ಕಿತ್ತೂರು ಕ್ಷೇತ್ರ (38) ಕೊನೆ ಸ್ಥಾನದಲ್ಲಿದೆ. ಈ ಜಿಲ್ಲೆಯಲ್ಲಿ 80 ವರ್ಷ ಮೇಲ್ಪಟ್ಟ ಸುಮಾರು 1.1 ಲಕ್ಷ ಮತದಾರರಿದ್ದಾರೆ. ಇವರ ಮತದಾನಕ್ಕೆ ಅನುಕೂಲವಾಗಲು, ಚುನಾವಣಾ ಆಯೋಗವು ಮನೆಯಿಂದ ಮತದಾನ ಸೌಲಭ್ಯದ ಅಡಿಯಲ್ಲಿ ಅಂಚೆ ಮತದಾನವನ್ನು ಪರಿಚಯಿಸಿದೆ.

ಬೆಳಗಾವಿ ಜಿಲ್ಲೆಯಲ್ಲಿರುವ ಮತದಾರರು: ಮಾರ್ಚ್ 27 ರವರೆಗಿನ ಅಂಕಿಅಂಶಗಳ ಪ್ರಕಾರ, ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 39,01,645 ಮತದಾರರಿದ್ದಾರೆ.

ಅದರಲ್ಲಿ 19,68,928 ಪುರುಷರು ಮತ್ತು 19,32,576 ಮಹಿಳೆಯರು ಮತ್ತು 141 ಇತರರು ನೋಂದಾಯಿಸಿಕೊಂಡಿದ್ದಾರೆ. ಕುಡಚಿಯಲ್ಲಿ ಅತಿ ಕಡಿಮೆ ಮಹಿಳಾ ಮತದಾರರಿದ್ದರೇ, ಗೋಕಾಕದಲ್ಲಿ ಅತಿ ಹೆಚ್ಚು ಮಹಿಳಾ ಮತದಾರರಿದ್ದಾರೆ.

30–39 ವರ್ಷದೊಳಗಿನ 9,12,169 ಮತದಾರರು, 40–49 ವರ್ಷದೊಳಗಿನ 7,96,696, 20–29 ವರ್ಷದೊಳಗಿನ 7,81,767, 50–59 ವರ್ಷದೊಳಗಿನ 6,12,718, 60–69 ವರ್ಷದೊಳಗಿನ 4,03,404, 70–79 ವರ್ಷದೊಳಗಿನ 2,22,777, 80–89 ವರ್ಷದೊಳಗಿನ 80,973, 90–99 ವರ್ಷದೊಳಗಿನ 17,525 ಮತದಾರರು ಇದ್ದಾರೆ.

ಇದೇ ವೇಳೆ ಬೆಳಗಾವಿ ಜಿಲ್ಲೆಯಲ್ಲಿ 18–19 ವರ್ಷದೊಳಗಿನ 83,073 ಯುವ ಮತದಾರರು (ಏಪ್ರಿಲ್ 3ರವರೆಗೆ) ಹೊಸದಾಗಿ ಸೇರ್ಪಡೆಗೊಂಡಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಈ ಮತದಾರರು ಭಾಗವಹಿಸುವ ನಿರೀಕ್ಷೆಯಿದೆ.

ನಾಮಪತ್ರ ಸಲ್ಲಿಕೆ ಆರಂಭವಾಗುವ ಮುನ್ನ ಏಪ್ರಿಲ್ 11ರವರೆಗೆ ಮತದಾರರ ಪಟ್ಟಿಗೆ ಹೆಸರು ಸೇರಿಸಬಹುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ತಿಳಿಸಿದ್ದಾರೆ. ಶತಕವೀರ ಮತದಾರರ ಸಂಖ್ಯೆ ಇದುವರೆಗೆ ಅತ್ಯಧಿಕವಾಗಿದೆ. ಇವರಲ್ಲಿ ಬಹುತೇಕರು ರಾಜ್ಯದ ಎಲ್ಲಾ ಚುನಾವಣೆಗಳಿಗೆ ಸಾಕ್ಷಿಯಾಗಿದ್ದಾರೆ ಎಂದು ರಾಜ್ಯ ಚುನಾವಣಾ ಆಯೋಗ ತಿಳಿಸಿದೆ.

## ಮುಂಡ್ರಿಗಿ ನಾಗರಾಜ್ ಅಬ್ಬರದ ಪ್ರಚಾರ



ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಜೆ. ಎನ್.ಗಣೇಶ್ ಪರ ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಬಿ.ಮುಂಡ್ರಿಗಿ ನಾಗರಾಜ್ ಕ್ಷೇತ್ರದ ಹಲವು ಹಳ್ಳಿಗಳಿಗೆ ತೆರಳಿ ಪ್ರಚಾರ ನಡೆಸಿದರು.ಜನಾಶಿರ್ವಾದ ಭೇಟಿ ಕಾರ್ಯಕ್ರಮದ ಅಂಗವಾಗಿ ಕ್ಷೇತ್ರದ ಲಕ್ಷ್ಮಿನಗರ ಕ್ಯಾಂಪ್, ಕೋಳೂರು ಕ್ರಾಸ್ ಇಂದ್ರನಗರ, ಎಮ್ಮಿಗನೂರು ಸೇ–ರಿದಂತೆ ವಿವಿಧ ಗ್ರಾಮಗಳಲ್ಲಿ ಶಾಸಕ ಜೆ.ಎನ್.ಗಣೇಶ್ ಅವರು ಮಾಡಿರುವ ಅಭಿವೃದ್ಧಿ ಕಾರ್ಯಗಳು ಹಾಗೂ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಬಗ್ಗೆ ಮತದಾರರಿಗೆ ಕರ ಪತ್ರ ಹಂಚಲಾಯಿತು.

ಈ ಸಂದರ್ಭದಲ್ಲಿ ಪಕ್ಷದ ಮಯಖಂಡರುಗಳಾದ ಎಲ್. ಮಾರೆಣ್ಣ, ಸಣ್ಣ ನಾಗರಾಜ, ಫೋಟೊರಾಜ, ನಾಗರಾಜ ಇದ್ದರು.

## ಧಾರವಾಡದಲ್ಲಿ ಓಲಾದ ಮೊದಲ ಎಕ್ಸ್‌ಪೀರಿಯೆನ್ಸ್ ಸೆಂಟರ್ ಪ್ರಾರಂಭ

ಧಾರವಾಡ: ಭಾರತದ ಅತ್ಯಂತದೊಡ್ಡ ಇವಿ ಕಂಪನಿ ಓಲಾ ಎಲೆಕ್ಟ್ರಿಕ್ ದೇಶಾದ್ಯಂತ ಒಂದೇ ದಿನದಲ್ಲಿ 50 ಎಕ್ಸ್‌ಪೀರಿಯೆನ್ಸ್ ಸೆಂಟ–ರ್‌ಗಳನ್ನು ತೆರೆದಿದೆ.

ಈ ವಿದ್ಯುಚ್ಛಾಲಿತ ವಾಹನಗಳ ಉತ್ಪಾದಕರು ಲಭ್ಯತೆ ಹೆಚ್ಚಾಗಲು ಭಾರತದಾದ್ಯಂತ ಎಕ್ಸ್‌ಪೀ–ರಿಯೆನ್ಸ್ ಸೆಂಟರ್‌ಗಳನ್ನು ತೆರೆಯುತ್ತಿದೆ ಮತ್ತು ಭಾರತದಲ್ಲಿ ವಿದ್ಯುಚ್ಛಾಲಿತ ವಾಹನಗಳಿಗೆ ಹೆಚ್ಚಾಗುತ್ತಿರುವ ಬೇಡಿಕೆಯನ್ನು ಪೂರೈಸುತ್ತಿದೆ.

ಕಂಪನಿಯು ಧಾರವಾಡದಲ್ಲಿ ತನ್ನ ಡಿ2ಸಿ ವ್ಯಾಪ್ತಿ ವಿಸ್ತರಣೆಯನ್ನುತನ್ನ ಮೊದಲ ಓಲಾ ಎಕ್ಸ್‌ಪೀರಿಯೆನ್ಸ್ ಸೆಂಟರ್‌ಅನ್ನು ಧಾರವಾಡದ ಪಿ.ಬಿ. ರಸ್ತೆಯ ಮಾಳಮಡ್ಡಿಯಲ್ಲಿ ತೆರೆಯುವ ಮೂಲಕ ಪ್ರಕಟಿಸಿದೆ.

ಓಲಾದ ಚೀಫ್ ಮಾರ್ಕೆಟಿಂಗ್ ಆಫೀಸರ್ ಅನ್ಷುಲ್ ಖಂಡೇಲ್ವಾಲ್, "ಖರೀದಿಸುವ ಪ್ರಯಾಣವನ್ನು ಹೆಚ್ಚು ತಲ್ಲೀನಗೊಳಿಸುವ ಮತ್ತು ಲಭ್ಯವಿರುವ ಅನುಭವವಾಗಿಸಲು ನಾವು ದೇಶದಎಲ್ಲ ಪ್ರಮುಖ ನಗರಗಳಲ್ಲಿಯೂ



ಆಫ್‌ಲೈನ್ ವ್ಯಾಪ್ತಿಯನ್ನು ವಿಸ್ತರಿಸುತ್ತಿದ್ದೇವೆ. ನಮ್ಮಆಫ್‌ಲೈನ್ ವ್ಯಾಪ್ತಿಯ ವೇಗ ಮತ್ತು ಪ್ರಮಾಣವನ್ನು ಮತ್ತಷ್ಟು ತೀವ್ರಗೊಳಿಸುವುದು ಅಗತ್ಯ ಎಂದು ನಂಬಿದ್ದು ಇದು ದೇಶದ ಮೂಲೆ ಮೂಲೆಗಳಲ್ಲಿರುವ ಕೋಟ್ಯಂತರ ಭಾರತೀಯರಿಗೆ ನಮ್ಮ ಉತ್ಪನ್ನಗಳು ಹಾಗೂ ಸೇವೆಗಳಿಗೆ ತಡೆರಹಿತ ಅನುಭವ ನೀಡುತ್ತವೆ" ಎಂದರು.

ಓಲಾ ಎಕ್ಸ್‌ಪೀರಿಯೆನ್ಸ್ ಸೆಂಟ–ರ್‌ಗಳನ್ನು ಒಂದೇ ತಾಣದಲ್ಲಿ ಗ್ರಾಹಕರಿಗೆ ಸಮಗ್ರ ಸೇವೆಗಳ ಶ್ರೇಣಿಯನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಶೇ.90ರಷ್ಟು ಓಲಾ ಗ್ರಾಹಕರು ಓಲಾ ಎಕ್ಸ್‌ಪೀರಿಯೆನ್ಸ್ ಸೆಂಟರ್‌ನ 20 ಕಿ.ಮೀ. ವ್ಯಾಪ್ತಿಯಲ್ಲಿ ವಾಸಿಸುತ್ತಾರೆ.

ಓಲಾ ಎಕ್ಸ್‌ಪೀರಿಯೆನ್ಸ್ ಸೆಂಟರ್ ಗ್ರಾಹಕ–ರಿಗೆ ಎಸ್1 ಮತ್ತು ಎಸ್1 ಪ್ರೊ ಮಾದರಿಗಳ ಟೆಸ್ಟ್‌ರೈಡ್ ಮಾಡುವ, ಖರೀದಿ ಪ್ರಕ್ರಿಯೆಗೆ ಮಾರ್ಗದರ್ಶನ ಪಡೆಯುವ ಅವಕಾಶ ಹೊಂದುತ್ತಾರೆ. ಗ್ರಾಹಕರು ಮಳಿಗೆಗಳಲ್ಲಿ ಹಣಕಾಸು ಆಯ್ಕೆಗಳ ಮಾಹಿತಿಯನ್ನೂ ಪಡೆಯಬಹುದು ಮತ್ತು ಓಲಾ ಆ್ಯಪ್ ಮೂಲಕ ಖರೀದಿ ಪ್ರಯಾಣವನ್ನು ಪೂರ್ಣಗೊಳಿಸಬಹುದು.

ಭಾರತವನ್ನು 2025ರ ವೇಳೆಗೆ ಎಲ್ಲ ದ್ವಿಚಕ್ರ ವಾಹನಗಳನ್ನು ವಿದ್ಯುಚ್ಛಾಲಿತವಾಗಿಸುವ ಉದ್ದೇಶದಿಂದ ಓಲಾ ವಿದ್ಯುಚ್ಛಾಲಿತ ವಾಹನಗಳಿಗೆ ಸದೃಢಯೋಜನೆ ರೂಪಿಸಿದ್ದು ಸುಸ್ಥಿರ ಎಲೆಕ್ಟ್ರಿಕ್ ಮೊಬಿಲಿಟಿಯತ್ತ ಜಾಗತಿಕ ಪರಿವರ್ತನೆಗೆ ಬೆಂಬಲಿಸುತ್ತಿದೆ.

# ಬಿಜೆಪಿಗೆ ಸ್ಪಷ್ಟ ಬಹುಮತ ನೀಡಿ: ಸಚಿವ ಡಾ.ಕೆ.ಸುಧಾಕರ್

ಬೆಂಗಳೂರು: ಬಿಜೆಪಿಗೆ ಒಮ್ಮೆ ಸ್ಪಷ್ಟ ಬಹುಮತ ನೀಡಿದರೆ, ಐದು ವರ್ಷಗಳಲ್ಲಿ ರಾಮರಾಜ್ಯದ ಪರಿಕಲ್ಪನೆ ಸಾಕಾರಗೊಳಿಸಲಾಗುವುದು ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ರಾಜ್ಯಕ್ಕೆ ಸಮ್ಮಿಶ್ರ ಸರ್ಕಾರವು ಶಾಪವಾಗಿದೆ. ಇಂತಹ ಸರ್ಕಾರಗಳಿಂದ ಅಭಿವೃದ್ಧಿ ಕುಂಠಿತವಾಗುತ್ತದೆ ಎಂಬುದನ್ನು ನೋಡಿದ್ದೇವೆ. ಆದ್ದರಿಂದ ಜನರು ಸ್ಪಷ್ಟವಾದ ಬಹುಮತವನ್ನು ಜನರು ಬಿಜೆಪಿ ನೀಡಬೇಕು. ಕೇಂದ್ರದಲ್ಲಿರುವ ಪಕ್ಷದ ಸರ್ಕಾರವೇ ರಾಜ್ಯದಲ್ಲೂ ಇದ್ದರೆ, ಅನುದಾನ ತರಲು, ಯೋಜನೆ ನೀಡಲು ಸುಲಭವಾಗುತ್ತದೆ. ಕರ್ನಾಟಕದ ಜನರು ಹೆಚ್ಚು ರಾಜಕೀಯ ಪ್ರಜ್ಞೆ ಹೊಂದಿದ್ದಾರೆ ಎಂದರು.

ಬಿಜೆಪಿಗೆ ರಾಜ್ಯದಲ್ಲಿ ಸ್ಪಷ್ಟವಾದ ಬಹುಮತ ಸಿಕ್ಕಿಲ್ಲ. ಕೇಂದ್ರದಲ್ಲಿ ಪ್ರಧಾನಿ ಮೋದಿಯವರಿಗೆ ಸ್ಪಷ್ಟ ಬಹುಮತ ಸಿಕ್ಕಿದ್ದರಿಂದ ಅವರು ದಿಟ್ಟ ತೀರ್ಮಾನಗಳನ್ನು ಕೈಗೊಳ್ಳಲು ಸಾಧ್ಯವಾಯಿತು. ಅದೇ ರೀತಿ ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಬಹುಮತ ಕೊಟ್ಟರೆ, ಐದು ವರ್ಷಗಳಲ್ಲಿ ರಾಮರಾಜ್ಯದ ಪರಿಕಲ್ಪನೆ ಸಾಕಾರ



ಗೊಳಿಸಲಾಗುವುದು ಎಂದರು.

ಕೋವಿಡ್ ಬಂದು ಆರ್ಥಿಕ, ಸಾಮಾಜಿಕ ವ್ಯವಸ್ಥೆಗೆ ಧಕ್ಕೆಯುಂಟುಮಾಡಿದಾಗ ಪ್ರಧಾನಿ ನರೇಂದ್ರ ಮೋದಿಯವರು ದಿಟ್ಟ ನಾಯಕತ್ವ ತೋರಿದರು.

ವಸುದೈವ ಕುಟುಂಬಕಂ ಎಂಬ ಆದರ್ಶದಲ್ಲಿ ನಂಬಿಕೆ ಇಟ್ಟಿರುವ ಪ್ರಧಾನಿ ಮೋದಿಯುವರು, ಬಡ ದೇಶಗಳಿಗೆ ಕೋವಿಡ್ ಲಸಿಕೆ ಪೂರೈಸಿ ಹೃದಯ ಶ್ರೀಮಂತಿಕೆ ಮೆರೆದಿದ್ದರು.

ದೇಶದಲ್ಲಿ 220 ಕೋಟಿ ಹಾಗೂ ರಾಜ್ಯದಲ್ಲಿ 12 ಕೋಟಿಗೂ ಅಧಿಕ ಲಸಿಕೆಗಳನ್ನು ನೀಡಲಾಗಿದೆ. ರಾಜ್ಯದಲ್ಲಿ 1.15 ಕೋಟಿ ಬೂಸ್ಟರ್ ಡೋಸ್ ನೀಡಲಾಗಿದೆ.

ರಾಜ್ಯಕ್ಕೆ ಉಚಿತವಾಗಿ ನೀಡಿದ ಲಸಿಕೆಗಳ ಬೆಲೆ 2,141 ಕೋಟಿ ರೂ. ಆಗಿದ್ದು, ಇದನ್ನು ಕೇಂದ್ರವೇ ನೀಡಿದೆ ಎಂದರು.

ಮುಂದುವರಿದ ದೇಶಗಳು ಕೂಡ ಕೋವಿಡ್ ಅನ್ನು ಭಾರತದಂತೆ ನಿರ್ವಹಣೆ ಮಾಡಲು ಸಾಧ್ಯವಾಗಲಿಲ್ಲ.

ಅಮೆರಿಕ ಸೇರಿದಂತೆ ಅನೇಕ ದೇಶಗಳು ಮೊದಲ ಅಲೆಯಲ್ಲೇ ತತ್ತರಿಸಿಹೋಗಿದ್ದವು. ಮೊದಲ ಅಲೆಯಲ್ಲಿ ಭಾರತ ಉತ್ತಮವಾಗಿ ನಿಯಂತ್ರಣ ಮಾಡಿದೆ.

ಪ್ರಧಾನಿ ಮೋದಿಯವರು ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ, ಉಚಿತವಾದ ಅಕ್ಕಿ ನೀಡಿದರು. ರಾಜ್ಯದ್ದು ಕೂಡ ಸೇರಿ ಮೂರು ವರ್ಷಗಳ ಕಾಲ ತಲಾ 10 ಕೆಜಿ ನೀಡಲಾಗಿದೆ ಎಂದರು.

**ಲಸಿಕೆಯಲ್ಲಿ ರಾಜಕೀಯ**

ಲಸಿಕೆ ಬರುವ ಮುನ್ನವೇ ಕಾಂಗ್ರೆಸ್ ರಾಜಕೀಯ ಆರಂಭಿಸಿತ್ತು. ದೇಶಕ್ಕೆ ತುರ್ತು ಪರಿಸ್ಥಿತಿ ಬಂದಾಗ ಎಲ್ಲಾ ರಾಜಕೀಯ ಪಕ್ಷಗಳು ದೇಶವನ್ನು ಕಾಪಾಡುತ್ತವೆ. ಆದರೆ ಕಾಂಗ್ರೆಸ್ ಎಲ್ಲದರಲ್ಲೂ ರಾಜಕಾರಣವನ್ನು ಬೆರೆಸಿದೆಯೇ ಹೊರತು, ಸರ್ಕಾರಕ್ಕೆ ಸಹಕಾರ ನೀಡಲಿಲ್ಲ. *ಇದು ಜನರಿಗೆ ಮಾಡಿದ ಘೋರ ಅಪರಾಧ. ಆದ–'ರೂ ಪ್ರಧಾನಿಯವರ ನಾಯಕತ್ವದಲ್ಲಿ ಸಮರ್ಥವಾಗಿ ಕೋವಿಡ್ ಎದುರಿಸಿ ಹಿಂದಿನ ಸ್ಥಿತಿಗೆ ಮರಳಿದ್ದೇವೆ. ಆರ್ಥಿಕ ಪರಿಸ್ಥಿತಿ ಕೂಡ ಚೇತ–ರಿಸಿಕೊಂಡಿದೆ ಎಂದರು.

## ಮೇ–2023ಕ್ಕೆ "ರಾಜ್ಯಕ್ಕೆ ಸಿದ್ದಣ್ಣ, ಕಾಗವಾಡಕ್ಕೆ ರಾಜಣ್ಣ"

# ಮುಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಾಲುಮತ ಸಮಾವೇಶದಲ್ಲಿ ಘೋಷಣೆ

ಮೋಳೆ: ಹಾಲುಮತ (ಕುರುಬ) ಸಮಾಜ ಬಂಧವರು ವೀರ ಸಂಗೊಳ್ಳಿ ರಾಯಣ್ಣನ ವಂಶಸ್ಥರು.ಒಮ್ಮೆ ಮಾತು ಕೊಟ್ಟರೆ ಸಾಕು ಕೋಟಿ ಕೋಟಿ ಹಣ ಕೊಟ್ಟರು ತಮ್ಮ ನಿರ್ಧಾರವನ್ನು ಬದಲಿಸುವುದಿಲ್ಲ. ಇಂದು ಎಲ್ಲರು ಕೂಡಿ ಭಂಡಾರ ಹಚ್ಚಿಕೊಂಡು ಪ್ರಮಾಣ ಮಾಡಿದ್ದಾರೆ ಎಂದರೆ ಮೇ 2023 ಕ್ಕೆ ರಾಜಕ್ಕೆ ಸಿದ್ದಣ್ಣ, ಕಾಗವಾಡಕ್ಕೆ ರಾಜಣ್ಣ ಗೆಲುವು ಖಚಿತ ಎಂದು ಅಥಣಿ ತಾಲೂಕಾ ಹಾಲುಮತ ಸಮಾಜದ ಅಧ್ಯಕ್ಷ ಹಾಗೂ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ರಾವಸಾಹೇಬ ಬೆವನೂರ ಹೇಳಿದರು.

ಅವರು ಶನಿವಾರ ದಿ.8 ರಂದು ಕಾಗವಾಡ ಮತಕ್ಷೇತ್ರದ ಉಗಾರ ಪಟ್ಟಣದ ಹೊರ ವಲಯದ ದಿ. ಆಲಗೌಡ ಕಾಕಾ ಕಾಗೆ ಕಲ್ಯಾಣ ಮಂಟಪದಲ್ಲಿ ಅಥಣಿ ಹಾಗೂ ಕಾಗವಾಡ ತಾಲೂಕಿನ ಹಾಲುಮತ(ಕುರುಬ) ಸಮಾಜದ ಬೃಹತ್ ಸಮಾವೇಶವನ್ನುದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಾರಿಗೆ ತಂದಿರುವ ಕುರಿ ಭಾಗ್ಯ ಸೇರಿದಂತೆ



150 ಕ್ಕೂ ಅಧಿಕ ಭಾಗ್ಯಗಳನ್ನು ಇಂದಿನ ಬಿಜೆಪಿ ಸರಕಾರ ಸ್ಥಗಿತಗೊಳಿಸಿದೆ.ಅದಕ್ಕಾಗಿ ಸಿದ್ದರಾಮಯ್ಯನವರನ್ನು ಮತ್ತೊಂದು ಬಾರಿಗೆ ಈ ರಾಜ್ಯದ ಮುಖ್ಯಮಂತ್ರಿಯನ್ನಾಗಿ ಮಾಡಲು ಕುರುಬ ಸಮಾಜ ರಾಜ್ಯಾಧ್ಯಂತ ಸಂಕಲ್ಪ ಮಾಡಿದೆ ಎಂದರು.ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಬೇಕಾದರೆ ಕಾಗವಾಡ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಾಜು ಕಾಗೆಯವರ ಬೆಂಬಲಕ್ಕೆ ನಿಲ್ಲಬೇಕಾಗುತ್ತದೆ.

ಹಾಲುಮತ ಸಮಾಜ ಮುಗ್ದ ಸಮಾಜ ಒಮ್ಮೆ ಮಾತು ಕೊಟ್ಟರೆ ಸಾಕು ಪ್ರಾಣ ಕೊಡುತ್ತಾರೆ ಹೊರತು ಮಾತಿಗೆ ತಪ್ಪಲ್ಲ. ಪೂರ್ವಕ್ಕೆ ಸೂರ್ಯ ಉದಯಿಸುವುದು ಎಷ್ಟು ಸತ್ಯವೋ ರಾಜ್ಯಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗುವುದು,ಕಾಗವಾಡದಲ್ಲಿ ರಾಜು ಕಾಗೆ ಶಾಸಕರಾಗುವುದು ಅಷ್ಟೇ ಸತ್ಯ ಎಂದು ರಾವಸಾಹೇಬ ಬೆವನೂರ ನುಡಿದರು.

ಅದಕ್ಕೆ ನೆರದಿದ್ದ ನೂರಾರು ಹಾಲುಮತದ ಸಮಾಜದ ಕಾರ್ಯಕರ್ತರು ಮಹಿಳೆಯರು ಕೈ ಮೇಲೆತ್ತಿ ತಮ್ಮ ಬೆಂಬಲವನ್ನು ಸೂಚಿಸಿದರು.

ಮಾಜಿ ಶಾಸಕ ರಾಜು ಕಾಗೆ ಮತನಾಡಿ 2018 ರಲ್ಲಿ ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಖಿಳೇಗಾಂವ ಬಸವೇಶ್ವರ ಏತ ನೀರಾವರಿಗೆ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ, ನೀರಾವರಿ ಸಚಿವ ಎಂ.ಬಿ,ಪಾಟೀಲ, ಸಂಸದ ಪ್ರಕಾಶ ಹುಕ್ಕೇ–ರಿಯವರು ಹಣ ಬಿಡುಗಡೆಗೊಳಿಸಿ ಮದಭಾವಿ ಗ್ರಾಮದಲ್ಲಿ ಶಂಕುಸ್ಥಾಪನೆ ಮಾಡಿದ್ದರು.ಆದರೆ ಈಗಿನ ಶಾಸಕರು ಖಿಳೇಗಾಂವ ಬಸವೇಶ್ವರ ಏತ ನೀರಾವರಿ ನಾನೇ ಮಾಡಿಸಿಕೊಂಡು ಬಂದಿದ್ದೇವೆ ಎಂದು ಸುಳ್ಳು ಹೇಳುತ್ತಿದ್ದಾರೆ. ಬಸವೇಶ್ವರ ಏತ ನೀರಾವರಿ ಯೋಜನೆ ಮಂಜೂರಾದ ಸಂದರ್ಭದಲ್ಲಿ ಈಗಿನ ಶಾಸಕರು ಗ್ರಾಮ ಪಂಚಾಯತ್ ಸದಸ್ಯರಾಗಿಯೂ ಇರಲಿಲ್ಲ.

ಹಾಗೇದರೆ ಅವರು ಹೇಗೆ ಮಂಜೂರು ಮಾಡಿಸಿಕೊಂಡು ಬಂದರು ಎಂದು ನೀವೇ ಹೇಳಿ ಎಂದು ರಾಜು ಕಾಗೆ ಪ್ರಶ್ನಸಿದರು.

ಇನ್ನು ಶೇ.40 ರಷ್ಟು ಕಾಮಗಾರಿ ಬಾಕಿ ಇದೆ.2018 ರಲ್ಲಿ ಸಿದ್ದರಾಮಯ್ಯನವರು ಶಂಕುಸ್ಥಾಪನೆ ಮಾಡಿದ್ದರು 2023ಕ್ಕೆ ಸಿದ್ದರಾಮಯ್ಯನವರೆ ಉದ್ಘಾಟನೆಗೊಳಿಸುತ್ತಾರೆ ಎಂದರು. ಈಗಿನ ಶಾಸಕರು ಸುಳ್ಳು ಹೇಳುವುದನ್ನು ಬಿಟ್ಟು ಸತ್ಯಾಂಶವನ್ನು ಹೇಳಿಲಿ ಎಂದರು.

ಯಾವುದೇ ಕಾಮಗಾರಿ ಮಂಜೂರಾಗಿಲ್ಲ.

ಚುನಾವಣೆ ಘೋಷಣೆಗೂ ಮುಂಚೆ ಸರಕಾರದಿಂದ ಯಾವುದೇ ಕಾಮಗಾರಿಗಳು ಮಂಜೂರಾತಿ ಇಲ್ಲದೆ ಪ್ರತಿ ಗ್ರಾಮಗಳಲ್ಲಿ ಸಮುದಾಯ ಭವನ, ಗುಡಿ, ಗುಂಡಾರಗಳು, ರಸ್ತೆಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಜನರ ದಿಕ್ಕು ತಪ್ಪಿಸುತ್ತಿದ್ದಾರೆ. ಈ ಕುರಿತು ಅಧಿಕಾ–ರಿಗಳನ್ನು ಕೇಳಿದರೆ ಬಹುತೇಕ ಕಾಮಗಾ–ರಿಗಳು ಇನ್ನು ಟೆಂಡರ ಆಗಿಲ್ಲ ಎಂದು ಹೇಳುತ್ತಾರೆ. ಚುನಾವಣೆಯಲ್ಲಿ ಸುಳ್ಳುಹೇಳಿ ಮತ ಗಿಟ್ಟಿಕೊಳ್ಳಲು ಮಾಡುತ್ತಿರುವ ಹುನ್ನಾರ ಎಂದ ಅವರು ಇಂದು ಜನ ಜಾಗೃತ–ರಿದ್ದಾರೆ. ನೀವು ಎಷ್ಟೇ ಸುಳ್ಳು ಹೇಳಿದರು ಈ ಚುನಾವಣೆಯಲ್ಲಿ ನಿಮಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಈ ವೇಳೆ ಕಾಗವಾಡ ಬ್ಲಾಕ್ ಅಧ್ಯಕ್ಷರಾದ ವಿಜಯಕುಮಾರ ಅಕಿವಾಟೆ,ಓಂಪ್ರಕಾಶ ಪಾಟೀಲ ಮಹಿಳಾ ಘಟಕದ ಅಧ್ಯಕ್ಷೆ ರೇಖಾ ಪುಂಜಪ್ಪಗೊಳ, ಯುಥ ಕಾಂಗ್ರೆಸ್ ಅಧ್ಯಕ್ಷ ಪ್ರಶಾಂತ ಅಪರಾಜ್,ಡಾ,ಶಿದ್ದಗೌಡ ಕಾಗೆ ಸೇರಿದಂತೆ ಹಲವಾರು ಮುಖಂಡರು, ಕಾರ್ಯಕರ್ತರು ಮಾತನಾಡಿ ಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುವುದಾಗಿ ಒಕ್ಕೋರಲಿನಿಂದ ಅಭಿಪ್ರಾಯ ವ್ಯಕ್ತ ಪಡಿಸಿದರು.

# ಸಂಘ ಸಂಸ್ಥೆ ಟ್ರಸ್ಟಗಳಿಗೆ ಗರಿಷ್ಠ ಐದು ಲಕ್ಷ ನೀಡಲು ಒಪ್ಪಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅದರಂತೆ ನಡೆದುಕೊಳ್ಳಬೇಕು: ದಿಲಿಪಕುಮಾರ ಭೋಸ್ಲೆ

ಬೀದರ: ನಗರದ ಹೋಟಲ ಮಯೂರ ಬರಿದಶಾಹಿದ ಸಾಂಸ್ಕೃತಿ–ಕ ಸಾಹಿತಿಕಾ ಕಲಾ ಸಂಘ ಸಂಸ್ಥೆ ಟ್ರಸ್ಟಗಳ ಒಕ್ಕೂಟ ಬೀದರ ವತಿಯಿಂದ ಪತ್ರಿಕಾ ಗೋಷ್ಠಿ ಉದ್ದೇಶಿಸಿ, ಜಿಲ್ಲಾ ಗೌರವ ಅಧ್ಯಕ್ಷ ಎಂ ಜಿ ದೇಶಪಾಂಡೆ, ಜಿಲ್ಲಾಧ್ಯಕ್ಷ ದಿಲೀಪಕುಮಾರ ಭೋಸ್ಲೆ, ಕಾರ್ಯಧ್ಯಕ್ಷ ಸುಧಾಕರ ರಾಜಗೀರಾ ಉಪಾಧ್ಯಕ್ಷರಾದ ಶಂಕರ ಚೊಂಡಿ ದೇವಿದಾಸ ಚಿಮಕೊಡ ಶೇಷಪ್ಪಾ ಚಿಟ್ಟಾ, ರಮೇಶ ದೊಡ್ಡಿ, ಗಂಗಮ್ಮ ಹಾಗೂ ಪ್ರಧಾನ ಕಾರ್ಯದರ್ಶಿ ಸುಬ್ಬಣ್ಣ ಕರಕನಳ್ಳಿ ಮಾತನಾಡಿದರು.

2022–23 ನೇ ಸಾಲಿಗೆ ಎರಡು ಲಕ್ಷ ನೀಡುವ ಆದೇಶ ಪತ್ರ ನೀಡಿ ಮೂರು ಕಾರ್ಯಕ್ರಮಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂ–ಟಿಯಾಗಿ ಮಾಡಬೇಕು ಆದ–'ೇಶದಂತೆ ಮೂರು ಕಾರ್ಯಕ್ರಮಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿ ಸಿಬ್ಬಂದಿವರ್ಗದವರ ಸಮುಖದಲ್ಲಿ ಕಾರ್ಯಕ್ರಮಗಳ ಕಲಾತಂಡ ಯಾಘನಲ್ಲಿ ಜಿಸಿಪಿ ಮಾಡಿಸಿ,ಕಾರ್ಯಕ್ರಮಗಳನ್ನು ನೀಡಲಾಯಿತು.

ಮೂಲಕ ಮಾನ್ಯ ಸರ್ಕಾರದ ಕಾರ್ಯದರ್ಶಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವಿಕಾಸ ಸೌಧ ಬೆಂಗಳುರು. ಮಾನ್ಯ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು, ಮಾನ್ಯ ಜಂಟಿ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ರವರಿಗೆ ಒತ್ತಾಯ




ಮಾಡುವುದೇನೆಂದರೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಿಂದುಳಿದ ಜಿಲ್ಲೆ ಬೀದರ ಜಿಲ್ಲೆಯಾಗಿದೆ. 2022–23 ಸಾಲಿಗೆ ಸತತವಾಗಿ ಈ ಹಿಂದೆ ತನ್ನ ಸ್ವಂತ ಖರ್ಚಿನಲ್ಲಿ ಮತ್ತು ದಿನಾಂಕಃ 03–11–2022 ರಂದು ಮಾನ್ಯ ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ರವರು ನೀಡಿರುವ ಆದೇಶದಂತೆ ಸಾಹಿತ್ಯ , ಸಂಸ್ಕೃತಿ ಜಾನಪದ ಉತ್ಸವ ಕವಿಗೋಷ್ಠಿ ವಿಚಾರ ಗೋಷ್ಠಿಗಳು, ಗ್ರಾಮೀಣ ಮತ್ತು ನಗರ ಜಾನಪದ ಸಂಭ್ರಮ ಕಾರ್ಯಕ್ರಮಗಳನ್ನು ಮಾಡಿರುತ್ತೇನೆ.

ಅದರಂತೆ ಬೀದರ ಜಿಲ್ಲಾ ಕಲಾ ಸಾಹಿತ್ಯ ಸಾಂಸ್ಕೃತಿಕಾ ಸಂಘ ಸಂಸ್ಥೆ ಟ್ರಸ್ಟಗಳು, ತನ್ನ ತನ್ನ ಸ್ವಂತ ಖರ್ಚಿನಲ್ಲಿ ಮೂರು ಕಾರ್ಯಕ್ರಮಗಳು ಮಾಡಿರುತ್ತಾರೆ. ದಿನಾಂಕಃ 27–3–2023 ರಂದು ಐದು ಲಕ್ಷದ ಬದಲಿಗೆ 50 ಸಾವಿರ ಒಂದು ಲಕ್ಷ ಒಂದು ಲಕ್ಷದ ಐವತ್ತು ಸಾವಿರ, ಎರಡು ಲಕ್ಷ ಎರಡುವರೆ ಲಕ್ಷ ಮೂರು ಲಕ್ಷ ಮೂರುವರೆ ಲಕ್ಷ ಹಣವನ್ನು ಬೀಡುಗಡೆಯಾಗಿದೆ.

ಇದರಿಂದ ಬೀದರ ಜಿಲ್ಲಾ ಸಾಂಸ್ಕೃತಿ–ಕಾ ಕಲಾ ಸಾಹಿತ್ಯ ಸಂಘ ಸಂಸ್ಥೆ ಟ್ರಸ್ಟಗಳಿಗೆ ಅನ್ಯಾಯವಾಗಿದೆ. ಐದು ಲಕ್ಷ ಹಣವನ್ನು ಪ್ರತಿ ಸಂಘ ಸಂಸ್ಥೆ ಟ್ರಸ್ಟಗಳಿಗೆ ನೀಡುವ ನೇರವಾದ ಆದ–'ೇಶವಿದ್ದರು.

ಧನಸಹಾಯ ಮಂಜುರಾತಿ ಸಮಿತಿ ರಚನೆ ಮಾಡಿರುವುದು ನ್ಯಾಯವಿಲ್ಲದ ಅನ್ಯಾಯವಾಗಿದೆ. ಈ ಸಮಿತಿ ಕೆಲವು ಸಂಘ ಸಂಸ್ಥೆಗಳಿಗೆ 3 ಲಕ್ಷ ನಾಲ್ಕು ಲಕ್ಷದ ವರೆಗೆ ಹಣ ನೀಡಲು ಶಿಫಾರಸ್ಸು ಮಾಡಿದೆ ಉಳಿದ ಸಂಘ ಸಂಸ್ಥೆ ಟ್ರಸ್ಟಗಳಿಗೆ ಅನ್ಯಾಯ ಮಾಡಿದೆ.

ದಿವ್ಯದರ್ಶನ ರೂರಲ್ ಐಂಡ ಅರ್ಬನ ಡೆವಲಪಮೆಂಟ್ ಸೂಸೈಟಿ, ಕರ್ಮಭೂಮಿ ಜಾನಪದ ಕಲಾ ಸಂಘ ಚೊಂಡಿ, ರಮಾಬಾಯಿ ಮಹಿಳಾ ಸಾಂಸ್ಕೃತಿಕಾ ಸಂಘ ಚಿಕ್ಲಿ , ವಿಶ್ವಶಾಂತಿ ಫೌಂಡೆಶನ್ ಮತ್ತು ಕಲ್ಚರಲ್ ಡೆವಲಂಪಮೆಂಟ್ ಸೂಸೈಟಿ, ಡಾ॥ ಬಿ ಆರ್ ಅಂಬೇಡ್ಕರ ಸಾಂಸ್ಕೃತಿ–ಕಾ ಪ್ರಚಾರ ಕಾರ್ಯ ಸಮಿತಿ ,ಶರಣ ಉರಿಲಿಂಗ ಪೆದ್ದಿಮಠ ಟ್ರಸ್ಟ, ಬುದ್ಧ ಬಸವ ಅಂಬೇಡ್ಕರ ಗ್ರಾಮೀಣ ಮತ್ತು ನಗರ ಸಾಂಸ್ಕೃತಿಕ ಸಂಸ್ಥೆ ರಾಜಗೀರ, ಒನಕೆ ಓಬವ್ವ ಯುವತಿ ಕಲಾ ಸಂಘ, ವಿಶ್ವ ಕನ್ನಡಿಗರ ಸಂಸ್ಥೆ ನೌಬಾದ ಮಂದಾರ ಕಲಾವಿದರ ವೇದಿಕೆ ನಂದಿಶ್ವರ ಕಲಾ ನಾಟ್ಯಾ ಸಂಘ ಚಿಮಕೊಡ ಜೈಭವಾನಿ ರಂಗಕಲಾವಿದರ ಸಂಘ ಚಿಟ್ಟಾ ಕರ್ಮಭೂಮಿ ಜಾನಪದ ಕಲಾವಿದರ ಸಂಘ ಚೊಂಡಿ, ಒಣಕೆ ಒಬವ್ವಾ ಯುವತಿ ಸಾಂಸ್ಕೃತಿ ಸಂಘ ಬೀದರ ನಿಲಾಂಬಿಕ ಮಹಿಳಾ ಸಾಂಸ್ಕೃತಿಕ ಸಂಘ ಬೀದರ ರವರಿಗೆ 5 ಲಕ್ಷ ಹಣವನ್ನು ಮಂಜೂರು ಮಾಡಿ ನೀಡಬೇಕು.

ಮಂಜುರು ಮಾಡಿ ನೀಡದಿದರೆ, ಉಪವಾಸ ಸತ್ಯಗೃಹವನ್ನು ಹಮ್ಮಿಕೊಳ್ಳಲಾಗುವುದೆಂದು ಡಾ॥ ಬಿ. ಆರ್ ಅಂಬೇಡ್ಕರ ಪ್ರಚಾರ ಸಮಿತಿ ಸಾಂಸ್ಕೃತಿಕ ಕಾರ್ಯ ಸಮಿತಿ ಅಧ್ಯಕ್ಷ ರಮೇಶ ದೊಡ್ಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಂಡಾಯ ಅಭ್ಯರ್ಥಿ ಮನವೊಲಿಸುವ ಪ್ರಯತ್ನ ನಡೆಯಲಿದೆ: ಸತೀಶ ಜಾರಕಿಹೊಳಿ




ಬೆಳಗಾವಿ: "ಟಿಕೆಟ್ ನೀರಿಕ್ಷೆಯಲ್ಲಿದ್ದ ಅಭ್ಯರ್ಥಿಗಳು ಕೈ ತಪ್ಪಿದರಿಂದ ನಿರಾಸೆಯಾಗುವುದು ಸಹಜ, ಅವರನ್ನು ಮನವೊಲಿಸುವ ಪ್ರಯತ್ನಗಳು ನಡೆಯಲಿದೆ " ಎಂದು ಕೆಪಿಸಿಸಿ ಕಾರ್ಯಧ್ಯಕ್ಷ ಸತೀಶ ಜಾರಕಿಹೊಳಿ ಅವರು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಪ್ರತಿ–ಕಾಗೋಷ್ಠಿಯಲ್ಲಿ ಮಾತಾಡಿದ ಅವರು, ಕಾಂಗ್ರೆಸ್ ನಿಂದ ಗೋಕಾಕ ಕ್ಷೇತ್ರದಿಂದ ಸ್ಪರ್ಧಿಸಲು ಮಹಾಂತೇಶ ಕಡಾಡಿ ಅವರನ್ನು ಕಣಕ್ಕೆ ಇಳಿಸಲಾಗಿದೆ. ಹೈಕಮಾಂಡ್ ತೀರ್ಮಾನ ಅಂತಿಮ ತೀರ್ಮಾನ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಹೇಳಿದರು.

ಯಾವ ಕ್ಷೇತ್ರದಕ್ಕೆ ಯಾವ ಅಭ್ಯರ್ಥಿ ಸೂಕ್ತ ಎಂದು ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ಮಾಡುತ್ತದೆ. ನಾವು ಕೇಳಿದ ವ್ಯಕ್ತಿಗೆ ಟಿಕೆಟ್ ಸಿಗಬೇಕೆಂಬವುದು ನಿರ್ಧಾರ ಇಲ್ಲ ಎಂದ ಅವರು, ಬಂಡಾಯದ ಕ್ಷೇತ್ರದಲ್ಲಿ ಕಾಂಗ್ರೆಸ್ ಮುಖಂಡರನ್ನು ಮನವೊಲಿಸುವ ಪ್ರಯತ್ನಗಳು ನಡೆದಿವೆ. ಟಿಕೆಟ್ ನೀಡಿದ ಅಭ್ಯರ್ಥಿಯ ಗೆಲುವಿಗೆ ಸಹಕ–ರಿಸಬೇಕೆಂದು ಸೂಚನೆ ನೀಡಲಾಗಿದೆ. ಆಕಾಂಕ್ಷಿಗಳಪಟ್ಟಿ ಬಳಹ ಇದೆ ಆತ್ಮೀಯರಿಗೆ ಸಿಗಬೇಕೆಂಬುವ ನಿರ್ಧಾರ ನಮ್ಮ ಕೈಯಲಿಲ್ಲ ಅದು ಹೈಕಮಾಂಡ್ ಗೆ ಬಿಟ್ಟ ವಿಚಾರ ಎಂದು ಹೇಳಿದರು.

ಜಿಲ್ಲಾದ್ಯಂತ ಬಂಡಾಯ ಇಲ್ಲ, ಕೆಲವೊಂದು ಕ್ಷೇತ್ರದಲ್ಲಿ ಇದೆ. ಎಲ್ಲವನ್ನು ಸರಿ ಮಾಡಲಾಗುವುದು. ಎರಡನೇಯ ಪಟ್ಟಿ ಬಿಡುಗಡೆ ಮಾಡಲಾಗಿದೆ. ಶೀಘ್ರವೇ ಮೂರನೇಯ ಪಟ್ಟಿ ಪ್ರಕಟ ಮಾಡಲಾಗುವುದು.

ನಾಲ್ಕನೆಯ ಪಟ್ಟಿ ಆದರೂ ಆಗಬಹುದು. ಅಭ್ಯರ್ಥಿಗಳ ಆಯ್ಕೆಯಲ್ಲಿ ಯಾವುದೇ ಗೊಂದಲ ಇಲ್ಲ.. ಅಳೆದು ತೂಗಿ ಪ್ರಭಾವಿ ಅಭ್ಯರ್ಥಿಯನ್ನು ಅಖಾಡಕ್ಕೆ ಇಳಿಸುತ್ತಾರೆ ಎಂದ ಅವರು, ನಮ್ಮ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರು ಸ್ಟಾರ್ ನೇ ಎಂದರು.

ಮೋದಿ ಮೇಲಿಂದ ಮೇಲೆ ರಾಜ್ಯಕ್ಕೆ ಬರುತ್ತಿದ್ದಾರೆ ಇದರಿಂದ ನಿಮ್ಮ ಪಕ್ಷಕ್ಕೆ ಹಿನ್ನಡೆಯಾಗಬಹುದಾ ಎಂದ ಮಾದ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಪ್ರಧಾನಿ ಮೋದಿ ಅವರು ರಾಜ್ಯಕ್ಕೆ ಬಂದರೆ ಬರಲ್ಲಿ, ಅವರ ಪಕ್ಷದ ಪ್ರಚಾರಕ್ಕೆ ಬರುತ್ತಾರೆ. ಕಾಂಗ್ರೆಸ್ ನಾಯಕರು ತಮ್ಮ ಕ್ಷೇತ್ರದಲ್ಲಿ ಕೆಲಸಗಳ ಆಧಾರದ ಮೇಲೆ ಗೆಲುವು ಸಾಧಿಸುತ್ತಾರೆ. ಮೋದಿ ಆಗಮನದಿಂದ ರಾಜ್ಯದಲ್ಲಿ ಯಾವುದೇ ರೀತಿ ಬದಲಾವಣೆ ಆಗಲು ಸಾಧ್ಯವಿಲ್ಲ ಎಂದರು.

## ಹಾಫ ಪಿಚ್ ಕ್ರಿಕೆಟ್ ಪಂದ್ಯಾವಳಿ



ಹುಕ್ಕೇರಿ : ತಾಲೂಕಿನ ಗುಡಸ ಗ್ರಾಮದಲ್ಲಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರವರ 132ನೇ ಜಯಂತೋತ್ಸವ ನಿಮಿತ್ಯವಾಗಿ ಹಾಫ ಪಿಚ್ ಕ್ರಿಕೆಟ್ ಪಂದ್ಯಾವಳಿಯನ್ನು ಏರ್ಪಡಿಸಲಾಗಿ–ತ್ತು.

ಈಸಂದರ್ಭದಲ್ಲಿ ಉದ್ಘಾಟಕರಾಗಿ ಆಗಮಿಸಿದ ಶ್ರೀ ಸುರೇಶ ಅಣ್ಣಾ ತಳವಾರ್ ಎಸ್ ಸಿ/ ಎಸ್ ಟಿ ದೌರ್ಜನ್ಯ ತಡೆ ಸಮಿತಿ ಸದಸ್ಯರು ಬೆಳಗಾವಿ ರವರು ಮಾತನಾಡಿ ಎಲ್ಲ ಕ್ರಿಕೆಟ್ ಪಟುಗಳು ಸೌಹಾರ್ದತೆಯಿಂದ ಆಟವನ್ನು ಆಡಬೇಕೆಂದು ಕ್ರಿಕೆಟ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.

# ಬಾಲಚಂದ್ರ ಜಾರಕಿಹೊಳಿ ಅವರನ್ನು ಲಕ್ಷ ಮತಗಳಿಂದ ಆಯ್ಕೆ ಮಾಡಿ: ಸರ್ವೋತ್ತಮ ಜಾರಕಿಹೊಳಿ



ಗೋಕಾಕ: ಕಳೆದ ಎರಡು ದಶಕದಿಂದ ಅರಭಾವಿ ಕ್ಷೇತ್ರದ ಶಾಸಕರಾಗಿ, ಆ ಭಾಗದ ಜನರ ಆಶೋತ್ತರಗಳಿಗೆ ಸದಾ ಸ್ಪಂದಿಸುತ್ತಿರುವ ಬಾಲಚಂದ್ರ ಜಾರಕಿಹೊಳಿ ಅವರನ್ನು ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಗೆಲ್ಲಿಸಿಕೊಡುವ ಸಂಕಲ್ಪವನ್ನು ಕಾರ್ಯಕರ್ತರು ಮಾಡುವಂತೆ ಯುವ ಧುರೀಣ ಸರ್ವೋತ್ತಮ ಜಾರಕಿಹೊಳಿ ಹೇಳಿದರು.

ಅರಭಾವಿ ಕ್ಷೇತ್ರದ ಹಳ್ಳೂರ, ಮೆಳವಂಕಿ, ಕೌಜಲಗಿ ಮತ್ತು ವಡೇರಹಟ್ಟಿ ಜಿಲ್ಲಾ ಪಂಚಾಯತ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಜರುಗಿದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿ, ಬಾಲಚಂದ್ರ ಜಾರಕಿಹೊಳಿ ಅವರ ಜನಪರ ಹಾಗೂ ರೈತಪರ ಕೆಲಸಗಳನ್ನು ಮನಗಂಡು ಬಿಜೆಪಿಗೆ ಮತ ನೀಡಿ ಅವರನ್ನು ಆಯ್ಕೆ ಮಾಡುವಂತೆ ಕೋರಿದರು.

ರಾಜ್ಯದಲ್ಲಿಯೇ ಅರಭಾವಿ ಮತಕ್ಷೇತ್ರವನ್ನು ಇತರರು ನೋಡುವಂತೆ ಈ ಬಾರಿ ಚುನಾವಣೆಯಲ್ಲಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸಬೇಕು.

ಕಾರ್ಯಕರ್ತರು ತಮ್ಮಲ್ಲಿನ ಸ್ಥಾನಿಕ ಕೆಲ ಮನಸ್ತಾಪಗಳನ್ನು ಮರೆತು ಮೇ10 ರಂದು ನಡೆಯುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಲಿರುವ ಬಾಲಚಂದ್ರ ಜಾರಕಿಹೊಳಿ ಅವರಿಗೆ ಹೆಚ್ಚಿನ ಪ್ರಮಾಣದಲ್ಲಿ ಮುನ್ನಡೆ ನೀಡಬೇಕು. ಕನಿಷ್ಠ 1ಲಕ್ಷಕ್ಕೂ ಅಧಿಕ ಮತಗಳ ಲೀಡ್ ನೀಡಿ ಪ್ರಚಂಡ ಬಹುಮತದಿಂದ ಆಯ್ಕೆ ಮಾಡುವಂತೆ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಬಾಲಚಂದ್ರ ಜಾರಕಿಹೊಳಿ ಅವರು ಕ್ಷೇತ್ರದ ಎಲ್ಲ ಸಮುದಾಯ ಗಳನ್ನು ಒಗ್ಗೂಡಿಸಿ ಜಾತ್ಯಾತೀತವಾಗಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ.

ಆಧುನಿಕ ಬಸವಣ್ಣನವ ರಂತೆ ಸಾಮಾಜಿಕ ನ್ಯಾಯದ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಕಷ್ಟದಲ್ಲಿರುವ ಕುಟುಂಬಗಳಿಗೆ ಆಸರೆಯಾಗಿ ನಿಂತಿದ್ದಾರೆ. ರಾಜ್ಯದಲ್ಲಿ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರಲು ಕೇಂದ್ರ ಮತ್ತು ರಾಜ್ಯ ಸರಕಾರದ ಸಾಧನೆಗಳನ್ನು ಮನವರಿಕೆ ಮಾಡಿಕೊಟ್ಟು ಮತದಾರ ಬಂಧುಗಳು ಬಿಜೆಪಿಗೆ ಆಶೀರ್ವಾದ ಮಾಡಲು ಕಾರ್ಯಕರ್ತರು ಮನೆ ಬಾಗಿಲಿಗೆ ತೆರಳಿ ಮನವೊಲಿಸುವ ಕೆಲಸವನ್ನು ಮಾಡುವಂತೆ ಸರ್ವೋತ್ತಮ ಜಾರಕಿಹೊಳಿ ತಿಳಿಸಿದರು.

ಅಧ್ಯಕ್ಷತೆಯನ್ನು ಬಿಜೆಪಿ ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ ವಹಿಸಿದ್ದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುಭಾಸ ಪಾಟೀಲ, ಅರಭಾವಿ ಮಂಡಲ ವಿಸ್ತಾರಕ ವೆಂಕಟೇಶ ಲಾಳೆ, ಅರಭಾವಿ ಮಂಡಲ ಪ್ರಧಾನ ಕಾರ್ಯದರ್ಶಿ ಪರಸಪ್ಪ ಬಬಲಿ, ಜಿಲ್ಲಾ ಮತ್ತು ಮಂಡಲ ಪ್ರಮುಖ ಪದಾಧಿಕಾರಿಗಳು, ಗ್ರಾಪಂ ಸದಸ್ಯರು, ಆಯಾ ಜಿಪಂ ವ್ಯಾಪ್ತಿಯ ಹಲವಾರು ಪ್ರಮುಖರು, ಬಾಲಚಂದ್ರ ಜಾರಕಿಹೊಳಿಯವರ ಹಿತೈಷಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

## ಮತ್ತೆ ಬಂಡಾಯದ ಬೆಂಕಿ ಹೊತ್ತಿಸಿದ ಸೌರಭ್ ಚೋಪ್ರಾ



ಬೆಳಗಾವಿ: ಸವದತ್ತಿ ಮತಕ್ಷೇತ್ರದಲ್ಲಿ ಕಳೆದ ಚುನಾವಣೆಯಲ್ಲಿ ಅಪ್ಪ, ಈ ಚುನಾವಣೆಯಲ್ಲಿ ಮಗನ ಬಂಡಾಯ ಎದುರಾಗಿದೆ. ಸವದತ್ತಿ ಕ್ಷೇತ್ರದ ಕಾಂಗ್ರೆಸ್ಗೆ ಈ ಸಲವೂ ಚೋಪ್ರಾ ಕುಟುಂಬ ತಲೆನೋವಾಗಿ ಪರಿಣಮಿಸಿದೆ.

ಸವದತ್ತಿ ಮತಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದ ಸೌರಭ್ ಚೋಪ್ರಾ ಟಿಕೆಟ್ ವಂಚಿತರಾದ ಹಿನ್ನೆಲೆಯಲ್ಲಿ ಸವದತ್ತಿ ಪಟ್ಟಣದಲ್ಲಿ ಕಾರ್ಯಕರ್ತರ ಸಭೆ ನಡೆಸಿದ್ದಾರೆ. ಬಳಿಕ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ನಿರ್ಧಾರವನ್ನು ಪ್ರಕಟಿಸಿದ್ದಾರೆ. ಕಾರ್ಯಕರ್ತರ ಒತ್ತಡಕ್ಕೆ ಮಣಿದು ಸ್ಪರ್ಧೆ ಮಾಡುತ್ತಿದ್ದೇನೆ ಎನ್ನುವ ಮೂಲಕ ಸವದತ್ತಿ ಕ್ಷೇತ್ರದಲ್ಲಿ ಮತ್ತೊಮ್ಮೆ ಬಂಡಾಯದ ಬೆಂಕಿಯನ್ನು ಸೌರಭ್ ಚೋಪ್ರಾ ಹೊತ್ತಿಸಿದ್ದಾರೆ.

ಕಾಂಗ್ರೆಸ್ ನಾಯಕರು ಈ ಚುನಾವಣೆಗೆ ನನಗೆ ಟಿಕೆಟ್ ನೀಡುವ ವಿಶ್ವಾಸ ಹೊಂದಿದ್ದೆ. ಸವದತ್ತಿ ಕ್ಷೇತ್ರದ ಜನರ ಭಾವನೆಗಳಿಗೆ ಸ್ಪಂದಿಸುವುದು ನನ್ನ ಕರ್ತವ್ಯ. ಅವರ ಆಶಯದಂತೆ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯುವ ನಿರ್ಧಾರ ಮಾಡಿದ್ದೇನೆ ಎಂದಿದ್ದಾರೆ.

2013 ಹಾಗೂ 2018 ರಲ್ಲಿ ನಮ್ಮ ತಂದೆಗೆ ಕಾಂಗ್ರೆಸ್ ಟಿಕೆಟ್ ಕೈ ತಪ್ಪಿತ್ತು. ಈ ಕಾರಣ–ಕ್ಕೆ 2023ರಲ್ಲಿ ನನಗೆ ಸವದತ್ತಿ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಸಿಗುವ ನಿರೀಕ್ಷೆ ಇತ್ತು. ಆದರೆ ಪಕ್ಷದ ಮುಖಂಡರು ನನಗೆ ಟಿಕೆಟ್ ನೀಡಲಿಲ್ಲ. ಕಾಂಗ್ರೆಸ್ ನಾಯಕರ ನಿರ್ಧಾರ ಬೆಂಬಲಿಗರಲ್ಲಿ ಅಸಮಾಧಾನ ಮೂಡಿಸಿದೆ. ನಮ್ಮ ಕ್ಷೇತ್ರದಲ್ಲಿರುವ ಸಣ್ಣ ಮಗುವೂ ಸಹ ಚೋಪ್ರಾಗೆ ಟಿಕೆಟ್ ಕೊಟ್ಟರೆ ಕಾಂಗ್ರೆಸ್ ಗೆಲ್ಲಲಿದೆ ಎಂದು ಹೇಳುತ್ತದೆ. ಟಿಕೆಟ್ಗೆ ಅರ್ಜಿ ಸಲ್ಲಿಸುವ ಮುನ್ನ ನಮ್ಮ ನಾಯಕರು ಮೂರು ಷರತ್ತು ಹಾಕಿದ್ದರು. ಸರ್ವೇನಲ್ಲಿ ಹೆಸರಿರಬೇಕು, ಯುವಕರಾಗಿರಬೇಕು, ಕಳೆದ ಚುನಾವಣೆಯಲ್ಲಿ 10 ಸಾವಿರ ಮತಗಳ ಅಂತರದೊಳಗೆ ಸೋತಿದ್ದವರಿಗೆ ಆದ್ಯತೆ ನೀಡುತ್ತೇವೆ ಎಂದಿದ್ದರು. ಕಾಂಗ್ರೆಸ್ ಟಿಕೆಟ್ಗೆ ಅರ್ಜಿ ಸಲ್ಲಿಸಿದವರಲ್ಲಿ ನಾನೇ ಅತ್ಯಂತ ಕಿರಿಯವನಾಗಿದ್ದೇನೆ. ಯುವಕರ ಕೋಟಾದಲ್ಲಾದರೂ ನನಗೆ ಸವದತ್ತಿ ಕಾಂಗ್ರೆಸ್ ಟಿಕೆಟ್ ಸಿಗಬೇಕಿತ್ತು. ಸರ್ವೇನಲ್ಲಿ ನನ್ನ ಹೆಸರಿದೆ ಆದರೂ ನನಗೆ ಟಿಕೆಟ್ ಸಿಗಲಿಲ್ಲ. ಎಲ್ಲಾ ಅರ್ಹತೆಗಳೂ ನನ್ನಲ್ಲಿದ್ದರೂ ಸಹ ನನ್ನನ್ನು ಪರಿಗಣಿಸಲಿಲ್ಲ. ಈ ಕಾರಣದಿಂದ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧೆ ಅನಿವಾರ್ಯ ಎಂಬ ನಿರ್ಧಾರ ಹೊರಹಾಕಿದ್ದಾರೆ.

## ರಾಯಬಾಗ: ಕೆಎಸ್ಆರ್ಟಿಸಿ ಬಸ್ ಹರಿದು 2 ವರ್ಷದ ಮಗು ಸಾವು

ಬೆಳಗಾವಿ: ಎರಡು ವರ್ಷದ ಮಗುವಿನ ಮೇಲೆ ಸರ್ಕಾರಿ ಬಸ್ ಒಂದು ಹರಿದು ಸ್ಥಳದಲ್ಲೇ ಮಗು ಮೃತಪಟ್ಟಿರುವ ಘಟನೆ ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಪರಮಾನಂದವಾಡಿ ಗ್ರಾಮದಲ್ಲಿ ಈ ಘಟನೆ ಸಂಭವಿಸಿದೆ.

ಮೃತ ಮಗುವನ್ನು ಗ್ರಾಮದ ಶ್ಲೋಕ ಅಶೋಕ ತುಳಸಿಗೇರಿ (2) ಎಂದು ಗುರುತಿಸಲಾಗಿದೆ. ಪರಮಾನಂದವಾಡಿಯಿಂದ ರಾಯಬಾಗ ಪಟ್ಟಣಕ್ಕೆ ತೆರಳುತ್ತಿದ್ದ ಬಸ್ ಇದಾಗಿದ್ದು, ಮಗು ರಸ್ತೆ ದಾಟುವಾಗ ಈ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಚಾಲಕನ ನಿರ್ಲಕ್ಷ್ಯವೇ ಅಪಘಾತಕ್ಕೆ ಕಾರಣ ಎಂದು ಆರೋಪಿಸಿ ಸ್ಥಳೀಯರು ಸರ್ಕಾರಿ ಬಸ್ಸಿನ ಗಾಜುಗಳನ್ನು ಪುಡಿಪುಡಿ ಮಾಡಿ ತಮ್ಮ ಆಕ್ರೋಶವನ್ನು ಹೊರಹಾಕಿದ್ದಾರೆ. ಗ್ರಾಮದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗುತ್ತಿದ್ದಂತೆ ಸ್ಥಳಕ್ಕೆ ಕುಡಚಿ ಪೊಲೀಸರು ಆಗಮಿಸಿ ಪ್ರತಿಭಟನಕಾರರನ್ನು ಸಮಾಧಾನಪಡಿಸಿದರು. ಅಪಘಾತ ಸಂಭವಿಸುತ್ತಿದ್ದಂತೆ ಚಾಲಕ ಅಲ್ಲಿಂದ ಪರಾರಿಯಾಗಿದ್ದು ಈ ಕುರಿತು ಕುಡಚಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಉಲ್ಬಣಗೊಂಡ ಥೈರಾಯ್ಡ ಗಂಟಿಗೆ ಯಶಸ್ವಿ ಶಸ್ತ್ರಚಿಕಿತ್ಸೆ



ಬೆಳಗಾವಿ: ಗಂಟಲು ನೋವು,ಊ–ತ, ನುಂಗಲು ತೊಂದರೆಯ ಸಮಸ್ಯೆಯೊಂದಿಗೆವಿವಿಧ ಆಸ್ಪತ್ರೆಗಳಿಗೆ ಭೇಟಿ ನೀಡಿದ 49 ವರ್ಷದ ಮಹಿಳೆಗೆ ನಮ್ಮಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ಹೆಮಿಥ–ೈರೊಡಕ್ಟಮಿ (ಎಡಗಡೆಯ) ಶಸ್ತ್ರಚಿಕಿತ್ಸೆಯ ಮೂಲಕ ಯಶಸ್ವಿಯಾಗಿ ಚಿಕಿತ್ಸೆ ನೀಡಲಾಗಿದೆ.

ಮೂಲತಃ ಖಾನಾಪುರ ತಾಲೂಕಿನ ರಹವಾಸಿಯಾದ ಮಹಿಳೆಯು ಕಳೆದ 20 ವರ್ಷಗಳಿಂದ ಗಂಟಲಿನ ಸಮೀಪ ಒಂದು ಸಣ್ಣಗಂಟಿನಾಕಾರದಲ್ಲಿದ್ದ ಥೈರಾಯ್ಡ ಸಮಸ್ಯೆಯು ಕಳೆದ 2ರಿಂದ 3 ವರ್ಷಗಳಲ್ಲಿ ಉಲ್ಬಣಗೊಂಡು ರೋಗಿಯ ನುಂಗಲು, ಉಸಿರಾಟದ ತೊಂದರೆ ಸಮಸ್ಯೆಯನ್ನು ಎದು–ರಿಸಬೇಕಾಯಿತು.

ಈ ನಡುವೆ ಮಹಿಳೆಯು ಅತಿರಕ್ತದೊತ್ತಡ, ಮಧುಮೇಹ ಸಮಸ್ಯೆಯು ಮೈಗೂಡಿತು.

ಇದರಿಂದ ಬಳಲಿದ್ದ ಮಹಿಳೆಯು ನಮ್ಮಆಸ್ಪತ್ರೆಗೆ ಭೇಟಿ ನೀಡಿದಾಗ ಚಿಂತಾಜನಕ ಸ್ಥಿತಿಯಲ್ಲಿದ್ದಳು. ನಂತರ ನಮ್ಮಆಸ್ಪತ್ರೆಯಲ್ಲಿ ನರೆಡಿಯಾಲಾಜಿ ವಿಭಾಗದಲ್ಲಿ ಡಾ. ನಾಗರಾಜ ಪಿ ಅವರಿಂದ ಮಹಿಳೆಗೆ ಸ್ಕ್ಯಾನ ಮಾಡಲಾಗಿ ಅದರಲ್ಲಿ ಸುಮಾರು 11 ಸೆ ಮಿ ಸುತ್ತಳತೆಯ ಥೈರಾಯ್ಡಗಂಟು ಆಕೆಯಧ್ವನಿ ಪೆಟ್ಟಿಗೆಯನ್ನು ಅಂಟಿ–ಕೊಂಡಿರುವದು ಪತ್ತೆಯಾಯಿತು.

ಇದರಿಂದ ಮಹಿಳೆಗೆ ಅರವಳಿಕೆ ಯನ್ನು ನೀಡುವದೂ ಕೂಡ ಒಂದು ಪ್ರಶ್ನಾರ್ಥಕ ವಾಗಿತ್ತು.

ಆದರೆ ಈ ಸಮಸ್ಯೆ ಗಳನ್ನು ಸವಾಲಾಗಿ ಸ್ವೀಕರಿಸುವ ಮೂಲಕ ಖ್ಯಾತ ಶಸ್ತ್ರಚಿಕಿತ್ಸಜ್ಞ ಡಾ.ಅಜಯ ಕಾಳೆ, ಅರವಳಿಕೆ ವಿಭಾಗದ ಮುಖ್ಯಸ್ಥರಾದ ಡಾ. ಆರ್ ಜಿ ನೆಲವಿಗಿ, ಡಾ.ದಿವೇಕರ, ಡಾ. ಸುರೇಶ ಇವರ ಸಹಯೋಗದಲ್ಲಿ, ಶಸ್ತ್ರಚಿಕಿತ್ಸೆಯನ್ನು ಯಶಸ್ವಿ ಯಾಗಿ ಪೂರ್ಣ ಗೊಳಿಸಲಾಗಿದೆ ಹಾಗೂ ರೋಗಿಯು ಈಗ ಸಂಪೂರ್ಣ ಗುಣಮುಖಳಾಗಿದ್ದಾಳೆ ಎಂದು ಶಸ್ತ್ರಚಿಕಿತ್ಸೆ ವಿಭಾಗದ ಹೆಸರಾಂತ ವೈದ್ಯರಾದ ಡಾ. ಅಕ್ಷಯ ಮೆಟಗುಡ್ ತಿಳಿಸಿದ್ದಾರೆ.

ಇಂತಹಕ್ಲಿಷ್ಟ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಿದ ವೈದ್ಯರನ್ನು ಶಸ್ತ್ರಚಿಕಿತ್ಸೆಯ ವಿಬಾಗದ ಮುಖ್ಯಸ್ಥರಾದ ಡಾ.ಎ ಕೆರಡ್ಡೇರ ಅಭಿನಂದಿಸಿದ್ದಾರೆ.

ಕೆ ಎಲ್ ಇ ಶತಮಾನೋತ್ಸವ ಚಾ–ರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು ಮಾತನಾಡುತ್ತ ಮಹಿಳೆಯರಲ್ಲಿ ಗರ್ಭಾವಸ್ಥೆ ಮತ್ತು ಋತುಭಂದ ಸಮಯದಲ್ಲಿ ಹಾರ್ಮೋನು ಗಳಲ್ಲಿ ಉಂಟಾಗ ಬಹುದಾದ ರಾಸಾಯನಿಕ ಬದಲಾವಣೆಗಳಿಂದ ಥೈರಾಯ್ಡನಂತಹ ಸಮಸ್ಯೆಗಳು ಉಲ್ಬಣಗೊಳ್ಳುತ್ತವೆ. ಆದರೆ ಸಕಾಲಕ್ಕೆ ಚಿಕಿತ್ಸೆ ಪಡೆದರೆ ಇಂತಹ ಶಸ್ತ್ರಚಿಕಿತ್ಸೆಗಳಿಂದ ದೂರವಿರ ಬಹುದಾಗಿದೆ ಎಂದು ತಿಳುವಳಿಕೆ ನೀಡಿ& ವೈದ್ಯರಿಗೆ ಅಭಿನಂದಿಸಿದರು.

ಈ ಸಂದರ್ಭದಲ್ಲಿಂ ಯುಎಸ್ಎಮ್ ಕೆ ಎಲ್ ಇ ಯ ನಿರ್ದೇಶಕರಾದ ಡಾ. ಹೆಚ ಬಿ ರಾಜಶೇಖರ ಅವರು ಹಾಗೂ ಕೆ ಎಲ್ ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ. ಪ್ರಭಾಕರಕೋರೆ ಅವರು ವೈದ್ಯರತಂಡವನ್ನು ಶ್ಲಾಘಿಸಿದ್ದಾರೆ.

# ಮಹಿಳೆಯರ ಆರೋಗ್ಯ: ಹೊಸ ದೃಷ್ಟಿಕೋನ ಕಾರ್ಯಾಗಾರ




ಬೆಳಗಾವಿ: ಭಾರತಕ್ಕೆ ಸ್ವಾತಂತ್ರ್ಯ ಸಿಕ್ಕು 75 ವರ್ಷ ಕಳೆದರೂ ಕೂಡ ಮಹಿಳೆಯರಲ್ಲಿ ರಕ್ತ ಹೀನ ಹಾಗೂ ಹೆರಿಗೆ ಸಂದರ್ಭದಲ್ಲಿ ಮರಣ ಆಗುತ್ತಿದ್ದು, ಅದನ್ನು ತಡೆಗಟ್ಟಲು ಈಗಿರುವ ಕ್ರಮಗಳ ಜೊತೆಗೆ ಇನ್ನೂ ಹೆಚ್ಚಾಗಿ ಕಾರ್ಯ ನಿರ್ವಹಿಸಬೇಕಾಗುತ್ತದೆ. ಅದರಲ್ಲಿಯೂ ಸರ್ವೈಕಲ್ ಕ್ಯಾನ್ಸರನಿಂದ ಭಾರತದಲ್ಲಿಅತೀ ಹೆಚ್ಚು ಮಹಿಳೆಯರ ಸಾವು ಅತ್ಯಂತ ಕಳವಳಕಾರಿ ಎಚಿದು ಅಹ್ಮದಾಬಾದ ಹಿರಿಯ ಸ್ತ್ರೀ ರೋಗ ಮತ್ತು ಹೆರಿಗೆ ತಜ್ಞವೈದ್ಯರಾದ ಡಾ.ಅಲ್ಪೇಶಗಾಂಧಿ ಅವರಿಂದಿಲ್ಲಿ ಕಳವಳ ವ್ಯಕ್ತಪಡಿಸಿದರು.

ಜವಾಹರಲಾಲ ನೆಹರು ವೈದ್ಯಕೀಯ ಮಹಾ ವಿದ್ಯಾಲಯದ ವೈಜ್ಞಾನಿಕ ಸಂಸ್ಥೆಯ 41ನೇ ಮುಂದುವರೆದ ವೈದ್ಯಕೀಯ ಶಿಕ್ಷಣ (ಸಿಎಂಇ) ದಿ. 8 ಏಪ್ರೀಲ್ 2023ರಂದು ಏರ್ಪಡಿಸಲಾದ" ಮಹಿಳೆಯರ ಆರೋಗ್ಯ: ಹೊಸ ದೃಷ್ಟಿಕೋನ" ಎಂಬ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರಲ್ಲಿ ಹೆಚ್ಚಾಗಿ ಸ್ತನ ಕ್ಯಾನ್ಸರ ಹಾಗೂ ಸರ್ವೈಕಲ್ ಕ್ಯಾನ್ಸರ ಸಾಮಾನ್ಯವಾಗಿ ಕಂಡು ಬರುತ್ತಿವೆ.

ಅದರಲ್ಲಿಯೂ ಮಹಿಳೆಯರು ಚಿಕಿತ್ಸೆ ಪಡೆಯುವಲ್ಲಿ ವಿಳಂಭ ಮಾಡುತ್ತಿರುವದು ಸಾವು ಹೆಚ್ಚದಾಗಲು ಕಾರಣ. ಸ್ತನ ಕ್ಯಾನ್ಸರನ್ನುಗುಣ ಪಡಿಸಬಹುದು. ಅದು ಬಹುಬೇಗ ಕಂಡು ಬರುತ್ತದೆ. ಆದರೆ ಮಹಿಳೆಯರಲ್ಲಿ ಸರ್ವೈಕಲ್ಕ್ಯಾನ್ಸರ ಪತ್ತೆ ಮಾಡಲು ವಿಳಂಬವಾಗುತ್ತಿರುವ ಕಾರಣ ಸಾವು ಅಧಿಕಗೊಳ್ಳುತ್ತಿವೆ. ಸರಿಯಾದ ಚಿಕಿತ್ಸೆ ನೀಡಿ ಸಾವು ಕಡಿಮೆ ಮಾಡಲು ಕಾರ್ಯಚಟುವಟಿಕೆ ತೀವ್ರಗೊಳಿಸಬೇಕಾಗಿದೆ ಎಂದುಸಲಹೆವಿತ್ತರು.

ಸ್ತ್ರೀ ತಮ್ಮ ಬಾಲ್ಯದಿಂದಲೂ ಅನೇಕ ಆರೋಗ್ಯ ಸಮಸ್ಯೆಗಳನ್ನು ಎದು–ರಿಸುತ್ತಾರೆ, ನಮ್ಮಜನಸಂಖ್ಯೆಯ ಅರ್ಧದಷ್ಟು ಸ್ತ್ರೀ ಇದ್ದರೂಕೂಡ, ಲಿಂಗ ಅಸಮಾನತೆಗಳಿಂದಾಗಿ ನಿರ್ಲಕ್ಷಿಸಲ್ಪಟ್ಟು ಸಮಯಕ್ಕೆ ಸರಿಯಾಗಿ ಸಲಹೆ, ಚಿಕಿತ್ಸೆ ಪಡೆಯುವುದಿಲ್ಲ. ಆದ–ರಿಂದ ವಿವಿಧಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಾರೆ ಹದಿಹರೆಯದವರು, ಲೈಂಗಿಕ ಸಮಸ್ಯೆಗಳು, ಬಂಜೆತನ, ದೀರ್ಘಕಾಲದ/ ಅನಿಯಮಿತ ಮುಟ್ಟಿನ ಚಕ್ರಗಳು, ಅಧಿಕರಕ್ತಸ್ರಾವ, ಪಾಲಿಸಿಸ್ಟಿಕ್ ಓವೇರಿಯನ್ ಸಿಸ್ಟ್ ಸಿಂಡ್ರೋಮ್ನಿಂದ ಬಳಲುತ್ತಿರುವವ–ರಿಗೆ ಸರಿಯಾದಚಿಕಿತ್ಸೆಯೊಂದಿಗೆ ಆಪ್ತಸಮಾಲೋಚನೆ ನಡೆಸಬೇಕು ಎಚಿದು ಕರೆ ನೀಡಿದರು.

ಕೆಎಲ್ಇ ಅಕಾಡೆಮಿಕ್ ಆಫ್ ಹೈಯರಎಜ್ಯುಕೇಶನ್ ಆ್ಯಂಡ–ರಿಸರ್ಚನ (ಕಾಹೆರ)ನ ಉಪಕುಲಪತಿ ಡಾ. ನಿತಿನಗಂಗಾಣೆ ಅವರು ಮಾತನಾಡಿ, ಬೆಳಗಾವಿ ಸುತ್ತಮುತ್ತಲಿನ ಪ್ರದೇಶದಗರ್ಭಿಣಿ ಮಹಿಳೆಯರ ಆರೋಗ್ಯ ರಕ್ಷಣೆ ಕಾರ್ಯಕ್ಕೆ ಸದಾ ಕೆಎಲ್ಇ ಸಂಸ್ಥೆಯ ಡಾ.ಪ್ರಭಾಕರಕೋರೆ ಆಸ್ಪತ್ರೆ ಮುಂದಿದ್ದು, ಎಲ್ಲರೀತಿಯ ಆರೋಗ್ಯ ಸೇವೆ ಕಲ್ಪಿಸಲಾಗುತ್ತಿದೆ. ಸಾಮಾನ್ಯವಾಗಿ ಮಹಿಳೆಯರು ಚಿಕಿತ್ಸೆಗೆ ಹಿಂಜ–ರಿಯುತ್ತಾರೆ. ಆರೋಗ್ಯ ಸಮಸ್ಯೆಯನ್ನು ಹೇಳಿಕೊಳ್ಳಲಾಗದೇ ತಡವಾಗಿಆಸ್ಪತ್ರೆಗೆ ಬರುತ್ತಾರೆ.

ಇದರಿಂದ ರೋಗಪತ್ತೆ ವಿಳಂಬವಾಗುತ್ತದೆ. ಅದರಲ್ಲಿಯೂಕ್ಯಾನ್ಸರ ಇದ್ದರೆ ತೊಂದರೆ. ಆದ್ದರಿಂದ ಮಹಿಳೆಯರು ಯಾವುದೇ ಆರೋಗ್ಯ ಸಮಸ್ಯೆಇದ್ದರೆ ವೈದ್ಯರನ್ನು ಭೇಟಿಯಾಗಿ ಸಲಹೆ ಪಡೆದುಕೊಳ್ಳಬೇಕು.ಕ್ಯಾನ್ಸರ ಗುಣಮುಖ ಪಡಿಸುವರೋಗ. ಮಹಿಳೆಯರ ಮೇಲೆ ಸಾಮಾಜಿ–ಕ ಜವಾದ್ಬಾರಿ ಅತ್ಯಧಿಕವಾಗಿದ್ದು, ಮಹಿಳೆಯರು ಆರೋಗ್ಯವಾಗಿದ್ದರೆ ಸವ 'ರಾಜವೂಆರೋಗ್ಯಯುತವಾಗಿರುತ್ತದೆ–ಎಂದು ತಿಳಿಸಿದರು.

ಜವಾಹರಲಾಲ ನೆಹರು ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯರಾದಡಾ. ಎನ್ಎಸ್ ಮಹಾಂತಶೆಟ್ಟಿ ಮಾತನಾಡಿದರು. ವೇದಿಕೆಯ ಮೇಲೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದಡಾ. (ಕರ್ನಲ್) ಎಂ ದಯಾನಂದ, ಡಾ.ವಿ ಎಂ ಪಟ್ಟಣಶೆಟ್ಟಿ, ಸ್ತ್ರೀರೋಗ ಮತ್ತು ಹೆ–ರಿಗೆ ವಿಭಾಗದ ಮುಖ್ಯಸ್ಥರಾದ ಡಾ.ಅನಿತಾದಲಾಲ, ಡಾ.ಎಂ ವಿ ಜಾಲಿ, ಡಾ.ಶಾಂತಲಾ ಹೆರಲೇಕರ ಉಪಸ್ಥಿತ–ರಿದ್ದರು. ಡಾ. ಸ್ವಪ್ನೀಲ್ ಪಟ್ಟಣಶೆಟ್ಟಿ ವಂದಿಸಿದರು.

## ಕಾರಂಜಿಮಠದ ಶ್ರೀ ಮ. ನಿ. ಪ್ರ ಗುರುಸಿದ್ದ ಮಹಾಸ್ವಾಮಿಗಳವರಿಗೆ ಹುಟ್ಟು ಹಬ್ಬದ ಶುಭಾಶಯ ಕೋರಿದ ಸುರೇಶಯಾದವ



ಬೆಳಗಾವಿ: ಗೆಳೆಯರ ಬಳಗದ ವತಿಯಿಂದ ನಮ್ಮೆಲ್ಲರ ಅಧ್ಯಾತ್ಮಿಕ ದಿವ್ಯಚೇತನ ಪರಮ ಪೂಜ್ಯ ಬೆಳಗಾವಿ ಶಿವಬಸವನಗರದ ಕಾರಂಜಿಮಠದ ಶ್ರೀ ಮ. ನಿ. ಪ್ರ ಗುರುಸಿದ್ದ ಮಹಾಸ್ವಾಮಿಗಳವರಿಗೆ ಹುಟ್ಟು ಹಬ್ಬದ ಶುಭಾಶಯಗಳನ್ನು ಕೋರಿ ಸುರೇಶಯಾದವ ಅವರು ಉದಯಿಸುತ್ತಿರುವ ಸೂರ್ಯನು ನಿಮ್ಮನ್ನು ಆಶೀರ್ವದಿಸಲಿ. ಸುಂದರ ಹೂವು ಸುಗಂಧವನ್ನು ನೀಡಲಿ ಎಂದು ಮಾತನಾಡಿದರು. ಹಾಗೆ ಮುಕ್ತರ್ ಪಠಾಣ ಅವರು ನಮ್ಮ ಬಾಳು ಬೆಳಗಲು ನೀವೇ ಸ್ಫೂರ್ತಿ ಇರುಳಗೆ ಹಗಲಾಗಿ, ಕತ್ತಲಿಗೆ ದೀಪವಾಗಿ, ಬಳ್ಳಿಗೆ ಆಸರೆಯಾಗಿ ನಮ್ಮೆಲ್ಲರ ಬಾಳು ಬೆಳಗಿದ ನಿಮ್ಮಜೀವನ ಹಸನಾಗಿರಲಿ ಎಂದು ಪೂಜ್ಯರಿಗೆ ಶುಭಕೋರಿದರು.

## ಶ್ರೀರೇಣುಕಾದೇವಿಜಾತ್ರಾಮಹೋತ್ಸವ



ಗೋಕಾಕ: ನಗರದ ಉಪ್ಪಾರ ಓಣಿಯ ಶ್ರೀ ರೇಣುಕಾದೇವಿಯ ಜಾತ್ರಾ ಮಹೋತ್ಸವವು ದಿ. 10 ರಿಂದ 12ರ ವರೆಗೆ ವಿಜೃಂಭಣೆಯಿಂದ ಜರುಗಲಿದೆ.

ದಿ. 10 ರಂದು ಸಾಯಂಕಾಲ 4 ಗಂಟೆಗೆ ಸುತ್ತಮುತ್ತಲಿನ ದೇವರ ಪಲ್ಲಕ್ಕಿಗಳನ್ನು ಮಂಗಳವಾದ್ಯ ಮೇಳದೊಂದಿಗೆ ಬರಮಾಡಿಕೊಳ್ಳುವುದು. ರಾತ್ರಿ 9 ಗಂಟೆಗೆ ಶ್ರೀ ಕರಣಿ ಮಲಕಾರಿಸಿದ್ದೇಶ್ವರ ಡೊಳ್ಳಿನ ಗಾಯನ ಸಂಘ ಗೋಕಾಕ ಇವರಿಂದ ಅಮೋಘಸಿದ್ದೇಶ್ವರ ಮಾರ್ಗದಲ್ಲಿ, ಶ್ರೀ ಬೀರಲಿಂಗೇಶ್ವರ ಗಾಯನ ಸಂಘ ಬರಗಿ ಇವರಿಂದ ಶ್ರೀ ಮಾಳಿಂಗೇಶ್ವರ ಮಾರ್ಗದಲ್ಲಿ ಡೊಳ್ಳಿನ ಪದಗಳು ಜರುಗುವವು.

ದಿ. 11 ರಂದು ಬೆಳಿಗ್ಗೆ ಶ್ರೀದೇವಿಗೆ ಅಭಿಷೇಕ, ನಂತರ ಸಕಲ ವಾದ್ಯಮೇಳದೊಂದಿಗೆ ಮುತ್ತೈದೆಯರ ಆರತಿ, ಅಂಬಲಿ–ಕೊಡಗಳೊಂದಿಗೆ ಶ್ರೀದೇವಿ ಪಲ್ಲಕ್ಕಿಯ ಮೆರವಣಿಯು ನಗರದ ಪ್ರಮುಖ ಬೀದಿಗಳಲ್ಲಿ ಹಾಯ್ದು ಶ್ರೀದೇವಿ ದೇವಸ್ಥಾನ ತಲುಪುವುದು. ಮಧ್ಯಾಹ್ನ 12 ಗಂಟೆಗೆ ಶ್ರೀದೇವಿಗೆ ಉಡಿ ತುಂಬುವ ಕಾರ್ಯಕ್ರಮ. ನಂತರ ಮಧ್ಯಾಹ್ನ 1 ಗಂಟೆಗೆ ಮಹಾಪ್ರಸಾದ ಜರುಗಲಿದೆ. ಸಾಯಂಕಾಲ 6 ಗಂಟೆಗೆ ಚಿಕ್ಕ ಮಕ್ಕಳಿಂದ ವಿವಿಧ ಸಾಂಸ್ಕೃತಿ–ಕ ಕಾರ್ಯಕ್ರಮಗಳು ಜರುಗಲಿವೆ. ರಾತ್ರಿ 8 ಗಂಟೆಗೆ ಶ್ರೀಫಲಗಳ ಲೀಲಾವು, 9 ಗಂಟೆಗೆ ಪ್ರತೀಕ್ಷಾ ಮೆಲೋಡಿಸ್ ಇವರಿಂದ ರಸಮ–ಂಜರಿ ಕಾರ್ಯಕ್ರಮ ಜರುಗಲಿದೆ.

ದಿ. 12 ರಂದು ಮುಂಜಾನೆ 9 ಗಂಟೆಗೆ ದೇವರ ಪಲ್ಲಕ್ಕಿಗಳನ್ನು ತಮ್ಮ–ತಮ್ಮ ದೇವಸ್ಥಾನಗಳಿಗೆ ಮರಳಿ ಕಳಿಸುವ ಮೂಲಕ ಸಂಪನ್ನಗೊಳ್ಳಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಪಾಲ್ಗೊಳ್ಳಬೇಕೆಂದು ಜಾತ್ರಾ ಕಮೀಟಿಯವರು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಲಕ್ಷ್ಮೀ ಅಕ್ಕಾ ಮಂತ್ರಿ ಪಕ್ಕಾ

### ರಥಕ್ಕೆ ಬಾಳೆಹಣ್ಣು ಸಮರ್ಪಣೆ




ಬೆಳಗಾವಿ: ಬೆಳಗಾವಿ ಜಿಲ್ಲೆ ಖಾನಾಪೂರ ತಾಲೂಕಿನ ಮಲಪ್ರಭಾ ನದೀ ತೀರದ ಚಿಕ್ಕಹಟ್ಟಿಹೊಳಿ ವೀರಭದ್ರೇಶ್ವರ ಜಾತ್ರೆ ಅದ್ದೂರಿಯಾಗಿ ಸಂಭ್ರಮದಿಂದ ಜರುಗಿತು.

ರಥೋತ್ಸವ ಜರುಗುವ ಸಂಭ್ರಮದಲ್ಲಿ ಲಕ್ಷ್ಮೀ ಹೆಬ್ಬಾಳಕರ ತವರೂರು ಅಭಿಮಾನಿ ಬಳಗ ಚಿಕ್ಕಹಟ್ಟಿಹೊಳಿಯ ಅಧ್ಯಕ್ಷರು ಸರ್ವ ಸದಸ್ಯರು ಸೇರಿ ಬಾಳೆಹಣ್ಣಿನ ಮೇಲೆ 'ಲಕ್ಷ್ಮೀ ಅಕ್ಕಾ 2023 ಮಂತ್ರಿ ಪಕ್ಕಾ' ಎಂದು ಬರೆದು 111 ಬಾಳೆ ಹಣ್ಣುಗಳನ್ನು ರಥೋತ್ಸವ ಜರುಗುವ ಸಂಭ್ರಮದಲ್ಲಿ ಭಕ್ತಿಯಿಂದ ಶ್ರೀ ವೀರಭದ್ರೇಶ್ವರನಲ್ಲಿ ಬೇಡಿಕೊಂಡು ಭಕ್ತಿಯಿಂದ ರಥಕ್ಕೆ ಬಾಳೇಹಣ್ಣನ್ನು ಸಮರ್ಪಿಸಿದರು.

ಈ ವೇಳೆ ಲಕ್ಷ್ಮಿ ಹೆಬ್ಬಾಳಕರ ತವರೂರು ಅಭಿಮಾನಿ ಬಳಗದ ಅಧ್ಯಕ್ಷರಾದ ವೀರಭದ್ರ ಸಣ್ಣಕ್ಕಿ, ಜಗದೀಶ ಕಾದ್ರೊಳ್ಳಿ , ಮಂಜುನಾಥ್ ಮಾಸ್ತಮರಡಿ, ಈರಯ್ಯ ಹಾಲಗಿಮರ್ಡಿ, ನಾಗರಾಜ ಸಣ್ಣಕ್ಕಿ, ಶ್ರೀಧರ ಜೈನರ, ಪ್ರಕಾಶ ತಳವಾರ, ಸೇ–ರಿದಂತೆ ಗ್ರಾಮದ ಹಿರಿಯರು ಹಾಜರಿದ್ದರು.

ಕುಕಡೊಳ್ಳಿ, ಎಮ್ ಕೆ ಹುಬ್ಬಳ್ಳಿ, ಪಾರೀಶ್ವಾಡ ಹಿರೆಬಾಗೇವಾಡಿ, ಅರಳಿಕಟ್ಟಿ,ಬಸ್ಸಾಪೂರ, ಸೇ–ರಿದಂತೆ ಜಿಲ್ಲೆಯ ವಿವಿದ ಗ್ರಾಮಗಳ ಭಕ್ತರು ಸೇರಿದಂತೆ ಧಾರವಾಡ, ಬಾಗಲಕೋಟಿ, ಹಾವೇರಿ, ವಿಜಯಪೂರ, ಜಿಲ್ಲೆಗಳಿಂದ ಮತ್ತು ಮಹಾರಾಷ್ಟ್ರ ರಾಜ್ಯದ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

## ಪಾಶ್ಚಾಪುರ ಗ್ರಾಮದಲ್ಲಿ ಮತದಾನ ಜಾಗೃತಿ ಸಭೆ



ಹುಕ್ಕೇರಿ: ಮತದಾರರು ಭಯಮುಕ್ತರಾಗಿ ಆಮಿಷಕ್ಕೆ ಒಳಗಾಗದೆ ಮತದಾನದಲ್ಲಿ ಭಾಗವಹಿಸುವದು ಮತದಾರ ಹಕ್ಕು ಮತ್ತು ಕರ್ತವ್ಯ ಎಂದು ಯಮಕನಮರಡಿ ವಿಧಾನ ಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಬಲರಾಮ ಚವ್ಹಾಣ್ ಹೇಳಿದರು.

ಅವರು ಪಾಶ್ಚಾಪುರ ಗ್ರಾಮದಲ್ಲಿ ಮತದಾನ ಜಾಗೃತಿ ಸಭೆಯಲ್ಲಿ ಮಾತನಾಡಿದರು.

ತಮ್ಮ ವ್ಯಾಪ್ತಿಯಲ್ಲಿ ಮತಗಟ್ಟೆಗೆ ತೆರಳಿ ಮತ ಚಲಾಯಿಸುವ ಕುರಿತು ಜನರಿಗೆ ಅರವು ಮೂಡಿಸಿ ಎಲ್ಲರೂ ಕೂಡಿ ಮತದಾನ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದರು.

ಸಹಾಯಕ ಚುನಾವಣಾಧಿಕಾರಿ ಹಾಗೂ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ವಿಲಾಸರಾಜ್ ಮಾತನಾಡಿ ಈ ಮತದಾನದಲ್ಲಿ 80 ಕ್ಕಿಂತ ವಯಸ್ಕ ಮತದಾರರಿಗೆ ಮನೆಯಿಂದಲೆ ಮತದಾನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ.

ಹೊಸ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೆ ಅವಕಾಶ ಕಲ್ಪಿಸಲಾಗಿದೆ. ಹೆಸರು ಬಿಟ್ಟುಹೋಗಿದ್ದರೆ ಸದುಪಯೋಗ ಪಡಿಸಿಕೊಳ್ಳಬಹುದು ತಿಳಿಸಿದರು. ಯಮಕನಮರಡಿ ಠಾಣೆಯ ಸಿಪಿಐ ರಮೇಶ ಛಾಯಾಗೋಳ ಮಾತನಾಡಿ ಶಾಂತಿಯುತ ಮತದಾನಕ್ಕೆ ಎಲ್ಲ ಅಗತ್ಯ ಸಿದ್ದತೆ ಮಾಡಿಕೊಳ್ಳಲಾಗಿದೆ .ಆಕ್ರಮ ಮದ್ಯಪಾನ ಸಾಗಾಣಿಕೆ, ಸೇರಿದಂತೆ ಆಕ್ರಮ ಚಟುವಟಿಕೆಗಳನ್ನು ಮೇಲೆ ನೀಗಾವಹಿಸಲಾಗಿದೆ .ಕಾನೂನು ಉಲ್ಲಂಘನೆಯಾಗದಂತೆ ಸಾರ್ವಜನಿಕ ಸಹಕಾರ ಅವಶ್ಯವೆಂದರು.

ಪಿಎಸಐ ಮಂಜುನಾಥ ನಾಯ್ಕು, ಪಿಡಿಓ ಎಸ್ ಎಸ್ ಢಂಗ, ಚಂದ್ರು ಗುಡದರಿ, ಮತದಾನಕ್ಕೆ ನಿಯೋಜನೆಯಾದ ವಿವಿಧ ತಂಡಗಳು, ಪೊಲೀಸ್ ಅಧಿಕಾರಿ ಸಿಬ್ಬಂದಿ ಹಾಜರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089